ಸಂಪುಟ: 04 ಸಂಚಿಕೆ: 102 ಪುಟಗಳು: 08 ಮಂಗಳವಾರ 25 ಜೂನ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ನಿಮ್ಮ ಭವಿಷ್ಯವನ್ನು ಬದಲಾಯಿಸಲು ಸಾಧ್ಯವಿಲ್ಲ. ಆದರೆ ನಿಮ್ಮಿಂದ ನಿಮ್ಮ ಹವ್ಯಾಸಗಳನ್ನು ಬದಲಿಸಲು ಸಾಧ್ಯವಿದೆ. ನಿಮ್ಮ ಹವ್ಯಾಸಗಳು ನಿಮ್ಮ ಭವಿಷ್ಯವನ್ನು ಖಂಡಿತ ಬದಲಾಯಿಸುತ್ತವೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಡಿ ಬಾಸ್ ಭೇಟಿ ಬಳಿಕ ವಿನೋದ್ ಪ್ರಭಾಕರ್ ಹೇಳಿಕೆ

**ಎನ್ ಟೈಗರ್ ಅಂದ್ರು**

• ಉದಯವಾಹಿನಿ, ಬೆಂಗಳೂರು

ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ಜೈಲು ಪಾಲಾಗಿದ್ದು ಇಂದು ಅವರನ್ನು ನಟ ವಿನೋದ್ ಪ್ರಭಾಕರ್ ಅವರು ಪರಪ್ಪನ ಅಗ್ರಹಾರ ಜೈಲಿನಲ್ಲಿ ಭೇಟಿಯಾದರು. ನಂತರ ಮಾಧ್ಯಮಗಳೊಂದಿಗೆ ಮಾತನಾಡಿ, ದರ್ಶನ್ ಭೇಟಿಗೆ ಹೋದಾಗ ಸಾಕಷ್ಟು ಮಂಕಾಗಿದ್ದರು ಎಂದು ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದರ್ಶನ್ ಅವರನ್ನು ಭೇಟಿ ಆದಾಗ ಎನ್ ಟೈಗರ್ ಅಂದ್ರು ನನ್ನ ಬಳಿ ಮಾತನಾಡಿದರು ಅಷ್ಟೇ. ಅವರ ಮುಖ ನೋಡಿ ಶೇಕ್ ಹ್ಯಾಂಡ್ ಮಾಡಿ ಬಂದೆ ಎಂದು ಭೇಟಿಯ ಬಳಿಕ ವಿನೋದ್ ಪ್ರಭಾಕರ್ ಅವರು ಹೇಳಿಕೆ ನೀಡಿದರು. ರೇಣುಕಾ ಸ್ವಾಮಿ ಕುಟುಂಬ ಕಣ್ಣೀರಿನಲ್ಲಿ ಕೈ ತೊಳಿತ ಇದೆ ಇತ್ತ ದರ್ಶನ ಕುಟುಂಬದವರು ಕೂಡ ನೋವಿನಲ್ಲಿ ಇದ್ದಾರೆ. ಯಾರಿಗೆ ಸಾಂತ್ವನ ಹೇಳ್ಬೇಕು ಅಂತ ತಿಳಿಯಲಿಲ್ಲ ದರ್ಶನ್ ಬೇಟಿಗೆ ಹೋದಾಗ ಸಾಕಷ್ಟು ಮಂಕಾಗಿದ್ದರು ಎಂದರು.

ರೇಣುಕಾ ಸ್ವಾಮಿ ಅವರ ಆತ್ಮಕ್ಕೆ ಶಾಂತಿ ಸಿಗಬೇಕು ಅವರ ಕುಟುಂಬಕ್ಕೆ, ಅವರ ತಂದೆಯಾಗಲಿ ತಾಯಿಯಾಗಲಿ ಅವರ ಹೆಂಡತಿ ಆಗಿರಬಹುದು, ಎಲ್ಲಾರಿಗೂ ಭಗವಂತ ದುಃಖ ಭರಿಸುವ ಶಕ್ತಿ ಕೊಡಲಿ.ಈ ಒಂದು ಘಟನೆ ಆಗಬಾರದಾಗಿತ್ತು. ದರ್ಶನ್ ಸರ್ ಅವರನ್ನು ಒಟ್ಟಿಗೆ ಮೀಟ್ ಆಗಿದ್ದು 4 ತಿಂಗಳು ಆಗಿತ್ತು. ಘಟನೆ ನಂತರ ಅನ್ನಪೂರ್ಣೇಶ್ವರಿ ಸ್ಟೇಷನ್ ಗೆ ಹತ್ತಿರ ಹೋಗಬೇಕು ಕೂಡ ನಾನು ಪ್ರಯತ್ನ ಮಾಡಿದೆ ಅಲ್ಲೂ ಆಗಲಿಲ್ಲ.



ದರ್ಶನ್ ಪ್ರಕರಣದಲ್ಲಿ ವಿನೋದ್ ಪ್ರಭಾಕರ್ ಅವರು ಯಾವುದೇ ಪ್ರತಿಕ್ರಿಯೆ ನೀಡಿಲ್ಲ ಎಂಬ ವಿಚಾರವಾಗಿ ಮಾತನಾಡಿದ ಅವರು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿ ಸಮಸ್ಯೆ ಬಗೆಹರಿಯೋ ಹಾಗಿದ್ರೆ, ನಾನೇ 1 ಲಕ್ಷ ಪೋಸ್ಟ್ ಹಾಕುತ್ತಿದ್ದೆ. ಆದರೆ ಇಂತಹ ಸಂದರ್ಭದಲ್ಲಿ ಕೂಡ ಈ ರೀತಿ ಮಾತನಾಡುವುದು ಸರಿಯಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

## 17 ನೂತನ ಶಾಸಕರು ಪ್ರಮಾಣವಚನ ಸ್ವೀಕಾರ



• ಉದಯವಾಹಿನಿ, ಬೆಂಗಳೂರು

ವಿಧಾನಸಭೆ ಮತ್ತು ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾದಂತ 17 ನೂತನ ಸದಸ್ಯರು, ಇಂದು ಪ್ರಮಾಣವಚನ ಸ್ವೀಕರಿಸಿದರು. ವಿಧಾನ ಪರಿಷತ್ತಿಗೆ ವಿಧಾನಸಭೆಯಿಂದ ಆಯ್ಕೆಯಾದ ಐವಾನ್ ಡಿಸೋಜಾ, ಕೆ.ಗೋವಿಂದ ರಾಜ್, ಜಗದೇವ ಗುತ್ತೇದಾರ್, ಬಿಲ್ಕೀಸ್ ಬಾನು, ಎನ್ ಎಸ್ ಬೋಸರಾಜು, ಡಾ.ಯತೀಂದ್ರ ಸಿದ್ಧರಾಮಯ್ಯ, ಎ ವಸಂತ ಕುಮಾರ್, ಮೂಳೆ ಮಾರುತಿ ರಾವ್, ಟಿಎನ್ ಜವರಾಯಿ ಗೌಡ, ಸಿಟಿ ರವಿ ಮತ್ತು ಎನ್ ರವಿಕುಮಾರ್ ಪ್ರಮಾಣವಚನ ಸ್ವೀಕರಿಸಿದರು. ಅಲ್ಲದೇ ಪವೀಧರರ ಹಾಗೂ ಶಿಕ್ಷಕರ ಕ್ಷೇತ್ರದಿಂದ ಆಯ್ಕೆಯಾದಂತ ಚಂದ್ರಶೇಖರ ಪಾಟೀಲ್ ಬಸವರಾಜ, ಡಾ.ಧನಂಜಯ್ ಸರ್ಜಿ, ರಾಮೋಜಿಗೌಡ, ಎಸ್.ಎಲ್ ಬೋಜೇಗೌಡ, ಕೆ.ವಿವೇಕಾನಂದ ಮತ್ತು ಡಿ.ಟಿ ಶ್ರೀನಿವಾಸ್ ಅವರು ಸದಸ್ಯರಾಗಿ ಪ್ರಮಾಣವಚನ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಸಚಿವ ಹೆಚ್.ಕೆ ಪಾಟೀಲ್ ಸೇರಿದಂತೆ ಇತರರು ಹಾಜರಿದ್ದರು.

## ಧರ್ಮಸ್ಥಳಕ್ಕೆ ಭೇಟಿ ನೀಡಿ ದರ್ಶನ ಪಡೆದ ಯಡಿಯೂರಪ್ಪ

• ಉದಯವಾಹಿನಿ, ಮಂಗಳೂರು

ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಶ್ರೀಕ್ಷೇತ್ರ ಧರ್ಮಸ್ಥಕ್ಕೆ ಭೇಟಿ ನೀಡಿದ್ದಾರೆ. ಧರ್ಮಸ್ಥಳದಲ್ಲಿ ಶ್ರೀಮಂಜುನಾಥ ಸ್ವಾಮಿ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಧರ್ಮಸ್ಥಳ ಧರ್ಮಾಧಿಕಾರಿ ಡಾ.ವಿರೇಂದ್ರ ಹೆಗ್ಗಡೆ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಧರ್ಮಸ್ಥಳದ ಬಳಿಕ ಬಿ.ಎಸ್.ಯಡಿಯೂರಪ್ಪ ಶ್ರೀ ಕ್ಷೇತ್ರ ಕುಕ್ಕೆಸುಬ್ರಹ್ಮಣ್ಯಕ್ಕೆ ತೆರಳಿದ್ದಾರೆ. ಈ ವೇಳೆ ಮಾತನಾಡಿದ ಯಡಿಯೂರಪ್ಪ, ಹಲವು ವರ್ಷಗಳ ಬಳಿಕ ಮಂಜುನಾಥ ಸ್ವಾಮಿ ದರ್ಶನ ಪಡೆದಿದ್ದೇನೆ. ಹೆಗ್ಗಡೆ ಅವರ ಆಶೀರ್ವಾದ ಕೂಡ ದೊರೆತಿದೆ. ನಮ್ಮ ಭಾಗದಲ್ಲಿ ಒಂದು ರೀತಿಯಲ್ಲಿ ಬರಗಾಲವಿದೆ. ಹಾಗಾಗಿ ಸಕಾಲದಲ್ಲಿ ಮಳೆ-ಬೆಳೆಯಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇನೆ. ಬರುವ ದಿನಗಳು ಒಳ್ಳೆಯ ದಿನಗಳಾಗುತ್ತೆ ಎಂಬ ಭಾವನೆ ನನಗಿದೆ ಎಂದು ಹೇಳಿದರು. ಕೆಲಸ ಮಾಡಿದರೆ ಕಾಂಗ್ರೇಸ್ ಮಟ್ಟ ಹಾಕಬಹುದು ಎಂದಿದ್ದಾರೆ.

## ಇದೇ ಮೊದಲ ಬಾರಿಗೆ ರಾಜ್ಯಾದ್ಯಂತ ವಕ್ಫ್ ಅದಾಲತ್

• ಉದಯವಾಹಿನಿ, ಬೆಂಗಳೂರು

ವಕ್ಫ್ ಆಸ್ತಿಗಳ ಒತ್ತುವರಿ ತೆರವು ಹಾಗೂ ಸಂರಕ್ಷಣೆ ಉದ್ದೇಶದಿಂದ ಇದೇ ಮೊದಲ ಬಾರಿಗೆ ರಾಜ್ಯಾದ್ಯಂತ ವಕ್ಫ್ ಅದಾಲತ್ ನಡೆಸಲು ಅಲ್ಪಸಂಖ್ಯಾತ ಕಲ್ಯಾಣ, ವಕ್ಫ್ ಖಾತೆ ಸಚಿವ ಜಮೀರ್ ಅಹ್ಮದ್ ಖಾನ್ ಮುಂದಾಗಿದ್ದಾರೆ. ಜೂನ್ 24ರ ಸೋಮವಾರ ಬೀದರ್ ನಲ್ಲಿ ಮೊದಲ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಚಿವ ಜಮೀರ್ ಅಹ್ಮದ್ ಖಾನ್ ಅಧ್ಯಕ್ಷತೆಯಲ್ಲಿ ನಡೆಯಲಿರುವ ಅದಾಲತ್‌ನಲ್ಲಿ ಜಿಲ್ಲಾಮಟ್ಟದಲ್ಲಿ ಮುತವಲ್ಲಿ, ವಕ್ಫ್ ಸಮಿತಿಗಳ ಕುಂದು ಕೊರತೆ ಆಲಿಸಲಾಗುವುದು. ಅನೇಕ ವರ್ಷಗಳಿಂದ ಇತ್ಯರ್ಥವಾಗದ ವಕ್ಫ್ ಆಸ್ತಿಗಳಿಗೆ ಖಾತೆ ಮಾಡಿಕೊಡುವ ಬಗ್ಗೆ ಅರ್ಜಿ ಸ್ವೀಕರಿಸಲಾಗುತ್ತದೆ. ಸಭೆಯ ಮುಂದುವರೆದ ಭಾಗವಾಗಿ ಜೂನ್ 25ರಂದು ಜಿಲ್ಲಾಧಿಕಾರಿ, ಎಸ್ಪಿ, ಉಪ ವಿಭಾಗಾಧಿಕಾರಿ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಬೋರ್ಡ್ ಅಧಿಕಾರಿಗಳ ಜೊತೆಗೆ ಸಚಿವರು ಸಭೆ ನಡೆಸಲಿದ್ದಾರೆ. ರಾಜ್ಯ ವಕ್ಫ್ ಬೋರ್ಡ್ ಅಧ್ಯಕ್ಷ ಅನ್ವರ್ ಬಾಷಾ, ಬೀದರ್ ಜಿಲ್ಲಾ ವಕ್ಫ್ ಬೋರ್ಡ್ ಅಧ್ಯಕ್ಷ ಮಹಮ್ಮದ್ ಫಿರೋಜ್ ಖಾನ್ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಪ್ರತಿ ಜಿಲ್ಲೆಯಲ್ಲಿಯೂ ತಿಂಗಳಿಗೊಮ್ಮೆ ವಕ್ಫ್ ಅದಾಲತ್ ನಡೆಸಲಾಗುವುದು ಎಂದು ಸಚಿವ ಜಮೀರ್ ಅಹ್ಮದ್ ಖಾನ್ ತಿಳಿಸಿದ್ದಾರೆ.

# ನೂತನ ಸಂಸದರ ಪ್ರಮಾಣ ಮಹನೀಯರ ಹಾದಿಯಲ್ಲಿ ಸಾಗೋಣ

**ಕನ್ನಡದಲ್ಲೇ ಪ್ರಮಾಣ ವಚನ ಸ್ವೀಕರಿಸಿದ ಎಚ್‌ಡಿಕೆ, ಜೋಶಿ..!**

**ನೂತನ ಸ್ಪೀಕರ್ ಹುದ್ದೆ ಬಿಜೆಪಿ ತನ್ನ ಬಳಿಯೇ ಉಳಿಸಿಕೊಳ್ಳಲು ಮುಂದಾಗಿದೆ.**

**ಹದಿನೆಂಟನೇ ಲೋಕಸಭೆಗೆ ಆಯ್ಕೆಯಾಗಿರುವ ಎಲ್ಲಾ ನೂತನ ಸದಸ್ಯರು ಲೋಕಸಭಾ ಸದಸ್ಯರಾಗಿ ಸೋಮವಾರ ಪ್ರಮಾಣ ವಚನ ಸ್ವೀಕರಿಸಿದರು. ಸೋಮವಾರ ಆರಂಭವಾಗಿರುವ ೧೮ನೇ ಲೋಕಸಭೆಯ ಚೊಚ್ಚಲ ಅಧಿವೇಶನದಲ್ಲಿ ಎಲ್ಲಾ ನೂತನ ಸದಸ್ಯರು ಅತ್ಯಂತ ಸಂಭ್ರಮ ಸಡಗರದಿಂದ ಲೋಕಸಭಾ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದರು.**



**ಜಟಾಪಟಿಗೆ ವೇದಿಕೆ**

ಪ್ರಮಾಣ ವಚನ ಸ್ವೀಕಾರದ ಸ್ಪೀಕರ್ ಚುನಾವಣೆ ಬಳಿಕ ನೀಟ್-ಯುಜಿ ಮತ್ತು ಯುಜಿಸಿ-ನೆಟ್ ಪ್ರಶ್ನೆ ಪತ್ರಿಕೆ ಸೋರಿಕೆ ಆರೋಪಗಳಿಗೆ ಸಂಬಂಧಿಸಿದ ಚರ್ಚೆ ಮತ್ತು ವಿವಾದದ ಬಗ್ಗೆ ಪ್ರತಿಪಕ್ಷಗಳು ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಲು ಸಜ್ಜಾಗಿದ್ದೇವೆ. ರಾಜ್ಯಸಭೆಯ 264 ನೇ ಅಧಿವೇಶನ ಜೂನ್ 27 ರಿಂದ ಜುಲೈ 3 ರವರೆಗೆ ನಡೆಯಲಿದೆ. ಜೂನ್ 27ರಂದು ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಜಂಟಿ ಅಧಿವೇಶನ ಉದ್ದೇಶಿಸಿ ಮಾತನಾಡಲಿದ್ದಾರೆ. ಜುಲೈ 22 ರಂದು ಕೇಂದ್ರ ಮುಂಗಡ ಪತ್ರ ಮಂಡನೆಗಾಗಿ ಮತ್ತೆ ಅಧಿವೇಶನ ಆರಂಭವಾಗಲಿದೆ.

• ಉದಯವಾಹಿನಿ, ನವದೆಹಲಿ

ಅಧಿವೇಶನ ಹಂಗಾಮಿ ಲೋಕಸಭಾ ಅಧ್ಯಕ್ಷರಾಗಿ ಹಿರಿಯ ಸದಸ್ಯ ಭರ್ತೃಹರಿ ಮೆಹತಾಬ್ ಇವರ ಸಮ್ಮುಖದಲ್ಲಿ ಎಲ್ಲಾ ಸದಸ್ಯರು ಪ್ರಮಾಣ ವಚನ ಸ್ವೀಕರಿಸಿದರು.

1 ಮಂಡ್ಯ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಸೋಮವಾರ ಪ್ರಮಾಣ ವಚನ ಸ್ವೀಕಾರ

2 ಸೋಮವಾರ ಸ್ಪೀಕರ್ ಸಮ್ಮುಖದಲ್ಲಿ ಕನ್ನಡದಲ್ಲಿ ಪ್ರಮಾಣ ಸ್ವೀಕಾರ ಮಾಡಿದರು

3 ಕೇಂದ್ರ ಸಚಿವರಾಗಿ ಅವರು ಇಂಗ್ಲಿಷ್‌ನಲ್ಲಿ ಪ್ರಮಾಣ ವಚನ ಸ್ವೀಕಾರ ಮಾಡಿದ್ದರು. 4 ಪ್ರಧಾನಿ ಮೋದಿ ಪ್ರಮಾಣ ವಚನ ಸ್ವೀಕಾರ ಮಾಡಿದರು.

ಆರಂಭದಲ್ಲಿ ಪ್ರಧಾನಿ ಮೋದಿ ಅವರು ಈಶ್ವರನ ಹೆಸರಲ್ಲಿ ಪ್ರಮಾಣ ಸ್ವೀಕರಿಸಿದರು. ಹಂಗಾಮಿ ಸ್ಪೀಕರ್ ಅವರಿಗೆ ಪ್ರಮಾಣ ವಚನದಲ್ಲಿ ಸಹಾಯ ಮಾಡಲು ನೇಮಕವಾಗಿರುವ ಪ್ರಗನ್ ಸಿಂಗ್ ಕುಲಸ್ತೆ, ರಾಧಾ ಮೋಹನ್ ಸಿಂಗ್ ಕೇಂದ್ರ ಸಚಿವ ರಾಜನಾಥ್ ಸಿಂಗ್ ಆದಿಯಾಗಿ ಸೇರಿ ಒಬ್ಬೊಬ್ಬರೇ ಸದಸ್ಯರು ಪ್ರಮಾಣ ವಚನ ಸ್ವೀಕಾರ ಮಾಡಿದರು. ಕೇಂದ್ರದ ನೂತನ ಸಚಿವರುಗಳು ಮತ್ತು ಸಂಸದರು ಹಿರಿತನ ಆಧಾರದ ಮೇಲೆ ಒಬ್ಬೊಬ್ಬರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಏ,ನಿಂದ 19ರಿಂದ ಜೂನ್1ವರೆಗೆ ನಡೆದ ಲೋಕಸಭೆವರೆಗೆ ನಡೆದ ಸಾರ್ವತ್ರಿಕ ಚುನಾವಣೆಯ ನಂತರ ನಡೆಯುತ್ತಿರುವ ಮೊದಲ ಲೋಕಸಭೆ ಅಧಿವೇಶನ ಇದಾಗಿದೆ. 18ನೇ ಲೋಕಸಭೆಯಲ್ಲಿ ಎನ್ ಡಿಎ 293 ಸ್ಥಾನಗಳೊಂದಿಗೆ ಬಹುಮತ ಹೊಂದಿದೆ.ಬಿಜೆಪಿ 240 ಸ್ಥಾನಗಳನ್ನು ಪಡೆದಿದೆ. ಪ್ರತಿಪಕ್ಷ ಇಂಡಿಯಾ ಮೈತ್ರಿಕೂಟ 234 ಸ್ಥಾನಗಳನ್ನು ಹೊಂದಿದ್ದು, ಕಾಂಗ್ರೇಸ್ 99 ಸ್ಥಾನ ಪಡೆದಿದೆ. 18ನೇ ಲೋಕಸಭೆಯ ಮೊದಲ ಅಧಿವೇಶನದ ಆರಂಭದಲ್ಲಿ ಇತ್ತೀಚೆಗೆ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಿ ಮೌನ ಆಚರಿಸಲಾಯಿತು. ನಂತರ ಲೋಕಸಭೆಯ ಪ್ರಧಾನ ಕಾರ್ಯದರ್ಶಿ ಉತ್ಪಲ್ ಕುಮಾರ್ ಸಿಂಗ್ ಅವರು ಕೆಳಮನೆಗೆ ಆಯ್ಕೆಯಾದ ಸದಸ್ಯರ ಪಟ್ಟಿ ಸದನದಲ್ಲಿ ಮಂಡಿಸಿದರು.ನಂತರ ಒಬ್ಬೊಬ್ಬರ ಸದಸ್ಯರ ಪ್ರಮಾಣವಚನ ಸ್ವೀಕರಿಸಿದರು. ಹಂಗಾಮಿ ಸ್ಪೀಕರ್ ಅವರು ಜೂ.26ರಂದು ಸಭಾಧ್ಯಕ್ಷರ ಚುನಾವಣೆಯವರೆಗೆ ಸದನದ ಕಲಾಪಗಳನ್ನು ಕೈಗೊಳ್ಳಲು ರಾಷ್ಟ್ರಪತಿಗಳು ನೇಮಿಸಿದ ಅಧ್ಯಕ್ಷರ ಸಮಿತಿಗೆ ಪ್ರಮಾಣ ವಚನ ಬೋಧಿಸಿದ್ದಾರೆ. ಹಂಗಾಮಿ ಸಭಾಪತಿಗೆ ಸಹಾಯ ಮಾಡಲು ಕೋಡಿಕುನ್ನಿಲ್ ಸುರೇಶ್ (ಕಾಂಗ್ರೇಸ್), ಟಿ ಆರ್ ಬಾಲು (ಡಿಎಂಕೆ), ರಾಧಾ ಮೋಹನ್ ಸಿಂಗ್ ಮತ್ತು ಫಗ್ಗನ್ ಸಿಂಗ್ ಕುಲಸ್ತೆ (ಇಬ್ಬರೂ ಬಿಜೆಪಿ) ಮತ್ತು ಸುದೀಪ್ ಬಂಡೋಪಾಧ್ಯಾಯ (ಟಿಎಂಸಿ) ಅವರನ್ನು ನೂತನವಾಗಿ ಚುನಾಯಿತ ಸದಸ್ಯರಿಗೆ ಪ್ರಮಾಣ ವಚನ ಬೋಧಿಸಲು ಮಹತಾಬ್ ಸಹಾಯ ಮಾಡಲು ರಾಷ್ಟ್ರಪತಿಗಳು ನೇಮಕ ಮಾಡಿದ್ದಾರೆ.




**ಘನತೆ ಕಾಪಾಡಿಕೊಳ್ಳಬೇಕು**

''ದೇಶದ ಜನರು ಪ್ರತಿಪಕ್ಷಗಳಿಂದ ಉತ್ತಮ ಕ್ರಮಗಳನ್ನು ನಿರೀಕ್ಷಿಸುತ್ತಾರೆ. ಪ್ರಜಾಪ್ರಭುತ್ವದ ಘನತೆ ಕಾಪಾಡಿಕೊಳ್ಳಲು ಪ್ರತಿಪಕ್ಷಗಳು ದೇಶದ ಸಾಮಾನ್ಯ ನಾಗರಿಕರ ನಿರೀಕ್ಷೆಗಳಿಗೆ ಅನುಗುಣವಾಗಿ ವರ್ತಿಸುತ್ತವೆ.ಅದನ್ನು ಬಿಟ್ಟು ಪ್ರತಿಭಟನೆ ಮಾಡಿದರೆ ಜನರು ಸಹಿಸುವುದಿಲ್ಲ ಎಂದ ಆರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಪ್ರತಿಪಕ್ಷಗಳ ವಿರುದ್ಧ ನೇರ ವಾಗ್ದಾಳಿ ನಡೆಸಿದ್ದಾರೆ.

**ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು**

ಜನರಿಗೆ ವಸ್ತು ಬೇಕು, ಘೋಷಣೆಗಳಲ್ಲ. ದೇಶಕ್ಕೆ ಉತ್ತಮ ವಿರೋಧ ಪಕ್ಷ, ಜವಾಬ್ದಾರಿಯುತ ವಿರೋಧ ಪಕ್ಷದ ಅಗತ್ಯವಿದೆ. 18 ನೇ ಲೋಕಸಭೆಯಲ್ಲಿ ಗೆದ್ದ ಸಂಸದರು ಸಾಮಾನ್ಯ ಜನರ ಈ ನಿರೀಕ್ಷೆಗಳನ್ನು ಪೂರೈಸಲು ಪ್ರಯತ್ನಿಸುತ್ತಾರೆ ಎಂದು ನನಗೆ ಸಂಪೂರ್ಣ ವಿಶ್ವಾಸವಿದೆ'' ದೇಶದ ಜನರು ನಮಗೆ ಮೂರನೇ ಬಾರಿಗೆ ಅವಕಾಶ ನೀಡಿದ್ದಾರೆ. ಅವರ ವಿಶ್ವಾಸ ಉಳಿಕೊಳ್ಳಲು ಎಲ್ಲಾ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದಿದ್ದಾರೆ.





**ಸ್ಪೀಕರ್ ಆಯ್ಕೆ:** ಮೊದಲ ಎರಡು ದಿನ ನೂತನ ಸದಸ್ಯರ ಪ್ರಮಾಣ ವಚನ ಸ್ವೀಕಾರದ ಬಳಿಕ ಜೂನ್ 26 ರಂದು ನೂತನ ಲೋಕಸಭಾ ಸದಸ್ಯರ ಆಯ್ಕೆ ನಡೆಯಲಿದೆ. ನೂತನ ಸ್ಪೀಕರ್ ಹುದ್ದೆಯನ್ನು ಬಿಜೆಪಿ ತನ್ನ ಬಳಿಯೇ ಉಳಿಸಿಕೊಳ್ಳಲು ಮುಂದಾಗಿದೆ. ಎನ್ ಡಿಎ ಮಿತ್ರ ಪಕ್ಷಗಳಾದ ಟಿಡಿಪಿ, ಜೆಡಿಯು ಕಣ್ಣಿಟ್ಟಿದೆ.

## ಅಣ್ಣ,ತಮ್ಮಂದಿರ ಗುಲಾಮಗಿರಿ ಬಿಡಿ: ಎಚ್.ಡಿ.ಕುಮಾರಸ್ವಾಮಿ

• ಉದಯವಾಹಿನಿ, ಚನ್ನಪಟ್ಟಣ

'ಅಧಿಕಾರಿಗಳು ಈ ಅಣ್ಣ, ತಮ್ಮಂದಿರ (ಡಿ.ಕೆ.ಸಹೋದರರ) ಗುಲಾಮಗಿರಿ ಮಾಡುವುದಕ್ಕೂ ಒಂದು ಮಿತಿ ಬೇಡವೆ. ಕ್ಷೇತ್ರದಲ್ಲಿ ಏನೆಲ್ಲಾ ನಡೆಯುತ್ತಿದೆ ಎಂದು ನೋಡುತ್ತಿದ್ದೇನೆ. ಗುಲಾಮಗಿರಿ ಬಿಡಿ.- ಇದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಇಲ್ಲಿ ಅಧಿಕಾರಿಗಳಿಗೆ ನೀಡಿದ ಎಚ್ಚರಿಕೆ. 'ನಾನು ದುರಹಂಕಾರದಲ್ಲಿ ಈ ಮಾತು ಹೇಳುತ್ತಿದ್ದೇನೆ ಅಂದುಕೊಂಡರೂ ಪರವಾಗಿಲ್ಲ. ನೀವೇನೂ ನನ್ನ ಕೈಗೆ ಸಿಕ್ಕಿ ಹಾಕಿಕೊಳ್ಳುವುದಿಲ್ಲವೇ? ಈಗ ನೀವು ಮಾಡುತ್ತಿರುವುದು ಮುಂದೆ ಪಶ್ಚಾತ್ತಾಪಕ್ಕೆ ಕಾರಣವಾಗಲಿದೆ' ಎಂದು ಅವರು ಸ್ಪಷ್ಟ ಹೇಳಿದರು. ಡಿ.ಕೆ. ಸಹೋದರರು ಮತ್ತು ಸರ್ಕಾರಿ ಅಧಿಕಾರಿಗಳ ಕಾರ್ಯವೈಖರಿಯ ವಿರುದ್ಧ ವಾಗ್ದಾಳಿ ನಡೆಸಿದರು.



'ಅಧಿಕಾರಿಗಳು ಹೇಗೆ ನಡೆದುಕೊಳ್ಳುತ್ತಿದ್ದೀರಿ ಎಂದು ವಾರದಿಂದ ಗಮನಿಸುತ್ತಿದ್ದೇನೆ. ನಿಮ್ಮನ್ನು ಮೆಚ್ಚಿ ಮಾತನಾಡಬೇಕೇ ಅಥವಾ ಅವರು (ಡಿ.ಕೆ.ಸಹೋದರರು) ಬಯ್ಯುವಂತಹ ಪದಗಳನ್ನು ಬಳಸಬೇಕೇ? ನಿಮಗೆ ಎಚ್ಚರಿಕೆ ಕೊಡುತ್ತಿದ್ದೇನೆ' ಎಂದರು. 'ನಾನು ಕೆಡಿಪಿ ಸಭೆ ಮಾಡಿದಾಗ ಮಾಧ್ಯಮದವರನ್ನು ಇರಿಸಿಕೊಂಡೇ ಮಾಡಿದೆ. ಇವರಂತೆ ಕದ್ದುಮುಚ್ಚಿ ಮಾಡಲಿಲ್ಲ.

ಆದರೆ, ಇವರು ಅಧಿಕಾರಿಗಳ ಮೊಬೈಲ್ ಫೋನ್ ಎತ್ತಿಟ್ಟುಕೊಂಡು ಮೀಟಿಂಗ್ ಮಾಡುತ್ತಾರೆಂದರೆ ಏನೆನ್ನಬೇಕು? ಅಧಿಕಾರಿಗಳ ಗುಲಾಮಗಿರಿಗೂ ಮಿತಿ ಇರುತ್ತದೆ ಎಂಬುದನ್ನು ಮರೆಯಬಾರದು' ಎಂದು ಹೇಳಿದರು.

## ಸಾಮಾನ್ಯ ಕಾರ್ಯಕರ್ತನಾಗಿ ಕೆಲಸ ಮಾಡುತ್ತೇನೆ

• ಉದಯವಾಹಿನಿ, ಬೆಂಗಳೂರು



ನಾನು ಈ ಚುನಾವಣೆಯಲ್ಲಿ ಕೇವಲ ಪಕ್ಷದ ಕಾರ್ಯಕರ್ತನಾಗಿ ಕೆಲಸ ಮಾಡುತ್ತೇನೆ ಎಂದು ಮಾಜಿ ಸಂಸದ ಡಿಕೆ ಸುರೇಶ್ ತಿಳಿಸಿದರು. ಚನ್ನಪಟ್ಟಣ ಜನ ಯಾರನ್ನು ಬಯಸುತ್ತಾರೆ ಅವರೇ ಅಭ್ಯರ್ಥಿ. ರಾಮನಗರ ನಮ್ಮ ಜಿಲ್ಲೆ ಪಕ್ಷದ ಅಧ್ಯಕ್ಷ ಡಿಸಿಎಂ ಆಗಿ ಡಿಕೆಗೆ ಜವಾಬ್ದಾರಿ ಇದೆ. ಉಪಚುನಾವಣೆ ಬರುವುದರಿಂದ ಚನ್ನಪಟ್ಟಣ ಕ್ಷೇತ್ರದಲ್ಲಿ ಶಾಸಕರಿಲ್ಲ. ಹಾಗಾಗಿ ಕಾರ್ಯಕರ್ತರು ಸಾಕಷ್ಟು ಇದ್ದಾರೆ ಹಾಗಾಗಿ ಡಿಕೆ ಶಿವಕುಮಾರ್ ಚೆನ್ನಪಟ್ಟಣಕ್ಕೆ ಭೇಟಿ ಕೊಡುತ್ತಿದ್ದಾರೆ ಎಂದು ತಿಳಿಸಿದರು. ಕ್ಷೇತ್ರದ ಜನ ಏನು ತೀರ್ಮಾನ ಮಾಡುತ್ತಾರೆ ಅದಕ್ಕೆ ತಲೆಬಾಗುತ್ತೇವೆ. ನಾನು ಪಕ್ಷದ ಸಾಮಾನ್ಯ ಕಾರ್ಯಕರ್ತನಾಗಿ ಕೆಲಸ ಮಾಡುತ್ತೇನೆ. ನನ್ನನ್ನು ಜನರು ತಿರಸ್ಕರಿಸಿದ್ದಾರೆ. ಸೋತು ಒಂದು ತಿಂಗಳು ಕೂಡ ಆಗಿಲ್ಲ ಆಗಲೇ ಇನ್ನೊಂದು ಚುನಾವಣೆ ಅಂದರೆ ಜನ ನಗುತ್ತಾರೆ ಎಂದರು.

ಬೇರೆಯವರು ಕೆಲಸ ಮಾಡಲಿ ನಾವು ಸಹಕಾರ ಕೊಡೋಣ ಮೊದಲಿಂದಲೂ ಚನ್ನಪಟ್ಟಣ ಕ್ಷೇತ್ರ ಜೊತೆ ಒಡನಾಟವಿದೆ ಚನ್ನಪಟ್ಟಣದಲ್ಲಿ ಕಾಂಗ್ರೇಸ್ ಬಲವಾಗಿದೆ ನಾಯಕತ್ವ ಇರಲಿಲ್ಲ ನಮ್ಮ ಪಕ್ಷಕ್ಕೆ ಬರೋದು ಹೋಗುವುದರಿಂದ ನಮಗೆ ಹಿನ್ನಡೆಯಾಗಿತ್ತು ಎಂದು ಡಿಕೆ ಸುರೇಶ ಹೇಳಿಕೆ ನೀಡಿದರು.

# ಪ್ರಮಾಣ ವಚನ ಸ್ವೀಕರಿಸಿ ಸಿದ್ದರಾಮಯ್ಯ ಕಾಲಿಗೆ ನಮಸ್ಕರಿಸಿದ ಸಿಟಿ ರವಿ

## ಕರ್ನಾಟಕದ ವಿಧಾನ ಪರಿಷತ್‌ಗೆ ನೂತನವಾಗಿ ಆಯ್ಕೆಯಾಗಿ ವಿಧಾನ ಪರಿಷತ್ ಸದಸ್ಯರ ಪ್ರಮಾಣ ವಚನ ಸ್ವೀಕಾರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ವಿಧಾನ ಪರಿಷತ್‌ಗೆ ನೂತನವಾಗಿ ಆಯ್ಕೆಯಾಗಿ ವಿಧಾನ ಪರಿಷತ್ ಸದಸ್ಯರ ಪ್ರಮಾಣ ವಚನ ಸ್ವೀಕಾರ ಸಮಾರಂಭ ಇಂದು ವಿಧಾನಸೌಧಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆಯಿತು. ವಿಧಾನ ಪರಿಷತ್ ನೂತನ ಸದಸ್ಯರ ಪ್ರಮಾಣ ವಚನ ಸ್ವೀಕಾರ ವೇಳೆ ಅನೇಕ ಸದಸ್ಯರು ಪಕ್ಷಾತೀತವಾಗಿ ಸಿಎಂ ಸಿದ್ದರಾಮಯ್ಯ ಕಾಲು ಮುಟ್ಟಿ ಆಶೀರ್ವಾದ ಪಡೆದರು.

ನೂತನ ಪರಿಷತ್ ಸದಸ್ಯರಿಗೆ ಸಭಾಪತಿ ಬಸವರಾಜ್ ಹೊರಟ್ಟಿ ಪ್ರಮಾಣ ವಚನ ಬೋಧಿಸಿದರು. ಬಿಜೆಪಿಯ ಪರಿಷತ್ ಸದಸ್ಯ ಸಿಟಿ ರವಿ ಕೇಸರಿ ಶಾಲು ಧರಿಸಿ ಪ್ರಮಾಣ ವಚನ ಸ್ವೀಕರಿಸಿದರು. ಈ ವೇಳೆ ಜೈ ಶ್ರೀರಾಮ್ ಎಂದು ಶಿಳ್ಳೆ ಕೇಕೆ ಹಾಕಿ ಬಿಜೆಪಿ ಸದಸ್ಯರು ಘೋಷಣೆ ಕೂಗಿ ಅಭಿನಂದಿಸಿದರು. ಪ್ರಮಾಣ ವಚನ ಸ್ವೀಕರಿಸಿದ ಬಳಿಕ ನೇರವಾಗಿ ಸಿಎಂ ಸಿದ್ದರಾಮಯ್ಯ ಬಳಿ ಬಂದ ಸಿ.ಟಿ ರವಿ, ಸಿದ್ದರಾಮಯ್ಯ ಕಾಲು ಮುಟ್ಟಿ ನಮಸ್ಕರಿಸಿದರು. ಈ ವೇಳೆ ಸಿಟಿ ರವಿಯ ಕಿವಿ ಹಿಂಡಿದ ಸಿಎಂ ಬೆನ್ನು ತಟ್ಟಿ ಅಭಿನಂದಿಸಿದರು.

ನಂತರ ಭಾರತ ಮಾತೆಯ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ ನೂತನ ಪರಿಷತ್ ಸದಸ್ಯ ಎನ್ ರವಿಕುಮಾರ್ ಬಳಿಕ ಸಿಎಂ ಸಿದ್ದರಾಮಯ್ಯರ ಕಾಲು ಮುಟ್ಟಿ ಆಶೀರ್ವಾದ ಪಡೆದರು. ಮತ್ತೊಂದೆಡೆ ಭಗವಂತನ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ ಜೆಡಿಎಸ್ ಸದಸ್ಯ ಭೋಜೇಗೌಡ, ನಂತರ ಸಿಎಂ ಸಿದ್ದರಾಮಯ್ಯರ ಕಾಲು ಮುಟ್ಟಿ ಆಶೀರ್ವಾದ ಪಡೆದರು.



**ಕಿವಿ ಹಿಂಡಿ ಅಭಿನಂದಿಸಿದ ಸಿಎಂ!**

ಇತ್ತ ಭಗವಂತ ಹಾಗೂ ಸಂವಿಧಾನದ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ ಯತೀಂದ್ರ ಸಿದ್ದರಾಮಯ್ಯ, ಬಳಿಕ ಅಪ್ಪ ಸಿಎಂ ಸಿದ್ದರಾಮಯ್ಯರ ಕಾಲು ಮುಟ್ಟಿ ಆಶೀರ್ವಾದ ಪಡೆದರು. ಇದೇ ವೇಳೆ ನೂತನ ಸದಸ್ಯ ಕೆ ಗೋವಿಂದ ರಾಜ್ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಸಿಎಂ ಸಿದ್ದರಾಮಯ್ಯರ ಕಾಲು ಮುಟ್ಟಿ ಆಶೀರ್ವಾದ ಪಡೆದರು. ಜಗದೇವ್ ಗುತ್ತೇದಾರ್ ಅವರು ಬುದ್ಧ ಬಸವ ಅಂಬೇಡ್ಕರ್ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

**ಈ ನೆಲದ ಕಾನೂನು ಎಲ್ಲಾರಿಗೂ ಒಂದೇ - ಸಿಟಿ ರವಿ**

ಸೂರಜ್ ರೇವಣ್ಣ ಅಸಹಜ ಲೈಂಗಿಕ ದೌರ್ಜನ್ಯ ಕೇಸ್ ವಿಚಾರದ ಬಗ್ಗೆ ಕೇಳಲಾದ ಪ್ರಶ್ನೆಗೆ, ಪಾಪ ಪುಣ್ಯ ನಮಗೆ ಗೊತ್ತಿಲ್ಲ. ಅದು ಅಂತರಾತ್ಮ ಹಾಗೂ ಪರಮಾತ್ಮನಿಗೆ ಮಾತ್ರವೇ ಗೊತ್ತಿರುತ್ತದೆ. ನಾವು ಏನು ಹೇಳಲು ಬರುವುದಿಲ್ಲ. ಈ ನೆಲದ ಕಾನೂನು ಎಲ್ಲಾರಿಗೂ ಒಂದೇ. ಆದರೆ ಪಾಪ ಪುಣ್ಯದ ಪ್ರಶ್ನೆ ಬಂದರೆ ಅದು ನಮಗೆ ಸಂಬಂಧಪಡುವುದಿಲ್ಲ. ಎಲ್ಲಾ ಪ್ರಶ್ನೆಗಳಿಗೆ ಈಗ ಉತ್ತರ ಸಿಗುವುದಿಲ್ಲ ಎಂದರು.

ವಿಧಾನಸಭೆ, ಶಿಕ್ಷಕರ ಕ್ಷೇತ್ರ ಹಾಗೂ ಪದವೀಧರರ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ ನೂತನ 17 ವಿಧಾನ ಪರಿಷತ್ ಸದಸ್ಯರ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ, ಸಿಎಂ ಸಿದ್ದರಾಮಯ್ಯ, ಕಾನೂನು ಹಾಗೂ ಸಂಸದೀಯ ಸಚಿವ ಎಚ್‌ಕೆ ಪಾಟೀಲ್ ಸೇರಿ ಹಲವರು ಭಾಗಿಯಾದರು. ಇದರೊಂದಿಗೆ ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ಆಯ್ಕೆಯಾಗಿರುವ 11 ಸದಸ್ಯರ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮವೂ ನಡೆಯಿತು.

ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮಕ್ಕೂ ಮುನ್ನ ಸಿಎಂ ಸಿದ್ದರಾಮಯ್ಯ ಅವರು ನೂತನ ಸದಸ್ಯರನ್ನು ಅಭಿನಂದಿಸಿದರು. ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ಆಯ್ಕೆಯಾಗಿರುವ 11 ಸದಸ್ಯರ ಪೈಕಿ ಕಾಂಗ್ರೆಸ್‌ನಿಂದ ಐವನ್ ಡಿಸೋಜಾ, ಕೆ ಗೋವಿಂದರಾಜು, ಜಗದೇವ್ ಗುತ್ತೇದಾರ್,ಬಲ್ಕಿಸ್ ಬಾನು, ಎನ್ ಎಸ್ ಭೋಸರಾಜ್, ಯತೀಂದ್ರ ಸಿದ್ದರಾಮಯ್ಯ, ಎ ವಸಂತ ಕುಮಾರ್, ಬಿಜೆಪಿಯಿಂದ ಎನ್ ರವಿಕುಮಾರ್, ಸಿಟಿ ರವಿ, ಮುಳೆ ಮಾರುತಿರಾವ್, ಜೆಡಿಎಸ್‌ನಿಂದ ಜವರಾಯಿಗೌಡ ಪ್ರಮಾಣ ವಚನ ಸ್ವೀಕರಿಸಿದರು.

**ಪ್ರಮಾಣ ವಚನ ಸ್ವೀಕಾರ**

ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್‌ಗೆ ಆಯ್ಕೆಯಾದ 6 ಮಂದಿಯ ಪೈಕಿ ಈಶಾನ್ಯ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೇಸ್‌ನಿಂದ ಗೆದ್ದ ಚಂದ್ರಶೇಖರ್ ಬಸವರಾಜ್ ಪಾಟೀಲ್, ಬೆಂಗಳೂರು ಪದವೀಧರ ಕ್ಷೇತ್ರದಲ್ಲಿ ಕಾಂಗ್ರೇಸ್‌ನಿಂದ ರಾಮೋಜಿ ಗೌಡ, ಆಗ್ನೇಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೇಸ್‌ನಿಂದ ಡಿ ಟಿ ಶ್ರೀನಿವಾಸ್, ನೈರುತ್ಯ ಪದವೀಧರ ಕ್ಷೇತ್ರದಲ್ಲಿ ಬಿಜೆಪಿಯಿಂದ ಗೆದ್ದ ಡಾ ಧನಂಜಯ ಸರ್ಜಿ, ನೈರುತ್ಯ ಶಿಕ್ಷಕರ ಕ್ಷೇತ್ರದಲ್ಲಿ ಜೆಡಿಎಸ್‌ನಿಂದ ಎಸ್ ಎಲ್ ಭೋಜೇಗೌಡ, ದಕ್ಷಿಣ ಶಿಕ್ಷಕರ ಕ್ಷೇತ್ರದಲ್ಲಿ ಜೆಡಿಎಸ್‌ನಿಂದ ಕೆ ವಿವೇಕಾನಂದ ಪ್ರಮಾಣ ವಚನ ಸ್ವೀಕರಿಸಿದರು.

**ಈ ದಿನದ ದರ** ಪೆಟ್ರೋಲ್: 102.86 ₹/L ಡೀಸೆಲ್ : 88.94 ₹/L ಬಂಗಾರ: ₹7,223/Gram(24ct) ₹6,625/Gram(22ct) ಬೆಳ್ಳಿ: ₹91.70/Gram

# ಸೊರಗಿದ ನಾಲೆಗಳು: ಪ್ರಯೋಜನಕ್ಕೆ ಬಾರದ ಜಲಾಶಯಗಳು

## ಸಕಾಲದಲ್ಲಿ ನಾಲೆಗಳಿಗೆ ನೀರು ಹರಿಸದೇ ರೈತರು ಪ್ರತಿವರ್ಷ ನೀರಾವರಿ ಇಲಾಖೆ ಮೇಲೆ ಒತ್ತಡ ಹಾಕಿ ನೀರು ಪಡೆಯುವಂತಹ ಸ್ಥಿತಿ

• **ಉದಯವಾಹಿನಿ, ಕೊಡಗು**

ಕೊಡಗು ಜಿಲ್ಲೆಯಲ್ಲಿ ಜಲಾಶಯಗಳ ನೀರಿನಿಂದ ವ್ಯವಸಾಯ ಮಾಡುವುದು ಅತಿ ಕಡಿಮೆ. ಜಿಲ್ಲೆಯಲ್ಲಿ ಕಾವೇರಿ, ಲಕ್ಷ್ಮಣತೀರ್ಥ, ಕುಮಾರಧಾರ, ಬರಪೊಳೆ, ಕೀರೆಹೊಳೆ, ಹಟ್ಟಿಹೊಳೆ...ಹೀಗೆ ಹತ್ತಾರು ನದಿ, ಉಪ ನದಿಗಳು ಜನ್ಮತಳೆದು ಹರಿದರೂ ಇಲ್ಲಿ ಅವುಗಳಿಗೆ ಪ್ರಮುಖ ಜಲಾಶಯಗಳನ್ನು ನಿರ್ಮಿಸಿಲ್ಲ. ಸದ್ಯ, ಹಾರಂಗಿ ಮತ್ತು ಚಿಕ್ಲಿಹೊಳೆ ಜಲಾಶಯಗಳು ಮಾತ್ರವೇ ಜಿಲ್ಲೆಯಲ್ಲಿದೆ. ಈ ಎರಡೂ ಜಲಾಶಯಗಳಿಂದ ಜಿಲ್ಲೆಗೆ ಹೆಚ್ಚಿನ ಪ್ರಯೋಜನವಾಗಿಲ್ಲ ಎಂಬ ಕೂಗು ಇದೆ. ಇದರ ನೀರು ಬಹುಪಾಲು ಪಕ್ಕದ ಮೈಸೂರು, ಹಾಸನ ಜಿಲ್ಲೆಗಳಿಗೆ ಹರಿಯುತ್ತದೆ. ಅದಾಗ್ಯೂ, ಈ ಎರಡೂ ಜಲಾಶಯಗಳಿಂದ ಜಿಲ್ಲೆಯಲ್ಲಿ ನೀರು ಹರಿಯುವ ನಾಲೆಗಳ ಸ್ಥಿತಿ ಹೇಗಿದೆ ಎಂಬುದರತ್ತ ಒಂದು ಸ್ಥೂಲ ನೋಟ ಇಲ್ಲಿದೆ.

ಕಾಲುವೆಗಳ ಕೊನೆವರೆಗೆ ನೀರು ಮರೀಚಿಕೆ ಕೊಡಗು ಜಿಲ್ಲೆಯಲ್ಲಿ ಹಾರಂಗಿ ಮತ್ತು ಚಿಕ್ಲಿಹೊಳೆ ಜಲಾಶಯಗಳು ಮಾತ್ರವೇ ಇದೆ. ಆದರೆ, ಇವುಗಳಿಂದ ಹೊರಡುವ ನಾಲೆಗಳು ಇನ್ನಷ್ಟು ಅಭಿವೃದ್ಧಿಗಾಗಿ ಕಾದಿವೆ. ಚಿಕ್ಲಿಹೊಳೆಗೆ ಹೋಲಿಸಿದರೆ ಹಾರಂಗಿಯ ನಾಲೆಗಳು ತುಸು ಉತ್ತಮ ಗುಣಮಟ್ಟದಿಂದ ಕೂಡಿವೆ.

ಹುಲುಗುಂದ ಗ್ರಾಮದಲ್ಲಿ ಹಾರಂಗಿ ನದಿಗೆ ಅಡ್ಡಲಾಗಿ 67 ಮೀಟರ್ ಎತ್ತರದ ಅಣೆಕಟ್ಟೆ ಕಟ್ಟಲಾಗಿದ್ದು, ಇದು ಕೊಡಗಿನ ಅತಿ ದೊಡ್ಡ ನೀರಾವರಿ ಯೋಜನೆಯಾಗಿದೆ. ಹಾರಂಗಿ ಜಲಾಶಯದಿಂದ ಕೊಡಗು ಜಿಲ್ಲೆ ಸೇರಿದಂತೆ ನೆರೆಯ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ, ಹುಣಸೂರು ಮತ್ತು ಕೆ.ಆರ್.ನಗರ ಹಾಗೂ ಹಾಸನ ಜಿಲ್ಲೆಯ ಅರಕಲಗೂಡು ತಾಲ್ಲೂಕು ಸೇರಿದಂತೆ 1.5 ಲಕ್ಷ ಹೆಕ್ಟರ್ ಪ್ರದೇಶಕ್ಕೆ ನೀರು ಪೂರೈಸಲಾಗುತ್ತಿದೆ.

ಜಲಾಶಯದ ಎಡದಂಡೆ ನಾಲೆಯನ್ನು ಸುಮಾರು 50 ಕೋಟಿ ವೆಚ್ಚದಲ್ಲಿ ಆಧುನೀಕರಣ ಮಾಡಲಾಗುತ್ತಿದೆ. ಆದರೆ, ಉಪ ಕಾಲುವೆಗಳ ಅಭಿವೃದ್ಧಿ ಸಮರ್ಪಕವಾಗಿ ನಡೆದಿಲ್ಲ. ಉಪ ಕಾಲುವೆಗಳ ಹಾಗೂ ಕಿರು ಕಾಲುವೆಗಳ ಅಸಮರ್ಪಕ ನಿರ್ವಹಣೆಯಿಂದಾಗಿ ಕಟ್ಟಕಡೆಯ ರೈತರ ಜಮೀನುಗಳಿಗೆ ನೀರು ಪೂರೈಕೆ ಆಗುತ್ತಿಲ್ಲ ಎಂಬ ದೂರುಗಳು ಕೇಳಿ ಬಂದಿವೆ. ರೈತರ ಪಾಲಿಗೆ ದೂರವಾದ ಜಲಾಶಯ ಕಳೆದ ನಾಲ್ಕು ದಶಕಗಳ ಹಿಂದೆ ಸ್ಥಾಪನೆಗೊಂಡ ಚಿಕ್ಲಿಹೊಳೆ ಜಲಾಶಯ ರೈತರ

**ರೈತರ ಪಾಲಿಗೆ ದೂರವಾದ ಜಲಾಶಯ**


ಉದಯವಾಹಿನಿ ಚಿತ್ರ

ಪಾಲಿಗೆ ಉಪಯೋಗಕ್ಕೆ ಇಲ್ಲದಂತೆ ಆಗಿದೆ. ಈ ಜಲಾಶಯವನ್ನು ಕೃಷಿ ಉದ್ದೇಶದಿಂದ 1982ರಲ್ಲಿ ನಿರ್ಮಿಸಲಾಗಿದೆ. ಬ್ರಿಟಿಷರ ಕಾಲದಲ್ಲಿಯೇ ಕೃಷಿಗೆ ನೀರು ಹರಿಸಲು ಇಲ್ಲಿ ಹೊಳೆಗೆ ಅಡ್ಡಲಾಗಿ ಕಟ್ಟೆ ನಿರ್ಮಿಸಲಾಗಿತ್ತು. ಸ್ವಾತಂತ್ರ್ಯ ನಂತರ 1978ರಲ್ಲಿ ಶಂಕುಸ್ಥಾಪನೆ ನೆರವೇರಿಸಿ 1982ರಲ್ಲಿ ಜಲಾಶಯ ನಿರ್ಮಾಣ ಮಾಡಲಾಯಿತು. ಕಾವೇರಿ ನೀರಾವರಿ ನಿಗಮ ವ್ಯಾಪ್ತಿಗೆ ಈ ಜಲಾಶಯ ಸೇರಿದ್ದು, 404 ಮೀಟರ್ ಉದ್ದ ಹಾಗೂ 29.3 ಮೀಟರ್ ಎತ್ತರದ ಅಣೆಕಟ್ಟೆಯಲ್ಲಿ ಸುಮಾರು ಅರ್ಧ ಟಿಎಂಸಿ ನೀರು ಸಂಗ್ರಹವಾಗುತ್ತದೆ. ಇದರ ಕಾಲುವೆಗಳು ಗಿಡ, ಮುಳ್ಳಿನ ಕಂಟಿಗಳಿಂದ ತುಂಬಿವೆ. ಕಾಂಕ್ರೀಟ್ ಕಿತ್ತುಹೋಗಿದೆ. ಮೆಟ್ಟಿಲುಗಳು ಒಡೆದ ಕಂದಕಗಳು ಸೃಷ್ಟಿಯಾಗಿವೆ. ಜೂನ್ ಅಂತ್ಯ ಬಂದರೂ ಕಾಲುವೆಗಳಲ್ಲಿ ಬೆಳೆದಿರುವ ಗಿಡ-ಗಂಟಿ ತೆರವುಗೊಳಿಸಿಲ್ಲ. ಹಲವೆಡೆ ನಾಲೆಗಳಲ್ಲಿ ಹೂಳು ತುಂಬಿರುವುದರಿಂದ ಮುಚ್ಚಿಹೋಗಿವೆ. ನೀರು ನಿಲ್ಲಿಸಿದ ಸಂದರ್ಭದಲ್ಲಿ ದುರಸ್ತಿ ಮಾಡಿಸುವ ಇಚ್ಛಾಶಕ್ತಿ ತೋರದ ಕಾರಣ ನೀರು ಬಿಡುವ ವೇಳೆ ನಿತ್ಯ ಹರಿಸುವ ಅಪಾರ ಪ್ರಮಾಣದ ನೀರು ಪೋಲಾಗುತ್ತಿದೆ.

### ಜಲಾಶಯದಲ್ಲಿ ಇರುವುದು ಒಂದೇ ಕ್ರೆಸ್ಟ್ ಗೇಟ್

**ಸಕಾಲದಲ್ಲಿ ನಾಲೆಗಳಿಗೆ ನೀರು ಹರಿಸದೇ ರೈತರು ಪ್ರತಿವರ್ಷ ನೀರಾವರಿ ಇಲಾಖೆ ಮೇಲೆ ಒತ್ತಡ ಹಾಕಿ ನೀರು ಪಡೆಯುವಂತಹ ಸ್ಥಿತಿ ಇದೆ. ಈ ಜಲಾಶಯ ಹೂಳನ್ನು ಸಮರ್ಪಕವಾಗಿ ತೆಗೆಯದ ಕಾರಣ ಹೆಚ್ಚು ನೀರು ಶೇಖರಣೆ ಆಗುತ್ತಿಲ್ಲ ಎಂಬ ದೂರು ರೈತರಿಂದ ಕೇಳಿ ಬರುತ್ತಿದೆ. ಈ ಜಲಾಶಯದಲ್ಲಿ ಇರುವುದು ಒಂದೇ ಕ್ರೆಸ್ಟ್ ಗೇಟ್. ಜಲಾಶಯದ ಗರಿಷ್ಠ ಮಟ್ಟಕ್ಕಿಂತ ಹೆಚ್ಚಿನ ನೀರು ತುಂಬಿದ ಸಂದರ್ಭ ಅದು ತಾನಾಗಿಯೇ ಹರಿದು ಹೋಗಲು ಅನುಕೂಲವಾಗುವಂತೆ ಜಲಾಶಯದ ಒಂದು ಬದಿಯಲ್ಲಿ ವೃತ್ತಾಕಾರದ ತೂಬನ್ನು ಮಾಡಿದ್ದಾರೆ. ಇದರ ಮೂಲಕ ನೀರು ಹರಿದು ಹೋಗುತ್ತದೆ. ಮಳೆ ಸುರಿದು ಜಲಾಶಯ ತುಂಬಿದಾಗ ಹೆಚ್ಚಾದ ನೀರು ವೃತ್ತಾಕಾರದ ಬಾವಿಯಲ್ಲಿ ಧುಮ್ಮಿಕ್ಕುತ್ತದೆ.**

**ಒಂದೆಡೆ ಕಾಫಿ ತೋಟ ಮತ್ತೊಂದೆಡೆ ಅರಣ್ಯ ಇದರ ನಡುವಿನ ಪ್ರಕೃತಿಯ ಮಡಿಲಿನಲ್ಲಿ ನಿರ್ಮಾಣಗೊಂಡ ಜಲಾಶಯ ಪ್ರವಾಸಿಗರನ್ನು ಸೂಜಿಗಲ್ಲಿನಂತೆ ಸೆಳೆಯುತ್ತಿತ್ತು. ಅಷ್ಟೇ ಅಲ್ಲ ಈ ಜಲಾಶಯ ಸುತ್ತಮುತ್ತಲಿನ ವಿರೂಪಾಕ್ಷಪುರ, ರಸೂಲ್ ಪುರ, ರಂಗಸಮುದ್ರ, ಬೊಳ್ಳೂರು, ಬಸವನಹಳ್ಳಿ, ಚಿಕ್ಕಬೆಟ್ಟಗೇರಿ, ದೊಡ್ಡಬೆಟ್ಟಗೇರಿ, ಹೊಸಪಟ್ಟಣ ಮುಂತಾದ ಗ್ರಾಮಗಳ ರೈತರ ಸುಮಾರು 2 ಸಾವಿರ ಎಕರೆಗೂ ಹೆಚ್ಚು ಕೃಷಿ ಭೂಮಿಗೆ ನೀರನ್ನು ಒದಗಿಸುತ್ತಿತ್ತು. ರೈತರ ಕೃಷಿ ಭೂಮಿಗೆ ನೀರೊದಗಿಸುವ ಉದ್ದೇಶದಿಂದ ಜಲಾಶಯವನ್ನು ನಿರ್ಮಿಸಲಾಗಿದ್ದರೂ, ರೈತರ ಕೃಷಿ ಭೂಮಿಗೆ ಅದು ಸಮರ್ಪಕವಾಗಿ ತಲುಪುತ್ತಿಲ್ಲ ಎಂಬ ಆರೋಪವೂ ಕೇಳಿ ಬರುತ್ತಿದೆ.**

---

# ಪ್ರಾಥಮಿಕ ಆರೋಗ್ಯ ಕೇಂದ್ರ: ವೈದ್ಯರಿಲ್ಲದೆ ರೋಗಿಗಳ ಪರದಾಟ

• **ಉದಯವಾಹಿನಿ, ಕೆಜಿಎಫ್**

ಕ್ಯಾಸಂಬಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಮತ್ತು ಆಂಬುಲೆನ್ಸ್ ಕೊರತೆ ಉಂಟಾಗಿದ್ದು, ಸುತ್ತಮುತ್ತಲಿನ ಗ್ರಾಮದ ನಿವಾಸಿಗಳು ಚಿಕಿತ್ಸೆಗಾಗಿ ದೂರದ ಕೆಜಿಎಫ್ ನಗರಕ್ಕೆ ಬರಬೇಕಾದ ಪರಿಸ್ಥಿತಿ ಉಂಟಾಗಿದೆ. ಆಂಧ್ರಪ್ರದೇಶಕ್ಕೆ ಹೊಂದಿಕೊಂಡಿರುವ ಪ್ರದೇಶಗಳನ್ನು ಹೊಂದಿರುವ ಕ್ಯಾಸಂಬಳ್ಳಿ ಹೋಬಳಿಯಲ್ಲಿರುವ ಏಕೈಕ ದೊಡ್ಡ ಆಸ್ಪತ್ರೆ ಕ್ಯಾಸಂಬಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ. ಆದರೆ, ಈ ಆಸ್ಪತ್ರೆಯಲ್ಲಿ ಪ್ರಸ್ತುತ ಒಬ್ಬ ವೈದ್ಯರಿದ್ದು, ಹಗಲಿನಲ್ಲಿ ಕಾರ್ಯನಿರ್ವಹಿಸುತ್ತಾರೆ. ರಾತ್ರಿ ಪಾಳಿಯಲ್ಲಿ ಆಸ್ಪತ್ರೆಯಲ್ಲಿ ವೈದ್ಯರು ಇರುವುದಿಲ್ಲ. ಜತೆಗೆ ತರಬೇತಿ ಹಾಗೂ ಸಭೆಗಳಿಗೆ ವೈದ್ಯರು ಹೋದರೆ ಸೇವೆ ಇರುವುದಿಲ್ಲ.

ಆಸ್ಪತ್ರೆಯಲ್ಲಿ ಸುಸಜ್ಜಿತ ಹೆರಿಗೆ ವಾರ್ಡ್ ಇದೆ. ತುರ್ತುಸೇವಾ ಘಟಕವೂ ಇದೆ. 20 ವಿವಿಧ ರೀತಿಯ ಪರೀಕ್ಷೆ ಮಾಡುವ ಪ್ರಯೋಗಾಲಯ ಮತ್ತು ಇಸಿಜಿ ಯಂತ್ರ ಇದೆ. ಹೆರಿಗೆಗಾಗಿ ಮಹಿಳೆಯರು ಸಾಕಷ್ಟು ಸಂಖ್ಯೆಯಲ್ಲಿ ಇಲ್ಲಿಗೆ ಬರುತ್ತಾರೆ. ಆದರೆ, ಸಂಜೆ ನಂತರ ಬಂದರೆ ಅವರು ಕೆಜಿಎಫ್ ಇಲ್ಲವೇ ಕೋಲಾರಕ್ಕೆ ಹೋಗಬೇಕು. ಆ ವೇಳೆ ಗರ್ಭಿಣಿ ಮಹಿಳೆಯನ್ನು ಸಾಗಿಸಲು ಆಂಬುಲೆನ್ಸ್ ಸೇವೆ ಇಲ್ಲದೆ ಇರುವುದು ಗ್ರಾಮಸ್ಥರಿಗೆ ತೊಂದರೆಯಾಗುತ್ತಿದೆ.



ಉದಯವಾಹಿನಿ ಚಿತ್ರ

**ಹಾವು ಕಡಿದವರಿಗೆ ಕೂಡ ಆಸ್ಪತ್ರೆಯಲ್ಲಿ ಚಿಕಿತ್ಸೆ ಸಿಗುತ್ತಿಲ್ಲ. ಸಂಜೆ ನಂತರ ಬಂದರೆ ನರ್ಸ್ ಬಿಟ್ಟರೆ ಯಾವುದೇ ವೈದ್ಯರು ಕೂಡ ಸಿಗುವುದಿಲ್ಲ. ರಾತ್ರಿ ಪಾಳಿಗೆ ವೈದ್ಯರನ್ನು ನೇಮಿಸಿ ಎಂದು ಮನವಿ ಸಲ್ಲಿಸಿದರೂ ಪ್ರಯೋಜವಾಗಿಲ್ಲ.**
**-ಸೋಮಸುಂದರ ರೆಡ್ಡಿ ಗ್ರಾಮಸ್ಥ**

ಗ್ರಾಮಕ್ಕೆ ಆಂಬುಲೆನ್ಸ್ ನೀಡದೆ ಇದ್ದಲ್ಲಿ ಹೋರಾಟ ಮಾಡುವುದಾಗಿ ಕ್ಯಾಸಂಬಳ್ಳಿ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರು ಹಲವಾರು ಬಾರಿ ಮನವಿ ನೀಡಿದ್ದರು. ಜೂನ್ ಒಂದರೊಳಗೆ ಆಂಬುಲೆನ್ಸ್ ನೀಡದೆ ಇದ್ದಲ್ಲಿ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದರಿಂದ, ಜೂನ್ ಒಂದರಂದು ಆಂಬುಲೆನ್ಸ್ ವಾಹನವನ್ನು ಆಸ್ಪತ್ರೆಗೆ ನೀಡಲಾಯಿತು. ಆದರೆ, ಮರುದಿನವೇ ಆಂಬುಲೆನ್ಸ್ ನಾಪತ್ತೆಯಾಗಿದೆ ಎಂದು ಹೋರಾಟಗಾರ ಸೋಮಸುಂದರ ರೆಡ್ಡಿ ಆರೋಪಿಸಿದರು.

**ಮೂರ್ನಾಲ್ಕು ವರ್ಷದಿಂದ ಆಂಬುಲೆನ್ಸ್ ಮತ್ತು ಹೆಚ್ಚುವರಿ ವೈದ್ಯರಿಗಾಗಿ ಬೇಡಿಕೆ ಇಟ್ಟದ್ದೇವೆ. ಜಿಲ್ಲಾ ಆರೋಗ್ಯಾಧಿಕಾರಿ ಸಾಬೂಬು ಹೇಳಿಕೊಂಡು ಕಾಲ ತಳ್ಳುತ್ತಿದ್ದಾರೆ**
**-ಚಿಕ್ಕವೆಂಕಟರಾಮರೆಡ್ಡಿ , ಗ್ರಾಮಸ್ಥ**

ಕ್ಯಾಸಂಬಳ್ಳಿ ಸುತ್ತಾಮುತ್ತ ಅಪಘಾತ ಪ್ರಕರಣಗಳು ಹೆಚ್ಚಾಗುತ್ತಿವೆ. ರಾಮಾಪುರ ಕ್ರಾಸ್ ಅಪಘಾತಕ್ಕೆ ಹೆಸರಾಗಿದೆ. ಆಸ್ಪತ್ರೆಗೆ ಆಂಬುಲೆನ್ಸ್ ನೀಡುವ ಅವಶ್ಯಕತೆ ಇದೆ ಎಂದು ಪೊಲೀಸರು ಕೂಡ ಆರೋಗ್ಯ ಇಲಾಖೆಗೆ ಪತ್ರ ಬರೆದಿದ್ದಾರೆ. ಸರಿಯಾದ ಸಮಯಕ್ಕೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟವರಿಗೆ ನೈತಿಕ ಹೊಣೆ ಹೊತ್ತು ಸರ್ಕಾರ ಪರಿಹಾರ ನೀಡಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ. ನನ್ನ ಹೆಂಡತಿ ಗರ್ಭಿಣಿಯಾಗಿದ್ದಾರೆ. ಅವರನ್ನು ಆಸ್ಪತ್ರೆಗೆ ಸಾಗಿಸಲು ಆಂಬುಲೆನ್ಸ್ ಕೇಳಿದರೆ ಇಲ್ಲ ಎಂದು ಸಿಬ್ಬಂದಿ ಹೇಳಿದರು. ಅವರನ್ನು ಹೆರಿಗೆಗಾಗಿ ಬೈಕ್‌ನಲ್ಲಿ ಕರೆತಂದಿದ್ದೇನೆ ಎಂಬುದು ಬೆನ್ನವಾರ ಗ್ರಾಮದ ಟ್ರಾಕ್ಟರ್ ಚಾಲಕ ಕಿರಣ್ ಅವರ ಮಾತಾಗಿದೆ.

---

# ನೀರಿನ ತೊಟ್ಟಿ ಸ್ವಚ್ಛಗೊಳಿಸಿದ ಮಕ್ಕಳು: ದೂರು

• **ಉದಯವಾಹಿನಿ, ಕನಕಪುರ**

ಶಾಲಾ ಸಮಯದಲ್ಲಿ ವಿದ್ಯಾರ್ಥಿಗಳನ್ನು ಯಾವುದೇ ಕೆಲಸಗಳಿಗೆ ಬಳಸಿಕೊಳ್ಳಬಾರದೆಂದು ಸರ್ಕಾರ ಕಾನೂನು ರೂಪಿಸಿದೆ. ಆದರೆ, ಹುಲಿಬಲೆ ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿಗಳನ್ನು ನೀರಿನ ತೊಟ್ಟಿಗೆ ಇಳಿಸಿ ಸ್ವಚ್ಛ ಮಾಡುವ ಕೆಲಸ ಮಾಡಿಸಿದ್ದಾರೆ ಎಂದು ದೂರಲಾಗಿದೆ.

ಶಾಲೆಯ ಐವರು ವಿದ್ಯಾರ್ಥಿಗಳನ್ನು ಮುಖ್ಯ ಶಿಕ್ಷಕರು ನೀರಿನ ತೊಟ್ಟಿಗೆ ಇಳಿಸಿ ಸ್ವಚ್ಛಗೊಳಿಸುವ ಕೆಲಸ ಮಾಡಿಸಿದ್ದಾರೆ ಎಂದು ಪೋಷಕರು ಆರೋಪಿಸಿದ್ದಾರೆ.

ಏಣಿ ಸಹಾಯದಿಂದ ಮಕ್ಕಳನ್ನು ನೀರಿನ ಟ್ಯಾಂಕ್ ಒಳಗೆ ಇಳಿದು ಸ್ವಚ್ಛ ಮಾಡಿದ್ದಾರೆ. ಈ ವಿಷಯ ತಿಳಿದ ಪೋಷಕರು ಮುಖ್ಯ ಶಿಕ್ಷಕರನ್ನು ಪ್ರಶ್ನಿಸಿ, ತರಾಟೆಗೆ ತೆಗೆದುಕೊಂಡಿದ್ದಾರೆ.

ಮುಖ್ಯ ಶಿಕ್ಷಕಿ ರಾಜಲಕ್ಷ್ಮಿ, ನೀರಿನ ತೊಟ್ಟಿ ಸ್ವಚ್ಛಗೊಳಿಸಲು ಸಿಬ್ಬಂದಿಗೆ ಸೂಚಿಸಲಾಗಿತ್ತು. ಅವರ ಜತೆ ವಿದ್ಯಾರ್ಥಿಗಳು ಹೋಗಿರುವುದು ಗೊತ್ತಾಗಿಲ್ಲ ಎಂದು ಪೋಷಕರನ್ನು ಸಮಾಧಾನಪಡಿಸಲು ಯತ್ನಿಸಿದರು. ಇದರಿಂದ


ಉದಯವಾಹಿನಿ ಚಿತ್ರ

ಸಮಾಧಾನಗೊಳ್ಳದ ಪೋಷಕರು ಮುಖ್ಯ ಶಿಕ್ಷಕಿ ರಾಜಲಕ್ಷ್ಮಿ ವಿರುದ್ಧ ಶಿಕ್ಷಣ ಇಲಾಖೆ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಬಿಇಒ ಅವರಿಗೆ ದೂರವಾಣಿ ಮೂಲಕ ಪೋಷಕರು ಮಾಹಿತಿ ನೀಡಿದರು. 10 ಅಡಿ ಎತ್ತರದ ನೀರಿನ ತೊಟ್ಟಿಗೆ ಇಳಿಸಿ ಮಕ್ಕಳಿಂದ ಕೆಲಸ ಮಾಡಿಸಿದ್ದಾರೆ. ಒಂದು ವೇಳೆ ಏನಾದರೂ ಅನಾಹುತ ಆಗಿದ್ದರೆ ಅದಕ್ಕೆ ಯಾರು ಜವಾಬ್ದಾರರು ಎಂದು ವಿದ್ಯಾರ್ಥಿ ವಿನಯ್ ಗೌಡ ತಂದೆ ತಿಮ್ಮೇಗೌಡ, ಮಿಥುನ್ ತಾಯಿ ಕಾವ್ಯ ಆಕ್ರೋಶ ವ್ಯಕ್ತಪಡಿಸಿದರು. ಶಾಲೆಯಲ್ಲಿ ಶಿಕ್ಷಕರ ನಡುವೆ ಹೊಂದಾಣಿಕೆ ಕೊರತೆಯಿರುವುದರಿಂದ ಇಂದಿನ ಸಮಸ್ಯೆ ಉಲ್ಬಣಿಸಿದೆ. ಮುಂದೆ ಈ ರೀತಿ ಆಗದಂತೆ ಗಮನ ಹರಿಸಲಾಗುವುದು ಎಂದು ಮುಖ್ಯಶಿಕ್ಷಕಿ ರಾಜಲಕ್ಷ್ಮಿ ತಿಳಿಸಿದರು.

---

# ಲಕ್ಷ ತೆಂಗಿನ ಸಸಿ ವಿತರಣೆ ಗುರಿ: ಕೆ.ಪಿ.ನಾಗೇಶ್

• **ಉದಯವಾಹಿನಿ, ಮಾಗಡಿ**

ರೈತರು ಪರಿಸರವನ್ನು ಸಮತೋಲನದಲ್ಲಿ ಕಾಪಾಡಿಕೊಳ್ಳಬೇಕು. ಪ್ರತಿ ರೈತರಿಗೆ 5 ತೆಂಗಿನ ಸಸಿಗಳನ್ನು ರೋಟರಿ ವತಿಯಿಂದ ವಿತರಣೆ ಮಾಡಲಾಗುತ್ತಿದೆ ಎಂದು ರೋಟರಿಯ ಪಿಡಿಎಸ್ ಕೆ.ಪಿ.ನಾಗೇಶ್ ಹೇಳಿದರು. ಪಟ್ಟಣದ ರೋಟರಿ ಕಚೇರಿಯಲ್ಲಿ ಲಕ್ಷ ಕಲ್ಪವೃಕ್ಷ ಕಾರ್ಯಕ್ರಮದಡಿ ರೈತರಿಗೆ ಉಚಿತ ತೆಂಗಿನ ಸಸಿಗಳನ್ನು ವಿತರಿಸಿ ಮಾತನಾಡಿದರು.

ಕೋಲಾರ, ತುಮಕೂರು, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಒಂದು ವರ್ಷದಲ್ಲಿ ಒಂದು ಲಕ್ಷ ತೆಂಗಿನ ಸಸಿಗಳನ್ನು ವಿತರಿಸುವ ಗುರಿ ಹೊಂದಲಾಗಿದೆ. ಒಂದು ತೆಂಗಿನ ಮರ ನೆಟ್ಟರೆ ಅದು 5 ವರ್ಷದಲ್ಲಿ ಫಲ ನೀಡುತ್ತದೆ. ವರ್ಷಕ್ಕೆ 300 ತೆಂಗಿನಕಾಯಿ ಉತ್ಪತ್ತಿಯಾಗುತ್ತದೆ. ಇದರಿಂದ ರೈತರಿಗೆ ವರ್ಷಕ್ಕೆ ಒಂದು ಮರದಿಂದ 5 ಸಾವಿರ ಆದಾಯ ಬರುತ್ತದೆ. ಒಂದು ತೆಂಗಿನ ಮರ 70 ವರ್ಷ ಜೀವಿಸುವುದರಿಂದ 65 ವರ್ಷ ಕಾಲ ರೈತರಿಗೆ ನಿಶ್ಚಿತ ಆದಾಯ ಸಿಗಲಿದೆ ಎಂದರು.


ಉದಯವಾಹಿನಿ ಚಿತ್ರ

**ಗ್ರಾಮೀಣ ಪ್ರದೇಶದಲ್ಲಿರುವ ಬಡ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎನ್ನುವ ಉದ್ದೇಶದಿಂದ ರೋಟರಿ ಸಂಸ್ಥೆಯಿಂದ ಕಾಮದೇನು ಯೋಜನೆ ಪ್ರಾರಂಭಿಸಲಾಗಿದೆ ಎಂದರು. -ರೋಟೇರಿಯನ್ ರವಿಶಂಕರ್**

ರೋಟೇರಿಯನ್ ಶಿವಕುಮಾರ್ ಮಾತನಾಡಿ, ತುಮಕೂರಿನ ಸಿದ್ಧಾರ್ಥ ಮೆಡಿಕಲ್ ಕಾಲೇಜಿನ ಅವರಣದಲ್ಲಿ 10 ಸಾವಿರ ಗಿಡ ನೆಡಲಾಗಿದೆ ಎಂದು ತಿಳಿಸಿದರು.

---

# ಜೀವಿಕ-ಗ್ರಾಮೀಣಾಭಿವೃದ್ಧಿ ಸಂಸ್ಥೆ ಸಹಯೋಗದಲ್ಲಿ ಪ್ರತಿಭಟನಾ ಧರಣಿ

• **ಉದಯವಾಹಿನಿ, ಬಂಗಾರಪೇಟೆ**

ಪಟ್ಟಣದ ತಾಲ್ಲೂಕು ಆಡಳಿತ ಕಛೇರಿಯ ಮುಂಭಾಗದಲ್ಲಿ ಆರ್‌ಎಫ್‌ಎಫ್ ಹಾಗೂ ಜೀವಿಕ - ಗ್ರಾಮೀಣಾಭಿವೃದ್ಧಿ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಾಂಕೇತಿಕ ಪ್ರತಿಭಟನಾ ಧರಣಿಯ ನೇತೃತ್ವವಹಿಸಿ ಮಾತನಾಡಿದ ಅವರು, ತಾಲ್ಲೂಕಿನ ದೊಡ್ಡಪನ್ನಾಂಡಹಳ್ಳಿ ಗ್ರಾಮದ ಸರ್ವೆನಂ.36ರಲ್ಲಿನ 1991ರಲ್ಲಿ ಬಡವರಿಗೆ ಆಶ್ರಯ ನೀಡುವ ಉದ್ದೇಶದಿಂದ ಸರ್ಕಾರ 58 ನಿವೇಶನಗಳನ್ನು ಮಂಜೂರು ಮಾಡಿ ಹಕ್ಕುಪತ್ರಗಳನ್ನು ನೀಡಿರುತ್ತದೆ. ಆದರೆ ಕಂದಾಯ ಇಲಾಖೆಯ ಅಧಿಕಾರಿಗಳು ಮೂವತ್ತು ದಶಕಗಳು ಕಳೆದರೂ ಇದುವರೆಗೂ ಜಮೀನನ್ನು ಗುರುತಿಸಿಕೊಡಲಿಲ್ಲ. ಇದರಿಂದ ಕಂಗಾಲಾಗಿರುವ ಬಡಜನರು ತಮ್ಮ ಹಕ್ಕುಗಳಿಗಾಗಿ ನಿರಂತರ ಹೋರಾಟ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲವೆಂದು ಆರೋಪಿಸಿದರು.

ಕರ್ನಾಟಕ ದಲಿತ ರೈತಸೇನೆ ರಾಜ್ಯಾಧ್ಯಕ್ಷ ಹುಣಸನಹಳ್ಳಿ ವೆಂಕಟೇಶ್ ಮಾತನಾಡಿ, ಕಂದಾಯ ಇಲಾಖೆ ನಿರ್ಲಕ್ಷತನದಿಂದಾಗಿ ನಿರ್ಗತಿಕ ಕುಟುಂಬಗಳಿಗೆ ನಿವೇಶನಗಳು ದೊರೆತಿಲ್ಲ, ಸರ್ವೆನಂ.36ರಲ್ಲಿ 234 ಎಕರೆ ಜಮೀನಿದ್ದು, 1ಎಕರೆ ಜಮೀನನ್ನು ನಿರ್ಗತಿಕರಿಗೆ ಆಶ್ರಯ ಯೋಜನೆಯಡಿಯಲ್ಲಿ ನಿವೇಶನ ಮಂಜೂರು ಮಾಡಲಾಗಿರುತ್ತದೆ. ಬಡಾವಣೆಯ ನೀಲಿನಕ್ಷೆಯೂ ಸಹ ಸಿದ್ದವಾಗಿರುತ್ತದೆ.


ಉದಯವಾಹಿನಿ ಚಿತ್ರ

**ಜಾತಿ ಜಾತಿಗಳ ನಡುವೆ ವೈಷಮ್ಯ**

ಆದರೆ ಇದುವರೆಗೂ ಕಂದಾಯ ಇಲಾಖೆ ಸ್ಥಳವನ್ನು ಗುರುತಿಸಿಕೊಟ್ಟಿರುವುದಿಲ್ಲ. ಸದರಿ ಸ್ಥಳದಲ್ಲಿ ದಿನಾಂಕ 22-07-2023ರಂದು ರಾತ್ರಿ ಗ್ರಾಮದ ನಿವಾಸಿಗಳಾದ ಗಂಜಿ ಈಶ್ವರರಾವ್, ಕೃಷ್ಣಜೀರಾವ್ ಬಿನ್ ಲೇಟ್ ಮನೋಜಿರಾವ್, ಟಿ.ವೆಂಕೋಬರಾವ್, ದೇವರಾಜ್‌ರಾವ್, ರಾಮೋಜಿರಾವ್‌ರವರು ಏಕಾಏಕೀ ಜೆಸಿಬಿಗಳನ್ನು ತಂದು ಒತ್ತುವರಿ ಮಾಡಿಕೊಳ್ಳುವುದರ ಮೂಲಕ ಲಿಂಗ ಪ್ರತಿಷ್ಠಾಪನೆ ಮಾಡಿರುತ್ತಾರೆ.

ಹಾಗೂ ಸದರಿ ಸ್ಥಳವು ದೇವ ಸ್ಥಾನಕ್ಕೆ ಸೇರಿರುವ ಜಾಗವೆಂದು ಉದ್ದಟತನ ತೋರಿ ಜಾತಿ ಜಾತಿಗಳ ನಡುವೆ ವೈಷಮ್ಯ ಮತ್ತು ಗಲಬೆಗೆ ಯತ್ನಿಸಿದ್ದಾರೆ. ಆದರೆ ಕಾಮಸಮುದ್ರ ಪೊಲೀಸರ ಮಧ್ಯಪ್ರವೇಶದಿಂದಾಗಿ ನಡೆಯಬಹುದಾದ ಅನಾಹುತ ತಪ್ಪಿದೆ ಎಂದರು.

ಈ ಸಂದರ್ಭದಲ್ಲಿ ಡಿಎಸ್‌ಎಸ್ ರವಿಚಂದ್ರ, ತಾಲ್ಲೂಕು ಅಧ್ಯಕ್ಷ ಎಂ.ತಿಪ್ಪಣ್ಣ, ಬಿ.ಶಂಕರಪ್ಪ, ಬೀರಪ್ಪ, ಪಿ.ಎ.ಮನೋಜಿರಾವ್, ಆನಂದ್, ಕೃಷ್ಣಪ್ಪ, ಕೆ.ಕೃಷ್ಣೋಜಿರಾವ್, ಸಾವಿತ್ರಮ್ಮ, ಹುಳದೇನಹಳ್ಳಿ ವೆಂಕಟೇಶಪ್ಪ, ಹುಣಸನಹಳ್ಳಿ ಸತೀಶ್, ಕೀಲುಕೊಪ್ಪ ಮುನಿರಾಜು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

---

# 61ಕೋಟಿ ಪ್ರೋತ್ಸಾಹ ಧನ ಬಾಕಿ: ಪ್ರಶ್ನಿಸಲು ರೈತರಿಗೆ ಎಚ್‌ಡಿಕೆ ಸಲಹೆ

• **ಉದಯವಾಹಿನಿ, ಚನ್ನಪಟ್ಟಣ**

ಸರ್ಕಾರ ಚನ್ನಪಟ್ಟಣ ತಾಲ್ಲೂಕಿನ ಹಾಲು ಉತ್ಪಾದಕರಿಗೆ 61ಕೋಟಿ ಪ್ರೋತ್ಸಾಹ ಹಣ ಬಾಕಿ ಉಳಿಸಿಕೊಂಡಿದೆ ಎಂದು ಕೇಂದ್ರ ಭಾರಿ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ತಾಲ್ಲೂಕಿನ ಬೈರಾಪಟ್ಟಣ ಬಮೂಲ್ ಶಿಬಿರ ಕಚೇರಿ ಆವರಣದಲ್ಲಿ ಭಾನುವಾರ ಬಮೂಲ್ ಕಲ್ಯಾಣ ಟ್ರಸ್ಟ್ ವತಿಯಿಂದ ನಡೆದ ಹಾಲು ಉತ್ಪಾದಕರ ಸಹಕಾರ ಸಂಘಗಳ ಸದಸ್ಯರು ಹಾಗೂ ಸಿಬ್ಬಂದಿ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ವಿತರಿಸಿ ಮಾತನಾಡಿದರು.

ರಾಜ್ಯದ ಉಪಮುಖ್ಯಮಂತ್ರಿ ತಾಲ್ಲೂಕಿನಲ್ಲಿ ಜನಸ್ಪಂದನ ಕಾರ್ಯಕ್ರಮ ಮಾಡಲು ಬರುತ್ತಿದ್ದಾರೆ. ತಾಲ್ಲೂಕಿನಲ್ಲಿ 61ಕೋಟಿ ಬಾಕಿ ಉಳಿಸಿಕೊಂಡಿರುವ ಹಾಲಿನ ಪ್ರೋತ್ಸಾಹ ಧನ ಮೊದಲು ನೀಡಿ, ನಂತರ ಕಾರ್ಯಕ್ರಮ ಮಾಡಿ ಎಂದು ರೈತರು ಅವರನ್ನು ಪ್ರಶ್ನೆ ಮಾಡಬೇಕು ಎಂದರು. ಹಾಲು ಉತ್ಪಾದಕ ರೈತರು ಹೈನುಗಾರಿಕೆಯಲ್ಲಿ ಹಲವು ಸಂಕಷ್ಟ ಅನುಭವಿಸುತ್ತಿದ್ದಾರೆ. ಮಹಿಳೆಯರು ಕೂಡ ಹೈನುಗಾರಿಕೆಯಲ್ಲಿ ಶ್ರಮ ವಹಿಸುತ್ತಿದ್ದಾರೆ.


ಉದಯವಾಹಿನಿ ಚಿತ್ರ

ಆದರೆ, ಹೈನುಗಾರರ ಕಷ್ಟಕ್ಕೆ ಸೂಕ್ತ ಪ್ರತಿಫಲ ಸಿಗುತ್ತಿಲ್ಲ. ಒಂದು ಲೀಟರ್ ಹಾಲಿಗೆ ಅತಿ ಕಡಿಮೆ ಬೆಲೆ ನೀಡಲಾಗುತ್ತಿದೆ. ಕೆಲವು ರಾಜ್ಯಗಳಲ್ಲಿ ಹೆಚ್ಚು ಬೆಲೆ ನೀಡಲಾಗುತ್ತಿದೆ. ಲೀಟರ್‌ಗೆ ಕನಿಷ್ಠ 50 ನೀಡಿದರೆ ಹಾಲು ಉತ್ಪಾದಕ ರೈತರ ಬದುಕು ಸ್ವಲ್ಪಮಟ್ಟಿಗೆ ಸುಧಾರಣೆಯಾಗಲಿದೆ ಎಂದರು.

**ತಾಲ್ಲೂಕಿನಲ್ಲಿ ನೀರಾವರಿ ಯೋಜನೆಗಳು ಬಂದ ನಂತರ ತಾಲ್ಲೂಕಿನ ಕೆರೆಗಳು ತುಂಬಿದ ನಂತರ ರೈತರು ಹೆಚ್ಚು ಹೈನುಗಾರಿಕೆಯಲ್ಲಿ ತೊಡಗಿಕೊಂಡು ಪ್ರಗತಿ ಸಾಧಿಸುತ್ತಿದ್ದಾರೆ. ತಾಲ್ಲೂಕು ಹಾಲು ಉತ್ಪಾದನೆಯಲ್ಲಿ ಬಮೂಲ್ ವ್ಯಾಪ್ತಿಯಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದೆ**
**-ಸಿ.ಪಿ.ಯೋಗೇಶ್ವರ್, ವಿಧಾನ ಪರಿಷತ್ ಸದಸ್ಯ**

ವಿದ್ಯಾರ್ಥಿಗಳು ಶಿಸ್ತು, ಸಂಯಮ ಬೆಳೆಸಿಕೊಂಡು ಓದಿನ ಕಡೆಗೆ ಹೆಚ್ಚು ಗಮನ ನೀಡಿ ಸಾಧನೆ ಮಾಡಬೇಕು. ವಿದ್ಯಾರ್ಥಿ ಜೀವನ ಬಹಳ ಅಮೂಲ್ಯ. ಈ ವೇಳೆಯಲ್ಲಿ ಇತರ ವಿಚಾರ ಬಗ್ಗೆ ಗಮನ ನೀಡದೆ ಓದಿನ ಕಡೆಗೆ ಹೆಚ್ಚು ಒತ್ತು ಕೊಡಬೇಕು. ಇದರಿಂದ ಉತ್ತಮ ಜೀವನ ರೂಪಿಸಿಕೊಳ್ಳಬಹುದು ಎಂದು ಕಿವಿಮಾತು ಹೇಳಿದರು.

---

# ಮಂಗಳಮುಖಿಯರ ಕಿರುಕುಳ: ಆತ್ಮಹತ್ಯೆಗೆ ಶರಣಾದ ಬಾಲಕ

• **ಉದಯವಾಹಿನಿ, ಮೈಸೂರು**

ಮಂಗಳಮುಖಿಯರು ಗುಂಪಾಗಿ ಬಂದು ಕಿರುಕುಳ ನೀಡಿದ್ದಾರೆಂದು ಬೇಸತ್ತ ಬಾಲಕನೊಬ್ಬ ಮನನೊಂದು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿನ ಹೆಜ್ಜೂರು ಗ್ರಾಮದಲ್ಲಿ ನಡೆದಿದೆ. ಹೌದು ಮೃತ ಬಾಲಕನನ್ನು ರಾಹುಲ್ ಮೌರ್ಯ(17) ಎಂದು ಗುರುತಿಸಲಾಗಿದೆ. ಕಳೆದ ನಾಲ್ಕು ತಿಂಗಳಿನಿಂದ ರಾಹುಲ್ ಮೌರ್ಯ ನಾಪತ್ತೆಯಾಗಿದ್ದನು. ಇತ್ತೀಚಿಗೆ ಮನೆಗೆ ವಾಪಾಸ್ ಬಂದಿದ್ದ.

ಈ ವೇಳೆ ಜೂನ್ 23ರಂದು ಕೆಲವು ಮಂಗಳಮುಖಿಯರಿಂದ ರಾಹುಲ್ ಮೌರ್ಯ ಕುಟುಂಬಸ್ಥರ ಜೊತೆ ಜಗಳವೂ ಉಂಟಾಗಿತ್ತು. ನೀವು ನಿಮ್ಮ ಹುಡುಗನನ್ನು ನಮ್ಮೊಂದಿಗೆ ಕಳಿಸಿಕೊಡಿ ಎಂದು ಗಲಾಟೆ ಮಾಡಿದ್ದರು. ಜೊತೆಗೆ, ನಿಮ್ಮ ಮಗನೇ ನಮ್ಮ ಹುಡುಗಿಯನ್ನು ಕರೆದೊಯ್ದಿದ್ದಾನೆಂದು ಆರೋಪಿಸಿ ಮಂಗಳಮುಖಿಯರು ಊರಿನಲ್ಲಿ ಬಂದು ಜೋರಾಗಿ ಗಲಾಟೆಯನ್ನೂ ಮಾಡಿದ್ದರು. ಮಂಗಳಮುಖಿಯರು ಮನೆಯ ಬಳಿ ಗಲಾಟೆ ಮಾಡಿದ ದಿನ ಸಂಜೆ 5 ಗಂಟೆಗೆ ಹೆಜ್ಜೂರು ಗ್ರಾಮದ ಜಮೀನಿನಲ್ಲಿರುವ ಶೆಡ್‌ನಲ್ಲಿ ರಾಹುಲ್ ಮೌರ್ಯ ಆತ್ಮಹತ್ಯೆಗೆ ಶರಣಾಗಿದ್ದಾನೆ.

ಇನ್ನು ಘಟನೆ ಬಗ್ಗೆ ಸೂಕ್ತ ತನಿಖೆ ನಡೆಸುವಂತೆ ತಂದೆ ಕುಮಾರ್ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಮೃತ ರಾಹುಲ್ ಮೌರ್ಯ ಎಳನೀರು ಮಾಡಿಕೊಂಡು ಜೀವನ ಕಟ್ಟಿಕೊಳ್ಳುತ್ತಿದ್ದನು. ಆದರೆ, ಈ ಸ್ಥಳಕ್ಕೆ ಬಂದು ಸ್ನೇಹ ಬೆಳೆಸಿಕೊಂಡಿದ್ದ ಮಂಗಳ ಮುಖಿ ತನ್ನ ಮಗನನ್ನು ಆಗಾಗ ಜೊತೆಗೆ ಕರೆದುಕೊಂಡು ಹೋಗಿ ಕಿರುಕುಳ ನೀಡಿದ್ದಾರೆಂದು ರಾಹುಲ್ ಮೌರ್ಯನ ತಂದೆ ಆರೋಪಿಸಿದ್ದಾರೆ.

---

# ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ ಅಪಘಾತಗಳ ಸಂಖ್ಯೆ ಇಳಿಕೆ

## • ಪೊಲೀಸ್ ಇಲಾಖೆಯ ಕಟ್ಟುನಿಟ್ಟಿನ ಕ್ರಮದಿಂದಾಗಿ ಅಪಘಾತಗಳ ಸಂಖ್ಯೆ ಶೇ. 57ರಷ್ಟು ಇಳಿಕೆ

• **ಉದಯವಾಹಿನಿ ಮಂಡ್ಯ**

ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ-275ರಲ್ಲಿ ಪೊಲೀಸ್ ಇಲಾಖೆಯ ಕಟ್ಟುನಿಟ್ಟಿನ ಕ್ರಮದಿಂದಾಗಿ ಅಪಘಾತಗಳ ಸಂಖ್ಯೆ ಶೇ 57ರಷ್ಟು ಇಳಿಕೆಯಾಗಿದೆ.

ಪೊಲೀಸ್ ಇಲಾಖೆಯ ಅಂಕಿ-ಅಂಶದ ಪ್ರಕಾರ, 2023ರಲ್ಲಿ ಜನವರಿಯಿಂದ ಮೇವರೆಗೆ 288 ಅಪಘಾತಗಳು ಸಂಭವಿಸಿ, 100 ಮಂದಿ ಮೃತಪಟ್ಟು, 301 ಮಂದಿ ಗಾಯಗೊಂಡಿದ್ದರು.

**ಪೊಲೀಸ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ**

2024ರಲ್ಲಿ ಜನವರಿಯಿಂದ ಮೇ ಅಂತ್ಯದವರೆಗೆ 125 ಅಪಘಾತಗಳು ಸಂಭವಿಸಿ, 31 ಮಂದಿ ಸಾವಿಗೀಡಾಗಿದ್ದು, 167 ಮಂದಿ ಗಾಯಗೊಂಡಿದ್ದಾರೆ.

ಮರಣ ಪ್ರಮಾಣ ಶೇ 69ರಷ್ಟು ಮತ್ತು ಗಾಯಾಳುಗಳ ಪ್ರಮಾಣ ಶೇ 45ರಷ್ಟು ಇಳಿಕೆಯಾಗಿದೆ.

ಬೆಂಗಳೂರು-ಮೈಸೂರು ಹೆದ್ದಾರಿ ನಿರ್ಮಾಣವಾದ ನಂತರ ಪ್ರಯಾಣದ ಅವಧಿ 3 ಗಂಟೆಯಿಂದ 90 ನಿಮಿಷಕ್ಕೆ ಇಳಿಕೆಯಾಗಿದೆ. ಆದರೆ, ಸಂಚಾರ ನಿಯಮ ಉಲ್ಲಂಘನೆ ಮತ್ತು ಅತಿವೇಗದ ಚಾಲನೆಯಿಂದ ಈ ಹೆದ್ದಾರಿಯು ಅಪಘಾತಗಳ ತಾಣವಾಗಿ ಮಾರ್ಪಟ್ಟಿತ್ತು.

ಬೆಂಗಳೂರು-ಮೈಸೂರು ಹೆದ್ದಾರಿಯನ್ನು ಡೆತ್ ಫ್ರೀ ಝೋನ್ ಆಗಿ ಮಾಡಲು ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ (ಸಂಚಾರ ಮತ್ತು ರಸ್ತೆ ಸುರಕ್ಷತೆ) ಅಲೋಕ್‌ಕುಮಾರ್ ಅವರು ಪೊಲೀಸ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಸುಗಮ ಸಂಚಾರ ಮತ್ತು ಪ್ರಯಾಣಿಕರ ಸುರಕ್ಷತೆಗಾಗಿ ಹಲವು ಕ್ರಮಗಳನ್ನು ಕೈಗೊಳ್ಳಲು ಸಲಹೆ ನೀಡಿದ್ದಾರೆ.


ಉದಯವಾಹಿನಿ ಚಿತ್ರ

**ಐಟಿಎಂಎಸ್ ಕ್ಯಾಮೆರಾ ಅಳವಡಿಸಿದ್ದು ನಿಯಮ ಉಲ್ಲಂಘನೆಗೆ ಸಂಬಂಧಿಸಿದಂತೆ 22 ದಿನಗಳಲ್ಲಿ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ 2300 ಪ್ರಕರಣ ದಾಖಲಾಗಿವೆ. ಕಟ್ಟುನಿಟ್ಟಿನ ಕ್ರಮದಿಂದಾಗಿ ಅಪಘಾತಗಳ ಸಂಖ್ಯೆ ಇಳಿಕೆಯಾಗಿದೆ**
**-ಎನ್.ಯತೀಶ್, ಎಸ್‌ಪಿ ಮಂಡ್ಯ**

### ವಿರುದ್ಧ ದಿಕ್ಕಿನಲ್ಲಿ ಸಂಚಾರ: ಪ್ರಕರಣ ದಾಖಲು

**ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನ ಗಣಂಗೂರು ಟೋಲ್ ಪ್ಲಾಜಾದಲ್ಲಿ ಸುಂಕ ಕಟ್ಟುವುದನ್ನು ತಪ್ಪಿಸಲು ಹೆದ್ದಾರಿಯಲ್ಲಿ ಹಿಂತಿರುಗಿ ವಿರುದ್ಧ ದಿಕ್ಕಿನಲ್ಲಿ ಸಂಚರಿಸಿ ಸಂಚಾರ ನಿಯಮ ಉಲ್ಲಂಘಿಸಿದ 3 ಸಾರಿಗೆ ಸಂಸ್ಥೆ ಬಸ್ ಮತ್ತು 17 ಖಾಸಗಿ ವಾಹನಗಳ ಚಾಲಕರ ವಿರುದ್ಧ ಶ್ರೀರಂಗಪಟ್ಟಣ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿವೆ.**

**ಐ.ಟಿ.ಎಂ.ಎಸ್ ಅಳವಡಿಕೆ:** ಬೆಂಗಳೂರು-ಮೈಸೂರು ಹೆದ್ದಾರಿಯ ಆಯ್ದ 10 ಸ್ಥಳಗಳಲ್ಲಿ ಇಂಟಲಿಜೆಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಂ (ಐ.ಟಿ.ಎಂ.ಎಸ್) ಕ್ಯಾಮೆರಾಗಳನ್ನು ಹಾಗೂ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಐ.ಟಿ.ಎಂ.ಎಸ್ ಕ್ಯಾಮೆರಾಗಳು ಸಂಚಾರ ಉಲ್ಲಂಘನೆಯನ್ನು ಸೂಕ್ಷ್ಮವಾಗಿ ದಾಖಲಿಸುವ ಸರ್ವರ್‌ಗಳನ್ನು ಹೊಂದಿವೆ. ಕಂಟ್ರೋಲ್ ರೂಂನಲ್ಲಿ ನಿರಂತರ ಕಣ್ಗಾವಲು ವ್ಯವಸ್ಥೆ ಮಾಡಲಾಗಿದೆ.

ಹೆದ್ದಾರಿಯಲ್ಲಿ ದೀಪಗಳ ಅಳವಡಿಕೆ, ಸಂಚಾರ ಸೂಚನಾ ಫಲಕಗಳು, ಸರ್ವಿಸ್ ರಸ್ತೆಯಿಂದ ಹೆದ್ದಾರಿಗೆ ನುಗ್ಗದಂತೆ ತಂತಿಬೇಲಿಯನ್ನು ಹಾಕಿರುವುದು ಸೇರಿದಂತೆ ಹಲವಾರು ಕ್ರಮಗಳನ್ನು ಕೈಗೊಂಡಿದ್ದೇವೆ. ಸಂಚಾರ ನಿಯಮ ಉಲ್ಲಂಘಿಸಿದ ಬಗ್ಗೆ ಸಾರ್ವಜನಿಕರು ಸಾಮಾಜಿಕ ಜಾಲತಾಣದ ಮೂಲಕ ನೀಡಿದ ದೂರು ಆಧರಿಸಿ ಕ್ರಮ ಕೈಗೊಂಡಿದ್ದೇವೆ' ಎನ್ನುತ್ತಾರೆ ಮಂಡ್ಯ ಜಿಲ್ಲೆಯ ಹೆಚ್ಚುವರಿ ಎಸ್ಪಿ ತಿಮ್ಮಯ್ಯ.

---

## ಮಿನಿ ನ್ಯೂಸ್

### ಜು.13ಕ್ಕೆ ಲೋಕ ಅದಾಲತ್

• **ಉದಯವಾಹಿನಿ, ಶಿಡ್ಲಘಟ್ಟ**


ಉದಯವಾಹಿನಿ ಚಿತ್ರ

ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದಂತೆ ಜು.13ರಂದು ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮ ನಡೆಯಲಿದ್ದು, ಎಲ್ಲಾ ಸಾರ್ವಜನಿಕರು ಕಕ್ಷಿದಾರರು ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಪ್ರಧಾನ ಸಿವಿಲ್ ನ್ಯಾಯಾದೀಶರು ಜೆ.ಪೂಜಾ ತಿಳಿಸಿದರು. ನಗರದ ದಿಬ್ಬೂರಹಳ್ಳಿ ರಸ್ತೆಯಲ್ಲಿರುವ ನಾಯ್ಯಾಲಯದ ಆವರಣದಲ್ಲಿ ಪ್ರರ್ತಕರ್ತರೊಂದಿಗೆ ಮಾತನಾಡಿದ ಮಾತನಾಡಿದ ಅವರು ಜು.13ರಂದು ರಾಷ್ಟ್ರೀಯ ಲೋಕಅದಾಲತ್ ಕಾರ್ಯಕ್ರಮ ನಡೆಯಲಿದ್ದು, ಲೋಕ ಅದಾಲತ್ ನ್ಯಾಯಾಲಯದಲ್ಲಿ ನಡೆಯುತ್ತಿರುವ ರಾಜಿಗೆ ಯೋಗ್ಯವಾದ ಪ್ರಕರಣಗಳು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಖುದ್ದಾಗಿ ರಾಜೀ ಮಾಡಿಕೊಳ್ಳುವ ಮೂಲಕ ನ್ಯಾಯಾಲಯದ ಸಮಯ, ಕಕ್ಷಿದಾರರ ಹಣ ಸೇರಿದಂತೆ ಹಲವು ಸಮಸ್ಯೆಗಳಿಗೆ, ಪರಿಹಾರಗಳಿಗೆ ಸೂಕ್ತ ಪರಿಹಾರ ಸಿಗಲಿದ್ದು, ಕಕ್ಷಿದಾರರು ಯಾವುದೇ ವೆಚ್ಚವಿಲ್ಲದೆ ತಮ್ಮ ಪ್ರಕರಣಗಳನ್ನು ಬಗ್ಗೆಹರಿಸಿಕೊಳ್ಳಬೇಕೆಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷ ಎ ನಾರಾಯಣಸ್ವಾಮಿ, ಕಾರ್ಯದರ್ಶಿ ಸಿ.ಜಿ.ಭಾಸ್ಕರ್ ಭಾಗವಹಿಸಿದ್ದರು.

### ತುಮಕೂರಲ್ಲಿ ಕಳ್ಳತನ ಆರೋಪಿಯ ಮೇಲೆ ಪೊಲೀಸರಿಂದ ಫೈರಿಂಗ್

• **ಉದಯವಾಹಿನಿ ತುಮಕೂರು**

ಕಳ್ಳತನದ ಆರೋಪಿ ಮೇಲೆ ಪೊಲೀಸರು ಫೈರಿಂಗ್ ನಡೆಸಿರುವ ಘಟನೆ ತುಮಕೂರು ಜಿಲ್ಲೆಯ ಮಧುಗಿರಿ ಬಳಿ ನಡೆದಿದೆ. ಕಳ್ಳತನದ ಆರೋಪಿ ರಿಜ್ವಾನ್ ಮೇಲೆ ಪೊಲೀಸರಿಂದ ಗುಂಡಿನ ದಾಳಿ ನಡೆಸಿದ್ದಾರೆ.ಈ ವೇಳೆ ಆರೋಪಿ ಕಾಲಿಗೆ ಗುಂಡೇಟು ತಗುಲಿದೆ.

ಆಂಧ್ರದ ಹಿಂದೂಪುರ ಮೂಲದ ರಿಜ್ವಾನ್ ಎಂಬವನಿಗೆ ಗುಂಡೆಟ್ಟು ತಗುಲಿದೆ. ಹಲವು ಕಳ್ಳತನ ಕೇಸ್‌ಗಳಲ್ಲಿ ಆರೋಪಿ ಬೇಕಾಗಿದ್ದ ಎನ್ನಲಾಗಿದೆ. ಈ ವೇಳೆ ಬಂಧಿಸಲು ತೆರಳಿದಾಗ ಪೊಲೀಸರ ಮೇಲೆ ಹಲ್ಲೆಗೆ ಯತ್ನಿಸಿದ್ದಾನೆ. ಈ ವೇಳೆ ಆತ್ಮ ರಕ್ಷಣೆಗಾಗಿ ಮಧುಗಿರಿ ಸಿಪಿಐ ಹನುಮಂತರಾಯಪ್ಪರಿಂದ ರಿಜ್ವಾನ್ ಮೇಲೆ ಪೈಡಿಂಗ್ ಮಾಡಿದ್ದಾರೆ. ಆರೋಪಿ ಕಾಲಿಗೆ ಗುಂಡೇಟು ತಗುಲಿದೆ. ಈಜಿಹಳ್ಳಿ ಬಳಿ ಆರೋಪಿ ರಿಜ್ವಾನ್ ನನ್ನು ಬಂಧಿಸಲು ತೆರಳಿದ್ದಾಗ ಪೊಲೀಸರ ಮೇಲೆ ಹಲ್ಲೆಗೆ ಯತ್ನಿಸಿದ್ದಾನೆ. ಈ ವೇಳೆ ಆತ್ಮ ರಕ್ಷಣೆಗಾಗಿ ಆರೋಪಿ ರಿಜ್ವಾನ್ ಮೇಲೆ ಮಧುಗಿರಿ ಸಿಪಿಐ ಫೈರಿಂಗ್ ಮಾಡಿದ್ದಾರೆ ಎಂದು ತಿಳಿದುಬಂದಿದೆ. ಮಧುಗಿರಿ ಸಿಪಿಐ ಹನುಮಂತರಾಯಪ್ಪರಿಂದ ಆರೋಪಿ ರಿಜ್ವಾನ್ ಕಾಲಿಗೆ ಗುಂಡೇಟು ಬಿದ್ದಿದೆ.

### ಬ್ಯಾಂಕ್ ಖಾತೆಯಲ್ಲಿದ್ದ 1.94 ಲಕ್ಷ ಮಾಯ

• **ಉದಯವಾಹಿನಿ ರಾಮನಗರ**

ಕಾರ್ಖಾನೆಯೊಂದರಲ್ಲಿ ಕೆಲಸ ಮಾಡುವ ಕಾರ್ಮಿಕರೊಬ್ಬರ ಬ್ಯಾಂಕ್ ಖಾತೆಯಲ್ಲಿದ್ದ 1.94ಲಕ್ಷ ಹಣ ಬೇರೊಂದು ಖಾತೆಗೆ ವರ್ಗಾವಣೆ ಮಾಡಿಕೊಂಡಿರುವ ಘಟನೆ ಬಿಡದಿ ಬ್ಯಾಂಕ್ ಆಫ್ ಬರೋಡಾ ಶಾಖೆಯಲ್ಲಿ ನಡೆದಿದೆ. ಸಂಗಬಸವನದೊಡ್ಡಿ ಕಾರ್ಮಿಕ ರೇವಣ್ಣ ಸಿದ್ದಪ್ಪ ಹಣ ಕಳೆದುಕೊಂಡವರು.

ಆಫ್ ಬರೋಡಾ ಶಾಖೆಯಲ್ಲಿ ಖಾತೆ ಹೊಂದಿದ್ದರು. ಇವರ ಫೋನ್ ಪೇ ಏಕಾಏಕಿ ನಿಷ್ಕ್ರಿಯಗೊಂಡಿದೆ. ಬಳಿಕ ಎಟಿಎಂನಲ್ಲಿ ಹಣ ಡ್ರಾ ಮಾಡಲು ಹೋದಾಗ ಹಣ ಬಾರದೆ ಖಾತೆಯಲ್ಲಿ ಬ್ಯಾಲೆನ್ಸ್ ಇಲ್ಲ ಎಂಬ ರಶೀದಿ ಬಂದಿದೆ. ಇದರಿಂದ ಗಾಬರಿಗೊಂಡು ಬ್ಯಾಂಕ್‌ಗೆ ಹೋಗಿ ವಿಚಾರಿಸಿದಾಗ ಹಣ ಯುಪಿಐ ಮೂಲಕ ವರ್ಗಾವಣೆಯಾಗಿರುವುದು ಬೆಳಕಿಗೆ ಬಂದಿದೆ. ಬಿಡದಿ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

### ಕಲುಷಿತ ನೀರು ಕುಡಿದು ವ್ಯಕ್ತಿ ಸಾವು

• **ಉದಯವಾಹಿನಿ ಮುಳಬಾಗಿಲು**

ತಾಲ್ಲೂಕಿನ ಊರುಕುಂಟೆ ಮಿಟ್ಟೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಿಂಜೇನಹಳ್ಳಿ ಗ್ರಾಮದ ವ್ಯಕ್ತಿಯೊಬ್ಬರು ಕಲುಷಿತ ನೀರು ಕುಡಿದು ಮೃತಪಟ್ಟಿರುವುದು ಗೊತ್ತಾಗಿದೆ. ವೆಂಕಟರಮಣಪ್ಪ (50) ಮೃತ ವ್ಯಕ್ತಿ. ಪ್ರಕರಣದಲ್ಲಿ ಐದಕ್ಕೂ ಅಧಿಕ ಮಂದಿ ಅಸ್ವಸ್ಥರಾಗಿದ್ದು, ಎಸ್ ಎನ್ ಆರ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಗ್ರಾಮ ಪಂಚಾಯಿತಿ ಟ್ಯಾಂಕ್ ನಿಂದ ಮನೆಗಳಿಗೆ ನಲ್ಲಿ ಸಂಪರ್ಕ ಕಲ್ಪಿಸಲಾಗಿದ್ದು, ನೀರು ಕಲುಷಿತಗೊಂಡಿತ್ತು ಎನ್ನಲಾಗಿದೆ. 'ವೆಂಕಟರಮಣಪ್ಪ ಎಂಬುವರು ಮೃತಪಟ್ಟಿದ್ದು, ಕೆಲವರು ಅಸ್ವಸ್ಥಗೊಂಡಿರುವುದು ನಿಜ. ಆದರೆ, ನೀರಿನ ಸಮಸ್ಯೆಯಿಂದ ಅಲ್ಲ. ನೀರನ್ನು ಪರೀಕ್ಷೆ ಮಾಡಿದ್ದು, ಕಲುಷಿತವಾಗಿಲ್ಲ. ಟಿಎಚ್‌ಒ ಭೇಟಿ ನೀಡಿ ಪರಿಶೀಲಿಸಿದರು' ಎಂದು ಪಂಚಾಯಿತಿ ಪಿಡಿಒ ಪದ್ಮಾ ತಿಳಿಸಿದರು.


### ಬಂದ್ ಬೆಂಬಲಿಸಲು ಶಾಸಕರ ಮನವಿ

• **ಉದಯವಾಹಿನಿ ತುಮಕೂರು**



ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಕಾಮಗಾರಿ ವಿರೋಧಿಸಿ ಜೂನ್ 25ರಂದು ನಡೆಯುವ ಜಿಲ್ಲಾ ಬಂದ್‌ಗೆ ಶಾಸಕ ಜಿ.ಬಿ.ಜ್ಯೋತಿಗಣೇಶ್ ಬೆಂಬಲ ಸೂಚಿಸಿದ್ದಾರೆ. ಜಿಲ್ಲೆಯ ಸಾರ್ವಜನಿಕರು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಬಂದ್‌ನಲ್ಲಿ ಭಾಗವಹಿಸುವಂತೆ ಮನವಿ ಮಾಡಿದ್ದಾರೆ. ಯಾವುದೇ ಕಾರಣಕ್ಕೂ ಎಕ್ಸ್‌ಪ್ರೆಸ್ ಕೆನಾಲ್ ಕಾಮಗಾರಿ ಮುಂದುವರಿಸಬಾರದು. ನಗರ ಅಭಿವೃದ್ಧಿಯತ್ತ ಸಾಗುತ್ತಿದ್ದು, ಜನಸಂಖ್ಯೆ ಏರಿಕೆಯಾಗುತ್ತಿದೆ. ನೀರಿಗೆ ಬೇಡಿಕೆ ಹೆಚ್ಚಿರುವ ಸಮಯದಲ್ಲಿ ಹೇಮಾವತಿ ನೀರನ್ನು ಮಾಗಡಿ, ರಾಮನಗರಕ್ಕೆ ತೆಗೆದುಕೊಂಡು ಹೋಗುವ ಸರ್ಕಾರದ ಪ್ರಯತ್ನ ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

### ಡಯಾಲಿಸಿಸ್ ಘಟಕ ಉದ್ಘಾಟನೆ


ಉದಯವಾಹಿನಿ ಚಿತ್ರ


• **ಉದಯವಾಹಿನಿ ಮಡಿಕೇರಿ**

ಕುಶಾಲನಗರದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಯಾಲಿಸಿಸ್ ಘಟಕವನ್ನು ಆರೋಗ್ಯ ಖಾತೆ ಸಚಿವ ದಿನೇಶ್ ಗುಂಡೂರಾವ್ ಉದ್ಘಾಟಿಸಿದರು. ಇತ್ತೀಚಿನ ದಿನಗಳಲ್ಲಿ ಮೂತ್ರಪಿಂಡ ವೈಫಲ್ಯ ಪ್ರಕರಣಗಳು ಹೆಚ್ಚುತ್ತಿವೆ. ಅದಕ್ಕಾಗಿಯೇ ನಮ್ಮ ಸರ್ಕಾರ ಬಂದ ಮೇಲೆ 219 ಡಯಾಲಿಸಿಸ್ ಕೇಂದ್ರಗಳನ್ನು ತೆರೆದು 800 ಯಂತ್ರಗಳನ್ನು ಅಳವಡಿಸಿದ್ದೇವೆ ಎಂದು ಹೇಳಿದರು. ಶುಶ್ರೂಷಕರು, ಫಾರ್ಮಸಿಸ್ಟ್, ಲ್ಯಾಬ್ ಅಸಿಸ್ಟೆಂಟ್‌ಗಳ ಕೊರತೆ ಸಾಕಷ್ಟು ಇದೆ. ಗುತ್ತಿಗೆ ಆಧಾರದ ಮೇಲೆ ಇವರ ನೇಮಕಾತಿಗೆ ಅನುಮತಿ ನೀಡುವಂತ ಸರ್ಕಾರದ ಮುಂದೆ ಪ್ರಸ್ತಾವ ಸಲ್ಲಿಸಲಾಗುವುದು ಎಂದರು.

# ಕುಡಿಯುವ ನೀರಿಗಾಗಿ ಸಾರ್ವಜನಿಕರು ಪರದಾಡುವ ಸ್ಥಿತಿ

## ಪಟೇಲ ಕಾಲೋನಿ ಜನರು ನೀರಿಗಾಗಿ ಹಾಹಾಕಾರ, ಪುರಸಭೆ ಮುತ್ತಿಗೆ, ಅಧಿಕಾರಿಗಳ-ಜನರ ಮಧ್ಯೆ ವಾಗ್ವಾದ

• ಉದಯವಾಹಿನಿ,ಚಿಂಚೋಳಿ



ಉದಯವಾಹಿನಿ ಚಿತ್ರ

ಪಟ್ಟಣದ ಚಂದಾಪೂರದ ವಾರ್ಡ್ ನಂಬರ್ 15 ಪಟೇಲ ಕಾಲೋನಿಯಲ್ಲಿ ಕಳೆದ ಎರಡು ತಿಂಗಳಿಂದ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜು ಆಗದೆ ಸಾರ್ವಜನಿಕರು ನೀರಿಗಾಗಿ ಪರದಾಡುತ್ತಿದ್ದಾರೆ ಅಧಿಕಾರಿಗಳ ಗಮನಕ್ಕೆ ತಂದರೂ ಸಹ ಯಾರು ಕ್ಯಾರೆ ಅನ್ನುತ್ತಿಲ್ಲ ಆದಕಾರಣ ಪುರಸಭೆ ಮುತ್ತಿಗೆ ಹಾಕಲಾಗಿದೆ ಎಂದು ಪಟೇಲ ಕಾಲೋನಿಯ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿ ಅಧಿಕಾರಿಗಳ ಮಧ್ಯೆ ವಾಗ್ವಾದ ನಡೆದ ಪ್ರಸಂಗ ನಡೆಯಿತು.

ಪುರಸಭೆ ಸಿಬ್ಬಂದಿವರಿಗೆ ಮುತ್ತಿಗೆ ಹಾಕಿ ಕೇಳಿದರೆ ತಾತ್ಕಾಲಿಕವಾಗಿ ತಕ್ಷಣ ನೀರು ಬಿಡಲಾಗುವುದು ಜುಲೈ 05ರವರೆಗೆ ಕಾಲೋನಿಯ ಕುಡಿಯುವ ನೀರು ಶಾಶ್ವತ ಪರಿಹಾರ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ ಒಂದುವೇಳೆ ಶಾಶ್ವತ ಪರಿಹಾರ ಮಾಡದಿದ್ದರೆ ರಾಜ್ಯ ಹೆದ್ದಾರಿ ತಡೆದು ಉಗ್ರ ಪ್ರತಿಭಟನೆ ಮಾಡಲಾಗುವುದು ಎಂದು ಅಧಿಕಾರಿಗಳ ಎದುರು ಹೇಳಲಾಗಿದೆ ಎಂದು ಪುರಸಭೆ ಸದಸ್ಯ ಸುಲ್ತಾನಬೇಗಂ ಸೈಯದ್ ಖಲೀಲ್ ಪಟೇಲ ತಿಳಿಸಿದ್ದಾರೆ.

ಪ್ರತಿಭಟನಾಕಾರರು ಮಾತನಾಡಿ ಪಟೇಲ ಕಾಲೋನಿಯಲ್ಲಿ ಚರಂಡಿ ಸ್ವಚ್ಚತೆ ಮಾಡುವುದಿಲ್ಲ, ಕುಡಿಯುವ ನೀರು ಸರಬರಾಜು ಮಾಡುತ್ತಿಲ್ಲ,ಬೀದಿ ದ್ವೀಪಗಳಿಲ್ಲ, ಸಿಸಿರಸ್ತೆ ಸಮಸ್ಯೆ,ಮಳೆಯ ನೀರು ಹೊರಗಡೆ ಹೋಗಲು ಸಮಸ್ಯೆ ಹೀಗೆ ಹತ್ತಾರು ಸಮಸ್ಯೆಗಳ ಕುರಿತು ಹತ್ತಾರು ಮನವಿಪತ್ರ ಕೊಟ್ಟದ್ದರು ಪ್ರಯೋಜನವಾಗಿಲ್ಲ,ನಮ್ಮನ್ನು ತಾರತಮ್ಯ ಮಾಡಲಾಗುತ್ತಿದೆ ಜಿಲ್ಲಾಧಿಕಾರಿಗಳು ತಹಸೀಲ್ದಾರ್ ಅವರು ಗಮನಹರಿಸಿ ಮೂಲಭೂತ ಸಮಸ್ಯೆಗಳು ಪರಿಹಾರ ಮಾಡಬೇಕು ಇಲ್ಲಾದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಮಾಡಲಾಗುವುದು ಎಂದು ಸೈಯದ್ ಜಮೀಲ್ ಖಲೀಲ್ ಪಟೇಲ ಆಕ್ರೋಶ ವ್ಯಕ್ತಪಡಿಸಿದರು.

ಪಿಎಸ್ಐ ಹಣಮಂತ ಬಂಕಲಗಿ ಮಧ್ಯೆ ಪ್ರವೇಶಿಸಿ ಸಮಸ್ಯೆಗಳಿಗೆ ಪರಿಹಾರ ಮಾಡುವ ನಿಟ್ಟಿನಲ್ಲಿ ತಿಳಿಹೇಳಿ ಸಮಾಧಾನ ಪಡಿಸಿದರು.

ಮಹ್ಮದ್ ಜೀಯಾ ಉರ್ ರಹೇಮಾನ್, ಮತೀನ ಸೌದಾಗಾರ, ಅಜರ್ ಸೌದಾಗಾರ, ಮಂಜೂರ ಅಹೇಮದ್, ಅಕ್ರಂಪಟೇಲ, ನಿಸಾರ್, ಅಲ್ತಾಫ್ ಖಾನ್, ಶಾಬಾಜ್ ಖಾನ್, ಮುಸ್ತಾಖ್, ಎಂಡಿ ಕುಸೇನ್, ನುಮಾನ್, ಹಸನ್ ಪಟೇಲ, ಜಮೀಲ್ ಪಟೇಲ, ಸೇರಿದಂತೆ ಅನೇಕ ಮಹಿಳೆಯರು ಇದ್ದರು.

**ಜುಲೈ 5ರಂದು ಗಡುವು**

> **ಬೇರೆ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಸಮಸ್ಯೆಗಳು ಕಡಿಮೆ ಆದರೆ ಪಟೇಲ ಕಾಲೋನಿಯಲ್ಲಿ ನೂರಕ್ಕೆ ನೂರರಷ್ಟು ಮೂಲಭೂತ ಸೌಕರ್ಯ ಸಮಸ್ಯೆಗಳಿಂದ ಜನರು ಪರದಾಟ ಮಾಡುತ್ತಿದ್ದಾರೆ. ಶಾಸಕರು,ಜಿಲ್ಲಾ ಉಸ್ತುವಾರಿ ಸಚಿವರು,ಜಿಲ್ಲಾಧಿಕಾರಿಗಳು,ತಹಸೀಲ್ದಾರರು ಮುತುವರ್ಜಿ ವಹಿಸಿ ಸಮಸ್ಯೆ ಪರಿಹಾರ ಮಾಡಬೇಕು**
> -ಮಹ್ಮದ್ ಜೀಯಾ ಉರ್ ರಹೇಮಾನ, ಪಟೇಲ ಕಾಲೋನಿ ನಿವಾಸಿ

### ಮುಗಿಗೆ ತುಪ್ಪ ಸವರಿದ ಹಾಗೆ ಒಬ್ಬಯಿಬ್ಬರಿಗೆ ಪರಿಹಾರ

**ಕಳೆದ ಎರಡು ತಿಂಗಳಿಂದ ಪಟೇಲ ಕಾಲೋನಿಯಲ್ಲಿ ಕುಡಿಯುವ ನೀರು ಬರುತ್ತಿಲ್ಲಾ ನಿವಾಸಿಗಳು ನೀರಿಗಾಗಿ ಪರದಾಟ ಮಾಡುತ್ತಿದ್ದಾರೆ ಪಟ್ಟಣಕ್ಕೆ ನಮ್ಮ ಕಾಲೋನಿ ಹೋಲಿಗೆ ಮಾಡಿದರೆ ಅತಿಹೆಚ್ಚು ತೆರಿಗೆ ಪಟೇಲ ಕಾಲೋನಿಯವರು ನೀಡಿದ್ದಾರೆ. ಆದರೆ ಪಟೇಲ ಕಾಲೋನಿಗೆ ಪುರಸಭೆ, ಕಂದಾಯ ಇಲಾಖೆ ಅಧಿಕಾರಿಗಳು ಯಾವಾಗಲೂ ಮಲತಾಯಿ ಧೋರಣೆ ಮಾಡುತ್ತಿದ್ದಾರೆ,ಕಾಲೋನಿಯಲ್ಲಿ ಬೀದಿ ದ್ವೀಪವಿಲ್ಲ,ಚರಂಡಿ ಸ್ವಚ್ಚತೆಯಿಲ್ಲ,ಸಿಸಿ ರಸ್ತೆ ಸಮಸ್ಯೆ , ಕುಡಿಯುವ ನೀರಿನ ಸಮಸ್ಯೆ, ಮಳೆಯ ನೀರು ಬಂದರೆ ಕಾಲೋನಿಯ ಮನೆಗಳಲ್ಲಿ ಹೋಗುತ್ತದೆ ಆದರೆ ಕಂದಾಯ ಇಲಾಖೆಯವರು ಮುನಿಗೆ ತುಪ್ಪ ಸವರಿದ ಹಾಗೆ ಒಬ್ಬಯಿಬ್ಬರಿಗೆ ಪರಿಹಾರ ಕೊಟ್ಟು ಕೈತೊಳೆದುಕೊಳ್ಳುತ್ತಾರೆ ಬೇರೆ ಹಳ್ಳಿಗಳಲ್ಲಿ ಸೂಕ್ತ ಪರಿಹಾರ ಕೊಡುತ್ತಾರೆ.**

# ಗ್ರಾ. ಪಂ.ಅಧ್ಯಕ್ಷೆಯಾಗಿ ಸುನಂದಾ ಬಸವರಾಜ ವಾಲಿಕಾರ ಆಯ್ಕೆ

• ಶಿವರಾಜಕುಮಾರ ವಾಲಿಕಾರ

• ಉದಯವಾಹಿನಿ, ಇಂಡಿ


ಉದಯವಾಹಿನಿ ಚಿತ್ರ

ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ನಾಲ್ವನೇ ಅತಿದೊಡ್ಡ ಗ್ರಾಮ ಪಂಚಾಯಿತಿ ಎಂಬ ಹೆಗ್ಗಳಿಕೆ ಪಾತ್ರವಾಗಿರುವ ತಡವಲಗಾ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ಇಂದು ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಸುನಂದಾ ಬಸವರಾಜ ವಾಲಿಕಾರ ಅವರು ಭರ್ಜರಿ ಗೆಲುವು ಸಾಧಿಸಿದ್ದಾರೆ.

ತಡವಲಗಾ ಗ್ರಾಮ ಪಂಚಾಯಿತಿಯು ಒಟ್ಟು 29 ಸದಸ್ಯರ ಸಂಖ್ಯಾ ಬಲ ಉಳ್ಳ ಗ್ರಾಮ ಪಂಚಾಯಿತಿ ಇದು ಆಗಿದ್ದು ಇದೇ ದಿನಾಂಕ 16-05-2024 ರಂದು ತಡವಲಗಾ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ರಮೇಶ ಹೋಸಮನಿ ಅವರು ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ಚುನಾವಣೆ ನಡೆಯಿತು, ಗೊತ್ತು ಪಡಿಸಿದ ಅಧಿಕಾರಿಗಳು, ಇಂಡಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಬಾ ಬು ರಾಠೋಡ ಅವರು ಚುನಾವಣೆ ಪ್ರಕ್ರಿಯೆ ಪ್ರಾರಂಭಿಸಿದರು. ಅಧ್ಯಕ್ಷ ಸ್ಥಾನಕ್ಕೆ ಸುನಂದಾ ಬಸವರಾಜ ವಾಲಿಕಾರ ಹಾಗೂ ಮುದಕಪ್ಪ ಕರಕಟ್ಟಿ ಇಬ್ಬರು ನಾಮಪತ್ರ ಸಲ್ಲಿಸಿದರು. ಅಧ್ಯಕ್ಷ ಸ್ಥಾನವು ಸಾಮಾನ್ಯ ವರ್ಗಕ್ಕೆ ಮೀಸಲಾಗಿತ್ತು, ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದ ಹಿನ್ನೆಲೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ತ್ರೀವ ಪೈಪೋಟಿ ನಡೆದಿತ್ತು. ತಡವಲಗಾ ಗ್ರಾಮ ಪಂಚಾಯಿತಿ ಚುನಾವಣೆ ಈ ಬಾರಿ ಶಾಂತಿಯುತ ನಡೆಯಲು ಹೋರ್ತಿ ಪೋಲಿಸ್ ಠಾಣೆ ಪಿಎಸ್ಐ ಸೀತಾರಾಮ ಲಮಾಣಿ ಅವರ ನೇತೃತ್ವದಲ್ಲಿ ವ್ಯಾಪಕ ಪೋಲಿಸ್ ಬಂದೊಬಸ್ತ್ ಕೈಗೊಳ್ಳಲಾಯಿತು, ನಂತರ ಅಧ್ಯಕ್ಷರಾಗಿ ಆಯ್ಕೆಯಾದ ಶ್ರೀಮತಿ ಸುನಂದಾ ಬಸವರಾಜ ವಾಲಿಕಾರ ಸುದ್ದಿಗಾರರೊಂದಿಗೆ ಮಾತನಾಡಿ ಅವರು ತಡವಲಗಾ ಗ್ರಾಮದ ಸಮಗ್ರ ಅಭಿವೃದ್ಧಿಗಾಗಿ ಎಲ್ಲಾ ಸರ್ವ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ತಡವಲಗಾ ಗ್ರಾಮದ ಅಭಿವೃದ್ಧಿಗಾಗಿ ಶ್ರಮಿಸುವುದಾಗಿ ಅವರು ಹೇಳಿದರು.

ಪಿಡಿಒ ಬಿ ಜಿ ರಾಠೋಡ, ಕಾರ್ಯದರ್ಶಿ ಶ್ರೀಮಂತ ಏನ್ ನಾಮದಾರ ಇತರರು ಇದ್ದರು.

> **ಈ ಇಬ್ಬರ ನಾಮಪತ್ರ, ಕ್ರಮಬದ್ಧವಾಗಿದ್ದ ಹಿನ್ನೆಲೆಯಲ್ಲಿ, ಕೊರಮ ಬರತಿ ಆದ ಹಿನ್ನೆಲೆಯಲ್ಲಿ ಚುನಾವಣೆ ಪ್ರಕ್ರಿಯೆ ಆರಂಭಿಸಿದರು, ಅಧ್ಯಕ್ಷ ಸ್ಥಾನಕ್ಕೆ ಮುದುಕಪ್ಪ ಕರಕಟ್ಟ ಪರ 11 ಮತ ಬಂದರೆ, ಸುನಂದಾ ಬಸವರಾಜ ವಾಲಿಕಾರ ಪರ 18 ಮತ ಬಂದವು. ಕೊನೆಗೂ ಅತಿ ಹೆಚ್ಚು ಮತ ಪಡೆದ ಸುನಂದಾ ಬಸವರಾಜ ವಾಲಿಕಾರ ಅವರು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ**
> -ಬಾಬು ರಾಠೋಡ, ಕಾರ್ಯನಿರ್ವಾಹಕ ಅಧಿಕಾರಿ

# ಸೊಳ್ಳೆಗಳಿಂದ ಹರಡುವ ರೋಗಗಳು ಕುರಿತು ಒಂದು ದಿನದ ಕಾರ್ಯಾಗಾರ ಸಭೆ

• ಉದಯವಾಹಿನಿ, ಸಿಂಧನೂರು


ಉದಯವಾಹಿನಿ ಚಿತ್ರ

ಭಾರತ ಸರ್ಕಾರದ ಆಶಯದಂತೆ 2025 ರ ಹೊತ್ತಿಗೆ ಹರಡುವ ರೋಗಗಳು ನಿಯಂತ್ರಣ ರಾಷ್ಟ್ರೀಯ ರೋಗವಾಹಕ ಆಶ್ರೀತರೋಗಗಳಾದ ಸೊಳ್ಳೆಗಳಿಂದ ಹರಡುವ ಡೆಂಗ್ಯೂ, ಚಿಕುಂಗುನ್ಯಾ, ಮೆದಳುಜ್ವರ, ಆನೆಕಾಲುರೋಗ, ಮಲೇರಿಯಾ ರೋಗ ಗಳಂಥಹ ಸೊಳ್ಳೆಗಳಿಂದ ಹರಡುವ ರೋಗಗಳ ಹತೋಟಿ, ನಿಯಂತ್ರಣವು ಮತ್ತು ನಿರ್ಮೂಲನೆ ನಮ್ಮ ನಿಮ್ಮೆಲ್ಲರ ಆದ್ಯ ಕರ್ತವ್ಯವಾಗಿದ್ದು, ಮುನ್ನೆಚ್ಚರಿಕೆ ಕ್ರಮಕ್ಕಾಗಿ ತಾಲ್ಲೂಕಿನ ವಿಜ್ಞಾನ ಶಿಕ್ಷಕರಿಗೆ, ತಾಲ್ಲೂಕು ಆರೋಗ್ಯ ಇಲಾಖೆ ವತಿಯಿಂದ ಒಂದು ದಿನದ ಕಾ ರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಒಂದು ದಿನದ ಕಾರ್ಯಾಗಾರ ಸಭೆ ಕುರಿತು ಮಾತನಾಡಿದ. ಆರೋಗ್ಯ ಇಲಾಖೆ ಶೈಕ್ಷಣಿಕಧಿಕಾರಿ ಗೀತಾ ಹಿರೇಮಠ ಅವರು ಕಾರಣ ಪ್ರತಿ ವರ್ಷದಂತೆ ಈ ವರ್ಷವೂ ಸಾರ್ವಜನಿಕ ಕ್ಷೇತ್ರದಲ್ಲಿ ಜವಾಬ್ದಾರಿಯುತ ಸ್ಥಾನದಲ್ಲಿರುವ ವಿಜ್ಞಾನ ಶಿಕ್ಷಕರಿಗೆ ಮತ್ತು ಗ್ರಾಮ.ಪಂ. ಅಭಿವೃದ್ಧಿ ಅಧಿಕಾರಿಗಳಿಗೆ ಜಿಲ್ಲಾ ವಿ.ಬಿ.ಡಿ.ಸಿ ಅಧಿಕಾರಿಗಳ ಕಾರ್ಯಾಲಯ ಮತ್ತು ತಾಲ್ಲೂಕಾರೋಗ್ಯಾಧಿಕಾರಿಗಳ ಕಾರ್ಯಾಲಯ ಜಂಟಿಯಾಗಿ ಅರ್ಧ ದಿನ ಸೊಳ್ಳೆಗಳಿಂದ ಹರಡುವ ರೋಗಗಳು ಮತ್ತು ನಮ್ಮ ನಿಮ್ಮೆಲ್ಲರ ಜವಾಬ್ದಾರಿಗಳು ಕುರಿತ ತರಬೇತಿ/ಪುನರ್ ಮನನ ಕಾರ್ಯಾಗಾರವನ್ನು ದಿನಾಂಕ : 5-7-2024 ರಂದು ಕೈಗೊಳ್ಳಲು ನಿರ್ಧರಿಸಲಾಗಿದೆ ಕಾರಣ ಮಾನ್ಯರಾದ ತಾವುಗಳು ಕಾರ್ಯಕ್ರಮಕ್ಕೆ ಪೂರಕ ತಯ್ಯಾರಿಯೊಂದಿಗೆ ಸಂಪೂರ್ಣ ಸಹಕಾರ ನೀಡಲು ಈ ಕಾರ್ಯಾಗಾರ ಸಭೆ ಕೋರಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮೇಲ್ವಿಚಾರಕ ಎಸ್ ಎಫ್ ಹಣಗಿ ಅಂಬ್ರೇಶ್ ಪದ್ಮಾ ಹನುಮಪ್ಪ ಸೇರಿದಂತೆ ತಾಲ್ಲೂಕು ವಿಜ್ಞಾನ ಬೋಧನೆ ಶಿಕ್ಷಕರು ಶಿಬಿರದಲ್ಲಿ ಹಾಜರಿದ್ದರು.

# ಕಾನೂನು ಬಾಹಿರವಾಗಿ ಜಾಹೀರಾತು ಬೋರ್ಡ್ ಅಳವಡಿಕೆ

• ಉದಯವಾಹಿನಿ, ಸಿಂಧನೂರು



**ಸೂಕ್ತ ಕಾನೂನು ಕ್ರಮಕ್ಕೆ ಆಗ್ರಹ**

ನಗರದ ಗಾಂಧಿಸರ್ಕಲದಿಂದ ಕುಷ್ಟಗಿ ರಸ್ತೆಯ (SH-30) ಎಪಿಎಂಸಿವರೆಗೆ 4 ಬೃಹತ್ ಗಾತ್ರದ ಜಾಹೀರಾತು ಬೋರ್ಡಗಳನ್ನು ಸಿಂಧನೂರು ನಗರಸಭೆಯವರು ಖಾಸಗಿ ಯವರಿಗೆ ಈ ಬೋರ್ಡ್‌ಗಳು ಗಳನ್ನು.

ಹಾಕಿಸಿದ್ದ ಇದರ ಬಾಡಿಗೆಯನ್ನು ನಗರಸಭೆಯವರು ತೆಗೆದುಕೊಳ್ಳುವುದರ ವಿರುದ್ಧ ಕರ್ನಾಟಕ ರಕ್ಷಣಾ ವೇದಿಕೆ (ಎಚ್.ಶಿವರಾಮೇಗೌಡ ಬಣ) ತಾಲ್ಲೂಕು ಅಧ್ಯಕ್ಷರಾದ ಜಿ. ಸುರೇಶ್ ಗೊಬ್ಬರ ಕಲ್ ಹಾಗೂ ನಗರ ಘಟಕ ಅಧ್ಯಕ್ಷ ದಾವಲಸಾಬ್ ದೊಡ್ಡ ಮನೆ ಜಂಟಿಯಾಗಿ ಜಿಲ್ಲಾ ಲೋಕಾಯುಕ್ತರಿಗೆ ದೂರ ನೀಡಿದ್ದಾರೆ.

ನಗರದ ಕುಷ್ಟಗಿ ರಸ್ತೆಯ ಜಾಹೀರಾತು ಫಲಕಗಳನ್ನು ಹಾಕಲು ಪರವಾನಿಗೆ ಕೊಟ್ಟಿರುತ್ತಾರೆ.ಈ ರಸ್ತೆಯು ರಾಜ್ಯಹೆದ್ದಾರಿಗೆ ಸಂಬಂಧಿಸಿದ್ದು PWDಇಲಾಖೆಯ ಮಾಲೀಕತ್ವದಲ್ಲಿರುತ್ತದೆ. ಕಾನೂನುಬಾಹಿರವಾಗಿ ಖಾಸಗಿಯವರಿಗೆ ಬಾಡಿಗೆ ಕೊಟ್ಟು ಹಣ ಪಡೆಯುತ್ತಿರುವುದು ಎಷ್ಟು ಸರಿ PWD ಇಲಾಖೆಯ E.E. ರಾಯಚೂರು ಇವರು ನಗರಸಭೆಯವರಿಗೆ ಸದರಿ ಬೋರ್ಡ ಹಾಕಲು ಪರವಾನಿಗೆ ಕೊಟ್ಟಿರುವುದಿಲ್ಲ. ಹೈಕೋರ್ಟ ಆದೇಶ ಪ್ರಕಾರ ರಾಜ್ಯ ಹೆದ್ದಾರಿಯನ್ನು ಯಾರೂ ಅತಿಕ್ರಮಣ ಮಾಡುವಂತಿಲ್ಲ.

ಈ ಬಗ್ಗೆ ಸಿಂಧನೂರು ನ್ಯಾಯಾಲಯ ಮತ್ತು ಮಾನವ ಹಕ್ಕುಗಳ ಆಯೋಗ ಸಹ ಆದೇಶ ನೀಡಿರುತ್ತದೆ. ಖಾಸಗಿ ಗುತ್ತೇದಾರರೊಂದಿಗೆ ಹೊಂದಾಣಿಕೆ ಮಾಡಿಕೊಂಡು ತಮ್ಮದಲ್ಲದ ಜಾಗದ ಮೇಲೆ ಬೃಹತ್ ಪ್ರಮಾಣದ ಬೋರ್ಡ ಹಾಕಿ ಜನರ ಸಾವಿಗೆ ಕಾರಣರಾಗಿರುತ್ತಾರೆ ನಗರಸಭೆಯವರು. ಈಗಾಗಲೇ ಬಾಂಬೇ ಸಿಟಿಯಲ್ಲಿ ಬೋರ್ಡ ಬಿದ್ದು 14ಜನ ಮೃತಪಟ್ಟಿದ್ದನ್ನು ಇಲ್ಲಿ ನೆನಪಿಸಬೇಕಾಗಿದೆ. ಕೂಡಲೇ ನಗರಸಭೆಯವರ ವಿರುದ್ಧ ತಾವು ಸ್ವಯಂ ದೂರು ದಾಖಲಿಸಿಕೊಂಡು ಸೂಕ್ತ ಕ್ರಮ ಕೈಗೊಳ್ಳಬೇಕೆಂದರು.

# ಆಯುಷ್ ಚಿಕಿತ್ಸಾಪದ್ಧತಿಯ ಪ್ರಯೋಜನ ಪಡೆಯಲು ಕರೆ

• ಉದಯವಾಹಿನಿ, ಚಿತ್ರದುರ್ಗ


ಉದಯವಾಹಿನಿ ಚಿತ್ರ

ಆಯುಷ್ ಆಯುರ್ವೇದ ಆರೋಗ್ಯದ ಮೇಲೆ ಯಾವುದೇ ವ್ಯತಿರಿಕ್ತ ಅಡ್ಡಪರಿಣಾಮ ಬೀರದ ಔಷಧೀಯ ಪದ್ಧತಿಯಾಗಿದ್ದು ಇತ್ತೀಚೆಗೆ ಜನರು ಹೆಚ್ಚಿನ ಪ್ರಮಾಣದಲ್ಲಿ ಈ ಪದ್ದಯಕಡೆ ಮುಖ ಮಾಡುತ್ತಿರುವುದು ಸಂತೋಷದಾಯಕ ವಿಷಯವಾಗಿದೆ ಆಯುಷ್ ಎಂಬುದು ಆಯುರ್ವೇದ, ಯೋಗ, ನ್ಯಾಚುರೋಪತಿ, ಯುನಾನಿ, ಸಿದ್ಧ, ಸೋವಾ ರಿಗ್ಪಾ, ಹೋಮಿಯೋಪತಿಯ ಸಂಕ್ಷಿಪ್ತ ರೂಪವಾಗಿದೆ.

ಆಯುಷ್ ಇಲಾಖೆಯ ಎಲ್ಲಾ ಆರೋಗ್ಯ ಮತ್ತು ಕ್ಷೇಮ ಮಂದಿರಗಳಲ್ಲಿ ನುರಿತ ವೈದ್ಯಾಧಿಕಾರಿಗಳಿದ್ದು ಸಂಪೂರ್ಣ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ, ರೋಗಿಗಳಿಗೆ ರೋಗಾನುಸಾರ ಯೋಗಭ್ಯಾಸ ಮಾಡಿಸಲು ಯೋಗ ಶಿಕ್ಷಕರೂ ಇದ್ದು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಆಯುಷ್ ಇಲಾಖೆಯ ಜಿಲ್ಲಾ ವೈದ್ಯಾಧಿಕಾರಿ ಡಾ. ಚಂದ್ರಕಾಂತ ನಾಗಸಮುದ್ರ ತಿಳಿಸಿದರು.

ಆಯುಷ್ ಕ್ಷೇಮ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಪಿ.ವಿಜಯಲಕ್ಷ್ಮಿ ಅಧ್ಯಕ್ಷತೆ ವಹಿಸಿದ್ದ ಈ ಕಾರ್ಯಕ್ರಮದಲ್ಲಿ ಸೊಂಡೆಕೆರೆ ಆಯುಷ್ ವೈದ್ಯಾಧಿಕಾರಿ ಡಾ. ನಾಗರಾಜ್ ನಾಯಕ್, ಸಮುದಾಯ ಆರೋಗ್ಯಾಧಿಕಾರಿ ರಮೇಶ್, ದೈಹಿಕ ಶಿಕ್ಷಕ ಕೊಲ್ಲಪ್ಪಮಾಸ್ಟರ್ ಸಿಬ್ಬಂದಿ ಶಾರದಮ್ಮ, ಗ್ರಾಮದ ಮುಖಂಡರಾದ ಚಿದಾನಂದಸ್ವಾಮಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಆಯುಷ್ ಇಲಾಖೆ ವತಿಯಿಂದ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಯೋಗ ತರಬೇತುದಾರ ರವಿ ಕೆ.ಅಂಬೇಕರ್ ನೇತೃತ್ವದಲ್ಲಿ ಏರ್ಪಡಿಸಿದ್ದ ಯೋಗ ಪ್ರದರ್ಶನದಲ್ಲಿ ಶಾಲಾ ಮಕ್ಕಳು ಸೇರಿದಂತೆ ಶಿಕ್ಷಕರು, ಆಶಾ ಕಾರ್ಯಕರ್ತೆಯರು ಗ್ರಾಮದ ಮುಖಂಡರು ಪಾಲ್ಗೊಂಡಿದ್ದರು.

### ಕರಪತ್ರಗಳ ಬಿಡುಗಡೆ

**ಚಿತ್ರದುರ್ಗ ತಾಲ್ಲೂಕಿನ ಜಂಪಣ್ಣ ನಾಯಕನ ಕೋಟೆ ಗ್ರಾಮದ ಸರ್ಕಾರಿ ಆಯುಷ್ ಆರೋಗ್ಯ ಕ್ಷೇಮ ಕೇಂದ್ರದಲ್ಲಿ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಇಂದು ಆಯೋಜಿಸಿದ್ದ ಕಾರ್ಯಕ್ರಮವನ್ನು ಆಯುಷ್ ಇಲಾಖೆಯ ಸೌಲಭ್ಯಗಳು ಮತ್ತು ಆಯುರ್ವೇದದ ಪ್ರಯೋಗಗಳನ್ನು ತಿಳಿಸುವ ಕರಪತ್ರಗಳನ್ನು ಬಿಡುಗಡೆ ಮಾಡಿ ಮಾತನಾಡಿದರು.**

# ಮನೆಗೆ ನುಗ್ಗಿ 3.95 ಲಕ್ಷ ಮೌಲ್ಯದ ಚಿನ್ನಾಭರಣ ದರೋಡೆ

• ಉದಯವಾಹಿನಿ, ಚಳ್ಳಕೆರೆ


ಉದಯವಾಹಿನಿ ಚಿತ್ರ

ಮನೆಯ ಹಿಂಬಾಗಿಲು ಮುರಿದು ಒಳನುಗ್ಗಿದ ಮೂವರು ಕಳ್ಳರು, ಮನೆಯಲ್ಲಿದ್ದವರಿಗೆ ಚಾಕು ತೋರಿಸಿ, ಅವರ ಮೇಲೆ ಹಲ್ಲೆ ನಡೆಸಿ ಚಿನ್ನಾಭರಣ ಹಾಗೂ ನಗದು ದೋಚಿ ಪರಾರಿಯಾಗಿರುವ ಘಟನೆ ಶನಿವಾರ ತಡರಾತ್ರಿ ನಗರದ ಬೆಂಗಳೂರು ರಸ್ತೆಯ ನಿರ್ಮಲ ಲಾಡ್ಜ್ ಬಳಿಯ ಮೇಗಳ ಮನೆ ಸಣ್ಣನಿಂಗಪ್ಪ ಬಡಾವಣೆಯಲ್ಲಿ ನಡೆದಿದೆ.

ದರೋಡೆಕೋರರ ತಂಡವು 25,000 ನಗದು, 3.95 ಲಕ್ಷ ಮೌಲ್ಯದ ಚಿನ್ನಾಭರಣ, ಬೆಳ್ಳಿ ವಸ್ತುಗಳನ್ನು ದೋಚಿಕೊಂಡು ಪರಾರಿಯಾಗಿದೆ. ಹಲ್ಲೆಗೊಳಗಾದ ಶಿಕ್ಷಕ ಬಿ.ಈರಣ್ಣ ಮತ್ತು ಪತ್ನಿ ರಾಧಾ ಅವರನ್ನು ನಗರದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾದೆ. 'ಕಳ್ಳರನ್ನು ನೋಡಿ ಗಾಬರಿಯಿಂದ ಕಿರುಚಾಡಿದಾಗ, ದುಷ್ಕರ್ಮಿಗಳು ಪತ್ನಿಯ ಎಡಗಾಲಿಗೆ ಕೋಲಿನಿಂದ ಥಳಿಸಿದರು.

ನಂತರ ಇಬ್ಬರನ್ನೂ ಪಂಚೆ, ಟವೆಲ್‌ನಿಂದ ಕಟ್ಟಿ ಹಾಕಿ ಮನೆಯಲ್ಲಿದ್ದ ನಗದು ಹಾಗೂ ಚಿನ್ನಾಭರಣವನ್ನು ದೋಚಿದರು. ನನ್ನ ಬೆನ್ನಿಗೆ ಕೋಲಿನಿಂದ ಹೊಡೆದು ಇಬ್ಬರಿಗೂ ಪ್ರಾಣ ಬೆದರಿಕೆ ಹಾಕಿದರು. ಪತ್ನಿಯ ಮೈಮೇಲಿದ್ದ ಆಭರಣ ಕಿತ್ತುಕೊಂಡು ಪರಾರಿಯಾದರು' ಎಂದು ಈರಣ್ಣ ಹೇಳಿದ್ದಾರೆ. ಈರಣ್ಣ ಅವರು ಚಳ್ಳಕೆರೆ ತಾಲ್ಲೂಕಿನ ಹಿರೇಮಧುರೆ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಟಿ.ಕುಮಾರ್, ಡಿವೈಎಸ್ಪಿ ಟಿ.ಬಿ.ರಾಜಣ್ಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಆಸ್ಪತ್ರೆಗೆ ಭೇಟಿ ನೀಡಿ ಹಲ್ಲೆಗೊಳಗಾದವರಿಗೆ ಆತ್ಮಸ್ಥೈರ್ಯ ತುಂಬಿದರು.

# ರೈಲಿನಲ್ಲಿ 34 ಲಕ್ಷ ಮೌಲ್ಯದ ಗಾಂಜಾ ಪತ್ತೆ!

• ಉದಯವಾಹಿನಿ, ದಾವಣಗೆರೆ

ಒಡಿಶಾದಿಂದ ಬೆಂಗಳೂರಿಗೆ ಸಂಚರಿಸುತ್ತಿದ್ದ 'ಟಾಟಾ ನಗರ' ರೈಲಿನಲ್ಲಿ ಸಾಗಣೆ ಮಾಡುತ್ತಿದ್ದ 34 ಲಕ್ಷ ಮೌಲ್ಯದ 34 ಕೆ.ಜಿ. ಗಾಂಜಾವನ್ನು ರೈಲ್ವೆ ಪೊಲೀಸರು ವಶಪಡಿಸಿಕೊಂಡಿದ್ದಾರೆ. ಚಿತ್ರದುರ್ಗ ಸಮೀಪದಲ್ಲಿ ರೈಲು ಬೋಗಿಯನ್ನು ಪೊಲೀಸರು ಪರಿಶೀಲನೆ ಮಾಡಿದಾಗ ಗಾಂಜಾ ಪತ್ತೆಯಾಗಿದೆ.17 ಕೆ.ಜಿ. ತೂಕದ ಎರಡು ಚೀಲಗಳಲ್ಲಿ ತುಂಬಿದ್ದ ಗಾಂಜಾವನ್ನು ಜಪ್ತಿ ಮಾಡಿದ್ದಾರೆ. ಗಾಂಜಾವನ್ನು ಒಂದು ಬೋಗಿಯಲ್ಲಿಟ್ಟಿದ್ದ ಆರೋಪಿಗಳು ಮತ್ತೊಂದು ಬೋಗಿಯಲ್ಲಿ ಆಸೀನರಾಗಿದ್ದರು. ಪೊಲೀಸರು ಗಾಂಜಾ ಪತ್ತೆ ಮಾಡುತ್ತಿದ್ದಂತೆ ತಲೆ ಮರೆಸಿಕೊಂಡಿದ್ದಾರೆ. ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸಿ ಆರೋಪಿಗಳ ಪತ್ತೆಗೆ ದಾವಣಗೆರೆ ರೈಲ್ವೆ ಪೊಲೀಸರು ಕಾರ್ಯಾಚರಣೆ ನಡೆಸಿದ್ದಾರೆ.

# ಉಪ್ಪಾರ ಸಮುದಾಯದ ಶೈಕ್ಷಣಿಕ ಸಾಧನೆ ಹೆಮ್ಮೆ

• ಉದಯವಾಹಿನಿ, ಕಡೂರು



ಉದಯವಾಹಿನಿ ಚಿತ್ರ

ಉಪ್ಪಾರ ಸಮಾಜದ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಅತ್ಯುತ್ತಮ ಸಾಧನೆ ಮಾಡಿ ಅತ್ಯುನ್ನತ ಹುದ್ದೆಗಳಲ್ಲಿದ್ದಾರೆ ಎಂಬುದು ಹೆಮ್ಮೆಯ ವಿಚಾರ ಎಂದು ಶಾಸಕ ಕೆ.ಎಸ್. ಆನಂದ್ ಹೇಳಿದರು. ಚಿಕ್ಕಮಗಳೂರು ಜಿಲ್ಲಾ, ತಾಲ್ಲೂಕು ಉಪ್ಪಾರ ಸಂಘ ಕಡೂರಿನಲ್ಲಿ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರದಲ್ಲಿ ಅವರು ಮಾತನಾಡಿದರು. 'ಯಾವುದೇ ಸಮಾಜದ ಅಭಿವೃದ್ಧಿಗೆ ಸಂಘಟನೆ ಮತ್ತು ಶಿಕ್ಷಣ ಬಹುಮುಖ್ಯ. ವೈಯುಕ್ತಿಕ ಹಿತಾಸಕ್ತಿ ಬಿಟ್ಟು ಪರಸ್ಪರ ಸಹಕಾರದೊಂದಿಗೆ ಸಂಘಟಿತರಾಗಿ ಸಮಾಜದ ಹಿತಾಸಕ್ತಿ ಕಾಪಾಡುವಲ್ಲಿ ಎಲ್ಲರೂ ಶ್ರಮಿಸಬೇಕು. ಉಪ್ಪಾರ ಜನಾಂಗದ ಬಗ್ಗೆ ಅಪಾರ ಪ್ರೀತಿ, ಗೌರವವಿದೆ. ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಉಪ್ಪಾರ ಸಮುದಾಯ ಭವನಕ್ಕೆ ಸಹಕಾರ ನೀಡುತ್ತೇನೆ' ಎಂದರು.

ಭಗೀರಥ ಪೀಠದ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಮಾತನಾಡಿದರು. ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಸಾಧಕ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು .ಉಪ್ಪಾರ ಸಮಾಜದ ಜಿಲ್ಲಾ ಘಟಕದ ಅಧ್ಯಕ್ಷ ಮಲ್ನಾಡ್ ನಾಗರಾಜ್ ಅಧ್ಯಕ್ಷತೆ ವಹಿಸಿದ್ದರು. ನಿವೃತ್ತ ಶಿಕ್ಷಕ ಟಿ.ಆರ್. ಲಕ್ಕಪ್ಪ ಪ್ರಸ್ತಾವಿಕವಾಗಿ ಮಾತನಾಡಿದರು. ತರೀಕೆರೆ ಶಾಸಕ ಜಿ.ಎಚ್.ಶ್ರೀನಿವಾಸ್, ಉಪ್ಪಾರ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ವೈ.ಎಂ.ತಿಪ್ಪೇಶ್, ತಾಲ್ಲೂಕು ಅಧ್ಯಕ್ಷ ಜಿ.ಸತೀಶ್, ಉಪ್ಪಾರ ಸಮಾಜದ ತಾಲ್ಲೂಕು ಘಟಕದ ಅಧ್ಯಕ್ಷ ಲೋಕೇಶ್ ಬಾಬು, ಪ್ರಧಾನ ಕಾರ್ಯದರ್ಶಿ ಎನ್.ಧನಂಜಯ, ಜಿ.ಎಂ.ಲಕ್ಷ್ಮಣ, ಮೀನುಗಾರಿಕಾ ಇಲಾಖೆ ಸಹಾಯಕ ನಿರ್ದೇಶಕಿ ಪಂಕಜ, ಎಂ.ಕೆ.ಸತೀಶ್, ಪಿ.ಎಲ್.ಡಿ.ಬ್ಯಾಂಕ್ ಮಾಜಿ ಅಧ್ಯಕ್ಷ ವಿರೂಪಾಕ್ಷಪ್ಪ, ಸಮಾಜದ ಮುಖಂಡರು ಇದ್ದರು.

# ಪ್ರತಿಯೊಂದು ಹಳ್ಳಿಗಳಲ್ಲಿ ಕರಪತ್ರ, ಪೋಸ್ಟರ್‌ಗಳು ಅಂಟಿಸಿ ಪ್ರಚಾರ

## ಜೂ.26 ಮತ್ತು 27ರಂದು ರೇಣುಕಾಚಾರ್ಯರ ಜಯಂತಿ ಯುಗಮಾನೋತ್ಸವ ಅದ್ದೂರಿಯಾಗಿ ಆಚರಣೆ

• ಉದಯವಾಹಿನಿ,ಚಿಂಚೋಳಿ


ಉದಯವಾಹಿನಿ ಚಿತ್ರ

**ವಾಹನದ ಮೂಲಕ ಸಂದೇಶ ರವಾನೆ**

ಪಟ್ಟಣದ ಹಾರಕೂಡ ಚನ್ನಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಆದಿ ಜಗದ್ಗುರು ರೇಣುಕಾಚಾರ್ಯರ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮವು ಇದೆ ಜೂನ್ 26ಮತ್ತು 27ರಂದು ಅತ್ಯಂತ ವಿಜೃಂಭಣೆಯಿಂದ ಅದ್ದೂರಿಯಾಗಿ ಆಚರಣೆ ಮಾಡಲಾಗುವುದು ಎಂದು ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ಶರಣುಪಾಟೀಲ ಮೋತಕಪಳ್ಳಿ ಹೇಳಿದರು. ಪಟ್ಟಣದ ಹಾರಕೂಡ ಚನ್ನಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಕರೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಈಗಾಗಲೇ ಜಯಂತಿ ಯುಗ ಮಾನೋತ್ಸವ ಕಾರ್ಯಕ್ರಮದ ಪ್ರಚಾರಕ್ಕಾಗಿ ತಾಲ್ಲೂಕಿನಾದ್ಯಂತ ಪ್ರತಿಯೊಂದು ಹಳ್ಳಿಗಳಲ್ಲಿ ಕರಪತ್ರ ಮತ್ತು ಪೋಸ್ಟರ್‌ಗಳು ಅಂಟಿಸಿ ಪ್ರಚಾರ ವಾಹನದ ಮೂಲಕ ಸಂದೇಶ ರವಾನಿಸಲಾಗಿದೆ. ಜೂನ್ 26ರಂದು ಬೆಳಿಗ್ಗೆ 7ಗಂಟೆಗೆ ಬಾಳೆ ಹೊನ್ನೂರ ರಂಭಾಪುರಿ ಪೀಠದ ಶ್ರೀ ಮದ್‌ರಂಭಾಪುರಿ ವೀರಸಿಂಹಾಸನಾದೀಶ್ವರ 1008 ಪ್ರಸನ್ನ ರೇಣುಕ ಡಾ.ವೀರಸೋಮೇಶ್ವರ ರಾಜ ದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ಪಟ್ಟಣಕ್ಕೆ ಆಗಮಿಸಲಿದ್ದು ಭವ್ಯ ಮೆರವಣಿಗೆಯ ಮೂಲಕ ಹಾರಕೂಡ ಮಠಕ್ಕೆ ಕರೆದುಕೊಂಡು ಹೋಗಲಾಗುವುದು,8ಗಂಟೆಗೆ ಇಷ್ಟಲಿಂಗ ಮಹಾಪೂಜೆ ಕಾರ್ಯಕ್ರಮ ಜರುಗಲಿದ್ದು,ಸಾಯಂಕಾಲ 4ಗಂಟೆಗೆ ಧಾರ್ಮಿಕ ಸಭೆ ಜರುಗಲಿದೆ.

ಜೂನ್ 27ರಂದು ಬೆಳಿಗ್ಗೆ 7ಗಂಟೆಗೆ ಜಂಗಮರಿಗೆ ಅಯ್ಯಾಚಾರ ಸಂಸ್ಕಾರ ಮತ್ತು ಲಿಂಗದೀಕ್ಷೆ ಕೊಡುವ ಕಾರ್ಯಕ್ರಮ ನಡೆಯಲಿದೆ,ಸಾಯಂಕಾಲ 4ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದೆ ಕಾರ್ಯಕ್ರಮದಲ್ಲಿ ಹಾರಕೂಡ ಮಠದ ಪೂಜ್ಯ ಚನ್ನವೀರ ಶಿವಾಚಾರ್ಯರು, ಕರುಣೇಶ್ವರ ಶಿವಾಚಾರ್ಯರು, ರಾಚೋಟೇಶ್ವರ ಶಿವಾಚಾರ್ಯರು,ಶಿವಕುಮಾರ ಶಿವಾಚಾರ್ಯರು, ಶಾಸಕ ಡಾ.ಅವಿನಾಶ ಜಾಧವ, ಬೀದರ ಸಂಸದ ಸಾಗರ್ ಖಂಡ್ರೆ, ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ ಪಾಟೀಲ, ಅರಣ್ಯ ಸಚಿವ ಈಶ್ವರ ಖಂಡ್ರೆ,ಡಾ.ಉಮೇಶ ಜಾಧವ,ಸುಭಾಷ್ ರಾಠೋಡ್, ಸಂಜೀವನ್ ಯಾಕಾಪೂರ, ಶರಣುಕುಮಾರ ಮೋದಿ, ಜಿಪಂ.ಮಾಜಿ ಅಧ್ಯಕ್ಷ ದೀಪಕನಾಗ್ ಪುಣ್ಯಶೇಟ್ಟಿ,ಸೇರಿದಂತೆ ಜಿಲ್ಲೆಯ ಸುತ್ತಮುತ್ತಲಿನ ಮಠಾಧೀಶರು, ವಿವಿಧ ಪಕ್ಷಗಳ ರಾಜಕೀಯ ಮುಖಂಡರು ಹಾಜರಾಗಲಿದ್ದಾರೆ,ಸಾರ್ವಜನಿಕರು ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಸಂತೋಷ ಗಡಂತಿ, ರೇವಣಸಿದ್ದಪ್ಪ, ರಾಜಶೇಖರ, ನಂದಿಕುಮಾರ ಪಾಟೀಲ, ವೀರೇಶ ಎಂಪಳ್ಳಿ, ಸಂತೋಷ ದಾದಾಪುರ, ಸಂತೋಷ ಕಡಗದ, ಉಡುಪಿ ಮಲ್ಲಿಕಾರ್ಜುನ, ಮಲ್ಲಿಕಾರ್ಜುನಸ್ವಾಮಿ, ನಾಗರಾಜ ಮಲಕೂಡ, ಮಹಾಂತಯ್ಯ ಮಠಪತಿ, ಶಂಕರ ಶಿವಪೂರಿ, ಗುಂಡಯ್ಯಸ್ವಾಮಿ, ಲೋಕೇಶ ಶೇಳ್ಳಗಿ, ಅನೇಕರಿದ್ದರು.

> **ಆಮಂತ್ರಣ ಪತ್ರದಲ್ಲಿ ಅನ್ಯ ಸಮಾಜಕ್ಕೆ ಕಡೆಗಣನೆ ಮಾಡಲಾಗಿದೆ ಎಂದು ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ಶರಣುಪಾಟೀಲ ಮೋತಕಪಳ್ಳಿ: ವೀರಶೈವ ಲಿಂಗಾಯತ ಸಮಾಜದ ಹಾಗೂ ಜಗದ್ಗುರು ರೇಣುಕಾಚಾರ್ಯರ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮ ಇರುವುದರಿಂದ ಹೆಚ್ಚಿನ ರೀತಿಯಲ್ಲಿ ಸಮಾಜದವರಿಗೆ ಮಾತ್ರ ಆಮಂತ್ರಣ ಪತ್ರದಲ್ಲಿ ಹೆಸರು ಬರೆಯಲಾಗಿದೆ,ಕಾರ್ಯಕ್ರಮಕ್ಕೆ ಅಹ್ವಾನ ನೀಡಲು ಉಳಿದ ಎಲ್ಲಾ ಸಮಾಜದ ಅಧ್ಯಕ್ಷರಿಗೆ ಪ್ರಮುಖ ಮುಖಂಡರಿಗೆ,ರಾಜಕೀಯ ಮುಖಂಡರಿಗೆ ಆಮಂತ್ರಣ ಪತ್ರ ಕೊಟ್ಟು ಅಹ್ವಾನಿಸಲಾಗುವುದು ಎಂದರು.**

# ಮಿನಿ ನ್ಯೂಸ್

## ಅಕ್ರಮ ಮರಳು ದಂಧೆಗೆ ಕಡಿವಾಣ ತಹಶೀಲ್ದಾರ್ ಚಾಪೇಲ್

• ಉದಯವಾಹಿನಿ, ವಡಗೇರಾ



ತಾಲ್ಲೂಕಿನ ಕಂದಳ್ಳಿಯ ಭೀಮಾ ನದಿಯಿಂದ ಅಕ್ರಮವಾಗಿ ಮರಳು ಸಾಗಾಣಿಕೆ ಮಾಡುತ್ತಿರುವ ಕುರಿತು ಸಾರ್ವಜನಿಕರಿಂದ ಬಂದ ಮಾಹಿತಿ ಮೇರೆಗೆ ವಡಗೇರಾ ತಹಶೀಲ್ದಾರ್ ಶ್ರೀನಿವಾಸ್ ಚಾಪೆಲ್ ರವರು ಸ್ಥಳಕ್ಕೆ ತೆರಳಿ ಅಕ್ರಮ ಮರಳು ತುಂಬಿಕೊಂಡು ಹೋಗುತ್ತಿದ್ದ ಎರಡು ಲಾರಿಗಳನ್ನು ತಡೆದು ಪರಿಶೀಲಿಸಿ ಮಾತನಾಡಿದರು ಅಕ್ರಮ ಮರಳುಗಾರಿಕೆ ಕಡಿವಾಣ ಹಾಕುವುದರ ಜೊತೆಗೆ ತಾಲ್ಲೂಕ ಆಡಳಿತ ವತಿಯಿಂದ ಅಕ್ರಮ ಮರಳುಗಾರಿಕೆ ವಿರುದ್ಧ ಮತ್ತಷ್ಟು ಬಿಗಿ ಬಂದೋಬಸ್ತು ಮಾಡಲಾಗುವುದು ಯಾವುದೇ ರೀತಿಯ ಅಕ್ರಮ ಮರಳುಗಾರಿಕೆ ಕಂಡುಬಂದಲ್ಲಿ ಸಾರ್ವಜನಿಕರು ನಮಗೆ ತಿಳಿಸಿ ಅಂತವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುತ್ತೇನೆ ಎಂದರು ಯಾವುದೇ ಪರವಾನಿಗೆ ಇಲ್ಲದೆ ಮರಳು ಸಾಗಾಣಿಕೆ ಮಾಡುತ್ತಿರುವುದು ಕಂಡುಬಂದ ಹಿನ್ನೆಲೆಯಲ್ಲಿ ವಡಗೇರಾ ಪೊಲೀಸ್ ಠಾಣೆಗೆ ಮಾಹಿತಿ ನೀಡಿ ಅಕ್ರಮ ಮರಳು ಲಾರಿಗಳ ಮೇಲೆ ಕೇಸ್ ದಾಖಲಿಸುವಂತೆ ಪೊಲೀಸ್ ಇಲಾಖೆಗೆ ಆದೇಶ ನೀಡಿದ ಕಾರಣ ಈಗಾಗಲೇ ಎರಡು ಲಾರಿಗಳ ಮೇಲೆ ವಡಗೇರಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಈ ಕಾರ್ಯಾಚರಣೆಯಲ್ಲಿ ಕಂದಾಯ ನಿರೀಕ್ಷಕ ಸಂಜೀವ್ ಕುಮಾರ್ ಕಾವಲಿ ಹಾಗೂ ಪೊಲೀಸ್ ಸಿಬ್ಬಂದಿಗಳು ಹಾಜರಿದ್ದರು.

## ಜಲಪಾತದಲ್ಲಿ ಸೆಲ್ಫಿ ತೆಗೆದುಕೊಳ್ಳುವಾಗ ಕಾಲುಜಾರಿ ಬಿದ್ದು ಯುವಕ ಸಾವು

• ಉದಯವಾಹಿನಿ, ಶಿವಮೊಗ್ಗ

ಬೆಂಗಳೂರಿನಿಂದ ಶಿವಮೊಗ್ಗದ ಅಬ್ಬಿ ಜಲಪಾತಕ್ಕೆ ಪ್ರವಾಸಕ್ಕೆ ಎಂದು ತೆರಳಿದ್ದ 12 ಜನರ ಯುವಕರ ಗುಂಪೊಂದು, ಅಬ್ಬಿ ಫಾಲ್ಸ್‌ನಲ್ಲಿ ಸೆಲ್ಫಿ ತೆಗೆದುಕೊಳ್ಳುವಾಗ ಯುವಕನೊಬ್ಬ ಕಾಲು ಜಾರಿ ಬಿದ್ದು ನೀರು ಪಾಲಾಗಿ ದಾರುಣವಾಗಿ ಸಾವನ್ನಪ್ಪಿರುವ ಘಟನೆ ನಡೆದಿದೆ.

ಹೌದು ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನ ಯಡೂರು ಬಳಿಯ ಅಬ್ಬಿ ಜಲಪಾತದಲ್ಲಿ ಸೆಲ್ಫಿ ಕ್ರೇಜಿಗೆ ಯುವಕನೊಬ್ಬ ಬಲಿಯಾಗಿದ್ದಾನೆ. ಸೆಲ್ಫಿ ತೆಗೆದುಕೊಳ್ಳುವಾಗ ಕಾಲು ಜಾರಿ ಬಿದ್ದು ಪ್ರವಾಸಿಗನೊಬ್ಬ ಮೃತಪಟ್ಟಿದ್ದಾನೆ ಎಂದು ತಿಳಿದುಬಂದಿದೆ. ಬೆಂಗಳೂರಿನಿಂದ ಪ್ರವಾಸಕ್ಕೆ ತೆರಳಿದ್ದ ವಿನೋದ್ (26) ನೀರು ಪಾಲಾದ್ದಾನೆ. ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲ್ಲೂಕಿನ ಯಡೂರು ಈ ದುರ್ಘಟನೆ ಸಂಭವಿಸಿದೆ. ಫೋಟೋ ತೆಗೆಯುವಾಗ ಕಾಲು ಜಾರಿ ಬಿದ್ದು ಪ್ರವಾಸಿಗ ಮೃತಪಟ್ಟಿದ್ದಾನೆ. ಜಲಪಾತ ನೋಡಲು 12 ಯುವಕರು ಬೆಂಗಳೂರಿನಿಂದ ಶಿವಮೊಗ್ಗಕ್ಕೆ ತೆರಳಿದರು ನೀರು ಪಾಲಾಗಿರುವ ಯುವಕ ವಿನೋದ್ ಮೂಲತಃ ಬಳ್ಳಾರಿಯವರು ಎಂದು ತಿಳಿದುಬಂದಿದೆ. ಸ್ಥಳಕ್ಕೆ ಅಗ್ನಿಶಾಮಕ ದಳ ಸಿಬ್ಬಂದಿ ಭೇಟಿ ನೀಡಿದ್ದು ಮೃತ ದೇಹಕ್ಕಾಗಿ ಶೋಧ ಕಾರ್ಯ ಈಗ ಮುಂದುವರೆದಿದೆ.ಹೊಸನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.


## ಚಿಕ್ಕಮಗಳೂರು ಪ್ರವಾಸಿ ತಾಣಗಳಲ್ಲಿ ಪ್ಲಾಸ್ಟಿಕ್ ನಿಷೇಧ

• ಉದಯವಾಹಿನಿ, ಚಿಕಮಗಳೂರು

ಚಿಕ್ಕಮಗಳೂರಿನ ಹಲವೆಡೆ ಚಾರಣಕ್ಕೆ ನಿಷೇಧ ಹೇರಿ ಸರ್ಕಾರ ಆದೇಶ ಹೊರಡಿಸಿತ್ತು. ಇದೀಗ ಪ್ಲಾಸ್ಟಿಕ್ ನಿಷೇಧ ಮಾಡಿ ಕ್ರಮ ಕೈಗೊಂಡಿದೆ. ಚಿಕ್ಕಮಗಳೂರಿನ ಪ್ರವಾಸಿ ತಾಣಗಳಿಗೆ ತೆರಳುವ ಪ್ರವಾಸಿಗರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗಿದೆ. ಅದರಲ್ಲಿಯೂ ವೀಕೆಂಡ್‌ಗಳಲ್ಲಿ ಪ್ರವಾಸಿಗರ ಸಂಖ್ಯೆ ನಿಯಂತ್ರಿಸುವುದೇ ಕಷ್ಟಸಾಧ್ಯವಾಗಿದೆ.

ಅಲ್ಲದೇ ಎಲ್ಲೆಂದರಲ್ಲಿ ಪ್ರವಾಸಿಗರು ಪ್ಲಾಸ್ಟಿಕ್, ಬಾಟಲ್‌ಗಳು ಸೇರಿದಂತೆ ವಸ್ತುಗಳನ್ನು ಬಿಸಾಕಿ ಹೋಗುತ್ತಿರುವುದು ಗಮನಕ್ಕೆ ಬರುತ್ತಿದ್ದು, ಈ ಹಿನ್ನೆಲೆಯಲ್ಲಿ ಚಿಕ್ಕಮಗಳೂರಿಲೂರಿನ ಪ್ರವಾಸಿ ತಾಣ, ಪಶ್ಚಿಮ ಘಟ್ಟಗಳ ಸಾಲಿಗೆ ಪ್ಲಾಸ್ಟಿಕ್ ಬಳಕೆ ನಿಷೇಧ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಚಂದ್ರದ್ರೋಣ ಪರ್ವತದ ಸಾಲಿನಲ್ಲಿರುವ ಮುಳ್ಳಯ್ಯನಗಿರಿಗೆ ಸಾವಿರು ಸಂಖ್ಯೆಯಲ್ಲಿ ಭೇಟಿ ನೀಡುವ ಪ್ರವಾಸಿಗರು ಪ್ಲಾಸ್ಟಿಕ್ ವಸ್ತುಗಳನ್ನು ಕೊಂಡೊಯ್ಯುತ್ತಿದ್ದಾರೆ. ಇದರಿಂದ ಪರಿಸರಕ್ಕೆ ತೊಂದರೆಯಾಗುತ್ತಿದ್ದು, ಎಲ್ಲೆಂದರಲ್ಲಿ ಪ್ಲಾಸ್ಟಿಕ್ ಬ್ಯಾಗ್, ಕವರ್, ಬಾಟಲ್‌ಗಳು ಬಿದ್ದಿರುವುದು ಅರಣ್ಯ ಇಲಾಖೆಗೂ ಸಮಸ್ಯೆಯಾಗಿ ಪರಿಣಮಿಸಿದೆ. ಈ ಹಿನ್ನೆಲೆಯಲ್ಲಿ ಮುಳ್ಳಯ್ಯನಗಿರಿಯಲ್ಲಿ ಪ್ಲಾಸ್ಟಿಕ್ ಸಂಪೂರ್ಣ ನಿಷೇಧಿಸಲಾಗಿದೆ. ಪ್ಲಾಸ್ಟಿಕ್ ನಿಷೇಧ ಹಿನ್ನೆಲೆಯಲ್ಲಿ ಚೆಕ್ ಪೋಸ್ಟ್‌ಗಳಲ್ಲಿ ವಾಹನಗಳನ್ನು ತಪಾಸಣೆ ಮಾಡುತ್ತಿದ್ದು, ಪ್ಲಾಸ್ಟಿಕ್ ವಸ್ತುಗಳು ಕಂಡುಬಂದಲ್ಲಿ ಸೀಜ್ ಮಾಡಲಾಗುತ್ತಿದೆ. ಪಶ್ಚಿಮ ಘಟ್ಟಗಳ ಸಾಲು ಹಾಗೂ ರಾಜ್ಯದ ಪ್ರವಾಸಿ ತಾಣಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಸರ್ಕಾರ ಈ ಕ್ರಮ ಕೈಗೊಂಡಿದೆ.

## ಶೀಘ್ರದಲ್ಲಿ ಕೆರೆಗಳಿಗೆ ನೀರು: ಶಾಸಕ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಡ್ಲೂರ

ರೈತರ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಕೆರೆಗಳಿಗೆ ನೀರು ತುಂಬಿಸಬೇಕು. ಅನಗತ್ಯವಾಗಿ ಕೆರೆಗಳಿಂದ ನೀರು ಪೋಲಾಗುವುದನ್ನು ತಡೆಯಬೇಕು ಎಂದು ಶಾಸಕ ಯು.ಬಿ.ಬಣಕಾರ ಹೇಳಿದರು.

ಇಲ್ಲಿಗೆ ಸಮೀಪದ ಮಡ್ಲೂರ ಗ್ರಾಮದ ಏತ ನೀರಾವರಿಯ ಸುಮಾರು 55 ಕೆರೆಗಳಿಗೆ ವರದಾ ನದಿ ನೀರು ಬಿಡುತ್ತಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳು ಹಾಗೂ ರೈತರೊಂದಿಗೆ ಚರ್ಚಿಸಿದರು.

ಕಳೆದ ವರ್ಷ ಕೆರೆಗಳಿಗೆ ನೀರು ಬಿಡುವ ಸಂದರ್ಭದಲ್ಲಿ ಪೈಪ್ ಲೈನ್‌ಗಳು ಅಲ್ಲಲ್ಲಿ ಸೋರಿಕೆಯಾಗಿ ಕೃಷಿ ಚಟುವಟಿಕೆಗಳಿಗೆ ತೊಡಕು ಉಂಟಾಗುವುದಲ್ಲದೇ ಬೆಳೆ ಹಾನಿಯೂ ಸಂಭವಿಸಿತ್ತು. ರೈತರು ಕೂಡಾ ಪೈಪ್‌ಲೈನ್ ಸೋರಿಕೆಯಿಂದ ತೊಂದರೆ ಉಂಟಾದರೆ ಕೂಡಲೇ ಅಧಿಕಾರಿಗಳ ಗಮನಕ್ಕೆ ತರಬೇಕು. ಅಧಿಕಾರಿಗಳು ನಿರ್ಲಕ್ಷ್ಯ ತೋರದೇ ಕೆರೆಗಳಿಗೆ ನೀರು ತುಂಬಿಸುವ ಕಾರ್ಯವನ್ನು ಅಚ್ಚುಕಟ್ಟಾಗಿ ನಿಭಾಯಿಸಬೇಕು. ವರದಾ ನದಿಗೆ ನೀರು ಬರುವ ಸಂಭವವಿದ್ದು, ಸಧ್ಯದಲ್ಲೇ ಕೆರೆಗಳಿಗೆ ನೀರು ಹರಿಸಲಾಗುವುದು. ರೈತರು ಚಿಂತಿಸುವ ಅಗತ್ಯವಿಲ್ಲ ಎಂದರು.ಕೆಎನ್‌ಎನ್ ಅಧಿಕಾರಿಗಳು, ಹೆಸ್ಕಾಂ ಅಧಿಕಾರಿಗಳು, ಎಂಜಿನಿಯರಗಳು ಹಾಗೂ ರೈತರು ಇದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ನಿಮ್ಮ ಹಾಸ್ಯಪ್ರಜ್ಞೆ ಇನ್ನೊಬ್ಬರಿಗೆ ಸಂತೋಷವಸ್ತುಗಳನ್ನು ಹೊಂದುವುದರಲ್ಲದೇ ನಮ್ಮೊಳಗೇ ಇದೆಯೆಂದು ಅರ್ಥ ಮಾಡಿಸುವುದರಿಂದ ಅವರು ಸ್ವತಃ ಈ ಕೌಶಲ್ಯವನ್ನು ಹೊಂದಲು ಪ್ರೋತ್ಸಾಹಿಸಿದಂತಾಗುತ್ತದೆ.

**ವೃಷಭ** ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ. ನಿಮ್ಮ ಹೆತ್ತವರ ಆರೋಗ್ಯ ಚಿಂತೆ ಮತ್ತು ಆತಂಕಕ್ಕೆ ಕಾರಣವಾಗುತ್ತದೆ.

**ಮಿಥುನ** ನಿಮ್ಮ ಸರ್ವಾಧಿಕಾರಿ ಧೋರಣೆ ನಿಮ್ಮ ಸಹೋದ್ಯೋಗಿಗಳಿಂದ ಟೀಕೆಗೆ ಗುರಿಯಾಗುತ್ತದೆ. ಇಂದು ಕೈಗೊಂಡ ನಿರ್ಮಾಣ ಕಾರ್ಯ ನಿಮಗೆ ತೃಪ್ತಿಯಾಗುವ ಹಾಗೆ ಪೂರ್ಣಗೊಳ್ಳುತ್ತದೆ.

**ಕರ್ಕಾಟಕ** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಇದು ಮತ್ತೊಂದು ಚೈತನ್ಯದಾಯಕ ದಿನವಾಗಿರುತ್ತದೆ.

**ಸಿಂಹ** ನಿಮ್ಮ ಮಾತುಗಳನ್ನು ಸರಿಯಾಗಿ ಸಾಬೀತುಪಡಿಸಲು ಇಂದು ನೀವು ನಿಮ್ಮ ಸಂಗಾತಿಯೊಂದಿಗೆ ಜಗಳವಾಡಬಹುದು. ಹೇಗಾದರೂ, ನಿಮ್ಮ ಸಂಗಾತಿ ತನ್ನ ಬುದ್ಧಿವಂತಿಕೆಯನ್ನು ತೋರಿಸುತ್ತ ನಿಮ್ಮನ್ನು ಶಾಂತಗೊಳಿಸುತ್ತಾರೆ.

**ಕನ್ಯಾ** ವೃತ್ತಿ ಯೋಜನೆ ಆಟಗಳಷ್ಟೇ ಮುಖ್ಯ. ನಿಮ್ಮ ಪೋಷಕರನ್ನು ಸಂತೋಷಗೊಳಿಸು ಎರಡನ್ನೂ ಸಂಭಾಳಿಸಬೇಕು. ಪ್ರೀತಿಪಾತ್ರರೊಡನೆ ಸಹಿತಿಂಡಿ ಮತ್ತು ಮಿಠಾಯಿ ಹಂಚಿಕೊಳ್ಳುವ ಸಾಧ್ಯತೆಯಿದೆ.

**ತುಲಾ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

**ವೃಶ್ಚಿಕ** ನೀವು ಪ್ರಣಯದ ಮನೋಭಾವ ಹೊಂದಿರುತ್ತೀರಿ. ನೀವು ಮತ್ತು ನಿಮ್ಮ ಪ್ರೀತಿಪಾತ್ರರಿಗಾಗಿ ವಿಶೇಷ ಯೋಜನೆಗಳನ್ನು ಮಾಡಲು ಮರೆಯಬೇಡಿ. ನಿಮ್ಮ ಸಾಮರ್ಥ್ಯವನ್ನು ಹೆಚ್ಚಿಸಲು ಹೊಸ ತಂತ್ರಗಳಿಗೆ ಹೊಂದಿಕೊಳ್ಳಿ.

**ಧನಸ್ಸು** ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ.

**ಮಕರ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ಕುಂಭ** ನೀವು ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ.

**ಮೀನ** ನಿಮ್ಮ ಮಕ್ಕಳು ನಿಮ್ಮನ್ನು ಸಂತೋಷವಾಗಿರಿಸಲು ತಮಗೆ ಸಾಧ್ಯವಿರುವುದೆಲ್ಲವನ್ನೂ ಮಾಡುತ್ತಾರೆ. ಇಂದು ನಿಮ್ಮ ಪ್ರಿಯತಮೆ ನಿಮ್ಮ ಸಜೀವ ದೇವತೆಯಾಗಲಿದ್ದಾಳೆ; ಈ ಕ್ಷಣಗಳನ್ನು ಆನಂದಿಸಿ.

## ಜು. 03

• ಉದಯವಾಹಿನಿ ಚಿತ್ರದುರ್ಗ

ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ ಜುಲೈ 03 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ.

ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ವಹಿಸುವರು ಎಂದು ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿರುವ ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಅವರು ತಿಳಿಸಿದ್ದಾರೆ.

## ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಸದಸ್ಯರ ಪ್ರವಾಸ

• ಉದಯವಾಹಿನಿ ಚಿತ್ರದುರ್ಗ

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ನ್ಯಾಯಾಂಗ ಸದಸ್ಯರಾದ ಎಸ್.ಕೆ. ವಂಟಿಗೋಡಿ ಅವರು ಜುಲೈ 01ರಂದು ಚಿತ್ರದುರ್ಗ ಜಿಲ್ಲೆಗೆ ಆಗಮಿಸಲಿದ್ದಾರೆ. ಎಸ್.ಕೆ. ವಂಟಿಗೋಡಿ ಅವರು ಅಂದು ಮಧ್ಯಾಹ್ನ 01.30 ಗಂಟೆಗೆ ಚಿತ್ರದುರ್ಗ ನಗರದ ಪ್ರವಾಸಿ ಮಂದಿರಕ್ಕೆ ಆಗಮಿಸುವರು, ಬಳಿಕ ಸ್ಥಳೀಯ ವಿವಿಧ ಹಾಸ್ಟೆಲ್‌ಗಳಿಗೆ ಭೇಟಿ ನೀಡುವರು. ಅದೇ ದಿನ ಸಂಜೆ 7 ಗಂಟೆಗೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಆಯೋಗದ ಸದಸ್ಯರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

## ಜೂ.26ರಂದು ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

• ಉದಯವಾಹಿನಿ ಚಿತ್ರದುರ್ಗ

ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ಜೂ. 26 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ. ಸಭೆಯ ಅಧ್ಯಕ್ಷತೆಯನ್ನು ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ವಹಿಸುವರು ಎಂದು ಜಿ.ಪಂ. ಸಿಇಒ ಸೋಮಶೇಖರ್ ತಿಳಿಸಿದ್ದಾರೆ.

## ತುಲಾಭಾರ ಸೇವೆ ಸಲ್ಲಿಸಿದ ಬಿಎಸ್‌ವೈ

• ಉದಯವಾಹಿನಿ ದಕ್ಷಿಣ ಕನ್ನಡ


ಉದಯವಾಹಿನಿ ಚಿತ್ರ

ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಅವರು ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನಕ್ಕೆ ಭೇಟಿ ನೀಡಿ, ನಾಣ್ಯಗಳಿಂದ ತುಲಾಭಾರ ಸೇವೆ ಸಲ್ಲಿಸಿದರು. ದೇವಾಲಯದ ಅರ್ಚಕರಾದ ಸತ್ಯನಾರಾಯಣ ನೂರಿತಾಯ ಅವರು ತುಲಾಭಾರ ಸೇವೆಯನ್ನು ನೆರವೇರಿಸಿದರು. ಬೆಳಿಗ್ಗೆ ಇಲ್ಲಿಗೆ ಬಂದ ಯಡಿಯೂರಪ್ಪ ಅವರನ್ನು ಶಾಸಕಿ ಭಾಗೀರಥಿ ಮುರುಳ್ಯ ಸ್ವಾಗತಿಸಿದರು. ಮಾಜಿ ಸಚಿವ ಅಂಗಾರ, ಮೋಹನ್ ರಾಮ ಸುಳ್ಳಿ ಹಾಗೂ ದೇವಳ ಸಮಿತಿಯವರು ಇದ್ದರು. ಮಧ್ಯಾಹ್ನ ಸುಳ್ಯಕ್ಕೆ ತೆರಳುವ ಯಡಿಯೂರಪ್ಪ, ಸುಳ್ಯದ ಬಿಜೆಪಿ ಕಚೇರಿಯನ್ನು ಉದ್ಘಾಟಿಸಲಿದ್ದಾರೆ.

## ಪಾರ್ಸೆಲ್ ಹೆಸರಿನಲ್ಲಿ ಮಹಿಳೆಗೆ ಮೋಸ

• ಉದಯವಾಹಿನಿ ಉಡುಪಿ

ಪಾರ್ಸೆಲ್‌ನಲ್ಲಿ ಮಾದಕ ವಸ್ತು ಬಂದಿರುವುದಾಗಿ ಬೆದರಿಸಿ, ಮಹಿಳೆಯಿಂದ ಹಣ ಪಡೆದು ವಂಚಿಸಿರುವ ಕುರಿತು ಮಣಿಪಾಲ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಹಾಯಕ ಪ್ರಾಧ್ಯಾಪಕಿ ಹಾಗೂ ಕುಂಜಿಬೆಟ್ಟು ನಿವಾಸಿ ನಮ್ರತಾ ಎಂಬುವವರ ಮೊಬೈಲ್‌ಗೆ ಅಪರಿಚಿತ ವ್ಯಕ್ತಿಯೊಬ್ಬ ಕರೆ ಮಾಡಿ, ನಿಮಗೆ ಪಾರ್ಸೆಲ್ ಬಂದಿದ್ದು, ಅದರಲ್ಲಿ 5 ಇರಾನ್‌ನ ಪಾಸ್‌ಪೋರ್ಟ್, 5 ಡೆಬಿಟ್ ಕಾರ್ಡ್, ಎರಡು ಕೆ.ಜಿ. ಬಟ್ಟೆ ಮತ್ತು 150 ಗ್ರಾಂ ಮಾದಕವಸ್ತು ಪತ್ತೆಯಾಗಿದೆ. ಈ ಕುರಿತು ಮುಂಬೈ ಪೊಲೀಸರು ಎಫ್‌ಐಆರ್ ದಾಖಲಿಸಿದ್ದು, ಆನ್‌ಲೈನ್‌ನಲ್ಲಿ ತನಿಖೆಗೆ ಸಹಕರಿಸುವಂತೆ ಸೂಚಿಸಿದ್ದ ಎಂದು ದೂರಿನಲ್ಲಿ ಹೇಳಲಾಗಿದೆ.

# ಹೆಚ್ಚಿದ ಡೆಂಗಿ ಪ್ರಕರಣ: ನಲುಗಿದ ಕಾಫಿನಾಡು

• ಜನವರಿಯಿಂದ ಏಪ್ರಿಲ್ ತನಕ ಕಡಿಮೆ ಇದ್ದ ಡೆಂಗಿ ಪ್ರಕರಣಗಳು, ಮೇ ಮತ್ತು ಜೂನ್‌ನಲ್ಲಿ ಹೆಚ್ಚಾಗಿವೆ

• ಉದಯವಾಹಿನಿ ಚಿಕ್ಕಮಗಳೂರು

ಮಳೆಗಾಲದಲ್ಲಿ ಕಾಫಿನಾಡಿಗೆ ಪ್ರವಾಸಿಗರು ಲಗ್ಗೆ ಇಡುವಂತೆ ಈ ಬಾರಿ ಡೆಂಗಿ ಕೂಡ ಲಗ್ಗೆ ಇಟ್ಟಿದೆ. 2024ರ ಜನವರಿಯಿಂದ ಈವರೆಗೆ 438 ಜನ ಡೆಂಗಿ ಜ್ವರದಿಂದ ನಲುಗಿದ್ದಾರೆ. ಜನವರಿಯಿಂದ ಏಪ್ರಿಲ್ ತನಕ ಕಡಿಮೆ ಇದ್ದ ಡೆಂಗಿ ಪ್ರಕರಣಗಳು, ಮೇ ಮತ್ತು ಜೂನ್‌ನಲ್ಲಿ ಹೆಚ್ಚಾಗಿವೆ.

**ಆರೋಗ್ಯ ಇಲಾಖೆ ಸಿಬ್ಬಂದಿ ಸರ್ವೆ**

ಮಳೆಗಾಲದಲ್ಲಿ ಸಾಮಾನ್ಯವಾಗಿ ಈ ರೋಗ ಹರಡುತ್ತದೆ. ಮೇ ಮತ್ತು ಜೂನ್‌ನಲ್ಲಿ ಮಳೆ ಸುರಿದು ಅಲ್ಲಲ್ಲಿ ನೀರು ಸಂಗ್ರಹ ಆಗಿದ್ದರಿಂದ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿದೆ. ಈಡಿಸ್ ಇಜಿಪ್ಟೈ ಸೊಳ್ಳೆ ಕಚ್ಚುವಿಕೆಯಿಂದ ಡೆಂಗಿ ಜ್ವರ ಒಬ್ಬರಿಂದ ಮತ್ತೊಬ್ಬರಿಗೆ ಹರಡುತ್ತದೆ. ಸ್ವಚ್ಛವಾದ ನೀರಿನಲ್ಲಿ ಮಾತ್ರ ಈ ಸೊಳ್ಳೆಗಳು ಸಂತಾನಾಭಿವೃದ್ಧಿ ಮಾಡುತ್ತವೆ. ಹಗಲಿನಲ್ಲಿ ಮನುಷ್ಯರಿಗೆ ಕಚ್ಚುವುದು ಈ ಸೊಳ್ಳೆಗಳ ಹವ್ಯಾಸ. ಉತ್ಪತ್ತಿಯಾದ ಎಲ್ಲಾ ಸೊಳ್ಳೆಗಳು ಕಚ್ಚುವಿಕೆಯಿಂದ ರೋಗ ಹರಡುವುದಿಲ್ಲ. ಡೆಂಗಿ ರೋಗಿಗೆ ಕಚ್ಚಿದ ಸೊಳ್ಳೆ ಮತ್ತೊಬ್ಬರಿಗೆ ಕಚ್ಚುವುದರಿಂದ ಮಾತ್ರ ರೋಗ ಹರಡುತ್ತದೆ ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ಹೇಳುತ್ತಾರೆ.

ಮಳೆಗಾಲದಲ್ಲೇ ಹೆಚ್ಚಾಗಿ ಈ ರೋಗ ಹರಡುತ್ತದೆ. ಎಲ್ಲೆಂದರಲ್ಲಿ ಮಳೆ ನೀರು ಸಂಗ್ರಹವಾಗುತ್ತದೆ. ಸೊಳ್ಳೆಗಳ ಸಂತಾನ ಅಭಿವೃದ್ಧಿಗೆ ಹೆಚ್ಚು ಅನುಕೂಲ ಆಗುತ್ತದೆ. ಚಿಕ್ಕಮಗಳೂರು ಜಿಲ್ಲೆಗೆ ಮಳೆಗಾಲದಲ್ಲೇ ಪ್ರವಾಸಿಗರ ಸಂಖ್ಯೆಯೂ ಹೆಚ್ಚಿರುತ್ತದೆ. ಪ್ರವಾಸಿಗರಲ್ಲಿ ಯಾರದರೂ ಸೋಂಕಿತರಿದ್ದರೆ ಅವರಿಗೆ ಕಚ್ಚಿದ ಸೊಳ್ಳೆ ಸ್ಥಳೀಯರಿಗೆ ಕಚ್ಚುವುದರಿಂದ ರೋಗ ಹರಡುತ್ತದೆ. ಚಿಕ್ಕಮಗಳೂರು ತಾಲ್ಲೂಕಿನಲ್ಲೇ ಹೆಚ್ಚು ಪ್ರಕರಣ ಕಾಣಿಸಿಕೊಂಡಿದ್ದು, ಶೇ 70ರಷ್ಟು ಡೆಂಗಿ ಸೋಂಕಿತರು ಇದೇ ತಾಲ್ಲೂಕಿನವರಾಗಿದ್ದಾರೆ.

ಡೆಂಗಿ ಮಾತ್ರವಲ್ಲದೇ ಬೇರೆ ಬೇರೆ ಜ್ವರಗಳೂ ಜನರನ್ನು ಕಾಡುತ್ತಿವೆ. ಈಡಿಸ್ ಇಜಿಪ್ಟೈ ಸೊಳ್ಳೆಗಳ ಜೊತೆಗೆ ಬೇರೆ ಸೊಳ್ಳೆಗಳ ಸಂಖ್ಯೆ ಕೂಡ ಮಳೆಗಾಲದಲ್ಲಿ ಹೆಚ್ಚಾಗುತ್ತವೆ. ಇದರಿಂದಾಗಿ ಡೆಂಗಿ ಮಾತ್ರವಲ್ಲದೇ ವಿಷಮಶೀತ ಜ್ವರ ಕೂಡ ಜನರನ್ನು ಕಾಡುತ್ತಿದೆ. ಡೆಂಗಿಯಿಂದ ಈವರೆಗೆ ಒಬ್ಬರೂ ಮೃತಪಟ್ಟಿಲ್ಲ. ಇದು ಸಮಾಧಾನದ ಸಂಗತಿ ಎಂದು ವೈದ್ಯರು ಹೇಳುತ್ತಾರೆ.


ಉದಯವಾಹಿನಿ ಚಿತ್ರ

> ಚಿಕ್ಕಮಗಳೂರು ನಗರದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ ಲಾರ್ವ ಸರ್ವೆ ನಡೆಸುತ್ತಿರುವುದು ಡೆಂಗಿ ಬಗ್ಗೆ ಆತಂಕ ಪಡುವ ಅಗತ್ಯ ಇಲ್ಲ. ರೋಗ ಲಕ್ಷಣ ಕಂಡ ಕೂಡಲೇ ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆದು ಗುಣಮುಖರಾಗಬೇಕು
> –ಡಾ.ಅಶ್ವತ್ಥಬಾಬು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ

### ಡೆಂಗಿ ರೋಗದ ಮುಖ್ಯ ಲಕ್ಷಣಗಳು


- ಇದ್ದಕ್ಕಿದ್ದಂತೆ ತೀವ್ರ ಜ್ವರ ವಿಪರೀತ ತಲೆನೋವು.
- ಕಣ್ಣುಗಳ ಹಿಂಭಾಗ ಮಾಂಸಕಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು.
- ತೀವ್ರ ಸ್ಥಿತಿಯಲ್ಲಿ ಬಾಯಿ ಮೂಗು ಮತ್ತು ವಸಡುಗಳಲ್ಲಿ ರಕ್ತಸ್ರಾವ.
- ಚರ್ಮದ ಮೇಲೆ ಅಲ್ಲಲ್ಲಿ ರಕ್ತಸ್ರಾವದ ಗುರುತು ಕಾಣಿಸಿಕೊಳ್ಳುತ್ತವೆ.
- ಡೆಂಗಿ ಜ್ವರಕ್ಕೆ ಯಾವುದೇ ನಿರ್ದಿಷ್ಟ ಔಷದಿ ಅಥವಾ ಲಸಿಕೆ ಇಲ್ಲ. ರೋಗದ ಲಕ್ಷಣಗಳಿಗೆ ಅನುಸಾರವಾಗಿ ವೈದ್ಯರಿಂದ ಸೂಕ್ತ ಚಿಕಿತ್ಸೆ ಪಡೆಯಬಹುದು. ಡೆಂಗಿ ಲಕ್ಷಣಗಳು ಕಂಡುಬಂದರೆ ತಕ್ಷಣ ಸರ್ಕಾರಿ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂಬುದು ಆರೋಗ್ಯ ಇಲಾಖೆ ನೀಡುವ ಸಲಹೆ.

### ಮುನ್ನೆಚ್ಚರಿಕೆ ಹೇಗೆ

- ಮನೆಯ ಸುತ್ತ ನೀರು ಸಂಗ್ರಹವಾಗದಂತೆ ಎಚ್ಚರ ವಹಿಸಬೇಕು.
- ನೀರು ಸಂಗ್ರಹ ತೊಟ್ಟಿಗಳನ್ನು ವಾರಕ್ಕೊಮ್ಮೆ ತೊಳೆದು ಒಣಗಿಸಬೇಕು.
- ಮನೆಯ ಸುತ್ತಮುತ್ತ ಬಾಟಲಿ ಡಬ್ಬಿ ತೆಂಗಿನ ಚಿಪ್ಪುಗಳಲ್ಲಿ ನೀರು ಸಂಗ್ರಹವಾಗದಂತೆ ನೋಡಿಕೊಳ್ಳಬೇಕು.
- ಘನತ್ಯಾಜ್ಯ ಸಮರ್ಪಕವಾಗಿ ನಿರ್ವಹಿಸಬೇಕು.
- ಸೊಳ್ಳೆ ಪರದೆ ಅಥವಾ ಸೊಳ್ಳೆ ನಿಯಂತ್ರಕ ಲಿಕ್ವಿಡ್ ಬಳಸಬೇಕು.

## ಸಂಭ್ರಮದ ಹಜ್ರತ್ ಖೋಂದಮೀರುದ್ದೀನ್ ಜುನೆದಿ ಜಾತ್ರೆ

• ಉದಯವಾಹಿನಿ ಜೇವರ್ಗಿ


ಉದಯವಾಹಿನಿ ಚಿತ್ರ

ಶ್ರೀ ಹಜ್ರತ್ ಖೋಂದಮೀರುದ್ದೀನ್ ಜುನೆದಿ ದರ್ಗಾದ ಜಾತ್ರೆ, ಸಂಭ್ರಮದಿಂದ ಸರ್ವಧರ್ಮದವರು ಸೇರಿಕೊಂಡು ಆಚರಿಸುವುದರ ಮುಲಕ ಎಲ್ಲಾ ಧರ್ಮದವರು ಒಂದೆ ಎಂಬ ಸಂದೇಶದಡಿಯಲ್ಲಿ ಜಾತ್ರೆಯನ್ನ ಆಚರಿಸಿಸಿದರು. ಪಟ್ಟಣದ ಬುಗ್ಗಿ ಬಡಾವಣೆಯಲ್ಲಿನ ಶ್ರೀ ಹಜ್ರತ್ ಖೋಂದಮೀರುದ್ದೀನ್ ಜುನೆದಿ ದರ್ಗಾದ ಜಾತ್ರೆಯು ಶುಕ್ರವಾರ ಹಾಗೂ ಶನಿವಾರ ಎರಡು ದಿನಗಳ ಕಾಲ ಆಚರಿಸಿದರು.

ಪ್ರತಿವರ್ಷದಂತೆ ಬಕ್ರೀದ ಹಬ್ಬ ಮುಗಿದ 5 ದಿನಗಳ ಶ್ರೀ ಹಜ್ರತ್ ಖೋಂದಮೀರುದ್ದೀನ್ ಜುನೆದಿ ದರ್ಗಾದ ಜಾತ್ರೆಯು ಆಚರಿಸಲಾಗುತ್ತದೆ. ಅದರಂತೆ ವರ್ಷವು ಕೂಡ ಸಂಭ್ರಮದಿಂದ ಶ್ರೀ ಹಜ್ರತ್ ಖೋಂದಮೀರುದ್ದೀನ್ ಜುನೆದಿ ದರ್ಗಾದ ಜಾತ್ರೆಯು ಆಚರಿಸಲಾಯಿತು. ಪಟ್ಟಣದ ವಿವಿಧ ಬಡಾವಣೆಗಳಿಂದ ಶುಕ್ರವಾರ ಹಾಗೂ ಶನಿವಾರ ಗಂಧ (ಸಂದಲ್) ಮೆರವಣಿಗೆ ನಡೆಸಲಾಯಿತು. ಈ ಜಾತ್ರೆಯಲ್ಲಿ ಜಾತಿ, ಧರ್ಮದ ಭೇಧ ಭಾವವಿಲ್ಲದೆ ಎಲ್ಲರು ಸೇರಿ ದರ್ಗಾ ಜಾತ್ರೆಯನ್ನ ಆಚರಿಸುತ್ತಾರೆ. 48 ಗಂಟೆಗಳ ಕಾಲ ಪ್ರಸಾಧ ಸೇವೆಯನ್ನು ನಡೆಸಲಾಗುತ್ತದೆ. 28 ರಿಂದ 30 ಕ್ವಿಂಟಾಲ್ ಅನ್ನವನ್ನು ಮಾಡಲಾಗಿದೆ.

ಹಿಂದು ಮುಸ್ಲಿಂ ಇಬ್ಬರು ಕೂಡ ಕಮೀಟಿಯ ನೇತೃತ್ವದಲ್ಲಿ ಯಾವುದೆ ತೊಂದರೆಯಾಗದಂತೆ ದರ್ಗಾ ಜಾತ್ರೆಯನ್ನ ಆಚರಿಸುತ್ತಾರೆ. ಎರಡು ದಿನಗಳ ಕಾಲ ಹಗಲು ರಾತ್ರಿ ಭಕ್ತರು ಆಗಮಿಸಿ ದರ್ಶನವನ್ನು ಪಡೆಯುತ್ತಾರೆ. ಅನೇಕರು ತಮ್ಮ ಹರಕೆಯನ್ನ ತಿರಿಸಲು ಆಗಮಿಸುತ್ತಾರೆ. ಪ್ರತಿ ವರ್ಷಕಿಂತಲು ಈ ವರ್ಷ ಹೆಚ್ಚಿನ ಭಕ್ತರು ಆಗಮಿಸಿದರು. ಈ ಸಂಧರ್ಭದಲ್ಲಿ ಕಮೀಟಿಯ ಸರ್ವ ಸದಸ್ಯರು, ಭಕ್ತರು, ತಾಲ್ಲೂಕಿನ ಮುಖಂಡರು ಸೇರಿದಂತೆ ಸಾವಿರಾರು ಜನರು ಪಾಲ್ಗೊಂಡಿದ್ದರು.

## ಬಸವೇಶ್ವರ ವಿದ್ಯಾಸಂಸ್ಥೆಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

• ಉದಯವಾಹಿನಿ ಚಿತ್ತಾಪುರ

ಮನುಷ್ಯ ಉತ್ತಮ ಆರೋಗ್ಯವಂತ ಜೀವನ ನಡೆಸಲು ಹಾಗೂ ಸಮಾಜದಲ್ಲಿನ ಕಲುಷಿತ ವಾತವರಣ ತೊಳೆಯುಲು, ರೋಗ ಮುಕ್ತ ಸಮಾಜ ನಿರ್ಮಾಣಕ್ಕೆ ಯೋಗ ಸಂಜೀವಿನಿಯಾಗಿದೆ ಎಂದು ಯೋಗ ಶಿಕ್ಷಕ ಪ್ರಲ್ಹಾದ್ ವಿಶ್ವಕರ್ಮ ಹೇಳಿದರು.

ಪಟ್ಟಣದ ಬಸವೇಶ್ವರ ವಿದ್ಯಾ ಸಂಸ್ಥೆಯ ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆ, ಅಣೆಮ್ಮ ಗೊಬ್ಬುರ ಪ್ರೌಢ ಶಾಲೆಯಲ್ಲಿ ಶುಕ್ರವಾರ ಹಮ್ಮಿಕೊಂಡಿರುವ 10ನೇ ಅಂತರಾಷ್ಟ್ರೀಯ ಯೋಗ ದಿನಾಚಾರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ಮನುಷ್ಯನಿಗೆ ಇಂದಿನ ಒತ್ತಡದ ಜೀವನದಲ್ಲಿ, ಮನಸ್ಸು ಹಾಗೂ ಶರೀರ ಸದೃಡವಾಗಿರಲು ಯೋಗ, ಧ್ಯಾನ, ಪ್ರಾಣಾಯಾಮ ಉತ್ತಮ ಆರೋಗ್ಯಕ್ಕೆ ಅಗತ್ಯವಾಗಿದೆ ಎಂದರು.



ಉದಯವಾಹಿನಿ ಚಿತ್ರ

> ಮನುಷ್ಯ ಆರೋಗ್ಯದಿಂದ ಇದ್ದಾಗ ಮಾತ್ರ ಉತ್ತಮ ಬದುಕು ಸಾಧ್ಯವಾಗುತ್ತದೆ
> –ಚಂದ್ರಶೇಖರ ಅವಂಟಿ, ಬಸವೇಶ್ವರ ಸಂಸ್ಥೆ ಕಾರ್ಯದರ್ಶಿ

ಯೋಗ ಎಂದರೆ ಮನಸ್ಸು ಹಾಗೂ ಶರೀರಕ್ಕೆ ಹೊಂದಿಸುವ ಕ್ರೀಯೆ. ಯೋಗದಿಂದ ರೋಗ ರುಜೀನಗಳು ತಡೆಗಟ್ಟುತ್ತದೆ. ವಿದ್ಯಾರ್ಥಿಗಳಲ್ಲಿ ಜ್ಞಾನ ಹೆಚ್ಚುತ್ತದೆ. ಮನುಷ್ಯನಲ್ಲಿ ಚೈತನ್ಯ ಶಕ್ತಿ ಬೆಳೆಯುತ್ತದೆ. ಯೋಗ ಆಳವಡಿಸಿಕೊಂಡರೆ ಎಲ್ಲವು ಸಾಧಿಸುವ ಶಕ್ತಿ ಬರುತ್ತದೆ ಎಂದು ಹೇಳಿದರು. ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆ ಮುಖ್ಯಗುರು ದೇವಿಂದ್ರಪ್ಪ ಇಮಡಾಪುರ, ಕಾರ್ಯನಿರತ ಪತ್ರಕರ್ತ ಸಂಘದ ಜಿಲ್ಲಾ ಕಾರ್ಯದರ್ಶಿ ವೀರೇಂದ್ರಕುಮಾರ ಕೊಲ್ಲೂರ ಮಾತನಾಡಿದರು. ಭುವನೇಶ್ವರಿ ದೇವಿ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಯೋಗ ಶಿಕ್ಷಕ ವಿಶ್ವರಾಜ ಜಗನ್ನಾಥ, ಶಿಕ್ಷಕ ಶಂಕರ ರಾಠೋಡ್ ಯೋಗ ಶಿಬಿರ ನಡೆಸಿಕೊಟ್ಟರು. ಖಾಸಗಿ ಅನುದಾನ ಪ್ರಾಥಮಿಕ ಶಾಲೆ ಶಿಕ್ಷಕರ ಸಂಘದ ಅಧ್ಯಕ್ಷರ ಶರಣಬಸಪ್ಪ ಬಮ್ಮನಳ್ಳಿ, ಅಣೆಮ್ಮ ಗೊಬ್ಬೂರ ಫ್ರೌಢ ಶಾಲೆ ಮುಖ್ಯಗುರು ಕಸ್ತೂರಿ ಪಾಟೀಲ್, ಶಿಕ್ಷಕರಾದ ಮನೋಹರಬಾಬು, ಲಲಿತಮ್ಮ ರೇಷ್ಮಿ, ಬಸಮ್ಮ ಎಸ್, ಸಾಜೀದಾ, ಕಾಶಿಬಾಯಿ, ಚಂದ್ರಕಾಂತ ಅವಂಟಿ, ನಾಗರಾಜ ಕುಲಕರ್ಣಿ, ಗೀತಾ ಸೊಲಗಿ ಸೇರಿದಂತೆ ಇತರರಿದ್ದರು.

ಶಿಕ್ಷಕ ಚಂದ್ರಕಾಂತ ಅವಂಟಿ ನಿರೂಪಣೆ ಮಾಡಿದರು. ಶೈಲಜಾ ಹರಸೂರ ಸ್ವಾಗತಿಸಿದರು. ನರಸಪ್ಪ ಚಿನ್ನಾಕಟ್ಟಿ ವಂದಿಸಿದರು.

## ಹೆಚ್ಚಿದ ಬೀದಿ ನಾಯಿಗಳ ಉಪಟಳ: ಜನರಲ್ಲಿ ಆತಂಕ

• ಉದಯವಾಹಿನಿ ಚನ್ನರಾಯಪಟ್ಟಣ

ಪಟ್ಟಣದಲ್ಲಿ ಬೀದಿ ನಾಯಿಗಳ ಉಪಟಳ ಹೆಚ್ಚಾಗಿದ್ದು, ಸಾರ್ವಜನಿಕರು ಕಿರಿಕಿರಿ ಅನುಭವಿಸುವಂತಾಗಿದೆ. ಶಾಲಾಮಕ್ಕಳು, ಮಹಿಳೆಯರು, ವಯೋವೃದ್ಧರು ರಸ್ತೆಯಲ್ಲಿ ಭಯದಲ್ಲಿ ನಡೆದಾಡುವಂತಾಗಿದೆ.

ಮೋಟರ್ ಬೈಕ್‌ಗಳು, ವಾಹನಗಳು ಸಂಚರಿಸಿದರೆ ನಾಯಿಗಳು ಬೊಗಳುತ್ತ ಹಿಂಬಾಲಿಸುತ್ತವೆ. ಇವುಗಳಿಂದ ತಪ್ಪಿಸಿಕೊಳ್ಳಲು ಹಲವು ಸಲ ಬೈಕ್‌ನಿಂದ ಬಿದ್ದು ಸವಾರರು ಗಾಯಗೊಂಡಿದ್ದಾರೆ. ನಾಯಿ ಕಡಿತಕ್ಕೂ ಒಳಗಾಗಿದ್ದಾರೆ. ಬೇರೆ ಊರಿನಿಂದ ತಡರಾತ್ರಿ ಬಸ್‌ನಲ್ಲಿ ಬಂದು, ಮನೆಗೆ ತೆರಳುವಾಗ ಹಲವು ಕಡೆ ಸಮಸ್ಯೆ ತಪ್ಪಿದ್ದಲ್ಲ. ಒಂದು ವೇಳೆ ನಡೆದುಕೊಂಡು ಹೋದರೆ ಅಥವಾ ಬೈಕ್‌ಗಳಲ್ಲಿ ಸಂಚರಿಸುವಾಗ ಎಚ್ಚರಿಕೆಯಿಂದ ಮನೆ ಸೇರಬೇಕಾದ ಸ್ಥಿತಿ ಇದೆ. ಈಚೆಗೆ ನೌಕರರೊಬ್ಬರು ರಾತ್ರಿ ಬಸ್ ನಿಲ್ದಾಣದಲ್ಲಿ ಇಳಿದು ವಸತಿಗೃಹಕ್ಕೆ ತೆರಳುವ ಸಂದರ್ಭದಲ್ಲಿ ಬೀದಿನಾಯಿಗಳು ದಾಳಿ ಮಾಡಲು ಮುಂದಾಗಿವೆ. ಇದರಿಂದ ವಿಚಲಿತರಾದ ಸಿಬ್ಬಂದಿ ಸ್ವಲ್ಪ ದೂರ ವಾಪಸ್ ಹೋಗಿದ್ದಾರೆ. ನಾಯಿಗಳು ಬೇರೆಡೆಗೆ ತೆರಳಿದ ಸ್ವಲ್ಪ ಹೊತ್ತಿನ ಬಳಿಕ ಮನೆ ಸೇರಬೇಕಾಯಿತು. ಬೀದಿ ನಾಯಿಗಳ ಉಪಟಳದ ಗಂಭೀರತೆಗೆ ಇದು ಸಾಕ್ಷಿ ಎನ್ನುವಂತಾಗಿದೆ.


ಉದಯವಾಹಿನಿ ಚಿತ್ರ

ಕೆಲವು ಸಂದರ್ಭದಲ್ಲಿ ಹಾಡಹಗಲೇ ದಾಳಿ ಮಾಡುತ್ತವೆ. ಅಲ್ಲಲ್ಲಿ ಗುಂಪುಗೂಡಿರುವ ನಾಯಿಗಳು ಮನುಷ್ಯರ ಮೇಲೆ ಏಕಾಏಕಿ ದಾಳಿ ಮಾಡಿ ಕಚ್ಚುತ್ತವೆ. ಇದರಿಂದಾಗಿ ಜನರಲ್ಲಿ ಆತಂಕ ಸೃಷ್ಟಿಸಿದೆ. ಬೀದಿ ನಾಯಿಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ತಪ್ಪಿಸಲು ಜನಪ್ರತಿನಿಧಿಗಳು ಅಥವಾ ಅಧಿಕಾರಿಗಳು ಮುಂದಾಗುತ್ತಿಲ್ಲ ಎಂಬ ಅಸಮಾಧಾನ ಜನರದ್ದು.

> ಚನ್ನರಾಯಪಟ್ಟಣದ1007 ಜನ ಸೇರಿದಂತೆ 5 ತಿಂಗಳಲ್ಲಿ ತಾಲ್ಲೂಕಿನಲ್ಲಿ 1994 ಜನರಿಗೆ ಬೀದಿ ನಾಯಿಗಳು ಕಚ್ಚಿವೆ. ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಲಸಿಕೆ ಲಭ್ಯವಿದ್ದು ಉಚಿತವಾಗಿ ನೀಡಲಾಗುತ್ತದೆ. –ಎ.ಆರ್. ಅನಿತಾ
> ಚನ್ನರಾಯಪಟ್ಟಣ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ

## ತೈಲ ಬೆಲೆ ಏರಿಕೆ ಖಂಡಿಸಿ ಬಿಜೆಪಿಯಿಂದ ಬೃಹತ್ ಪ್ರತಿಭಟನೆ

• ಉದಯವಾಹಿನಿ ಸಿರುಗುಪ್ಪ

ನಗರದ ಮಹಾತ್ಮ ಗಾಂಧೀಜಿ ವೃತ್ತದಲ್ಲಿ ಬಿಜೆಪಿ ಪಕ್ಷದ ವತಿಯಿಂದ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ವಿರೋಧಿಸಿ ಕೆಲಕಾಲ ಬೃಹತ್ ಪ್ರತಿಭಟನೆ ನಡೆಸಿ ನಂತರ ಗ್ರೇಡ್-2 ತಹಶೀಲ್ದಾರ್ ಸಿದ್ಧರೂಢ ಅವರಿಗೆ ಮನವಿ ಸಲ್ಲಿಸಲಾಯಿತು.

ಮಾಜಿ ಶಾಸಕ ಎಮ್.ಎಸ್.ಸೋಮಲಿಂಗಪ್ಪ ಅವರು ಮಾತನಾಡಿ ರಾಜ್ಯದಲ್ಲಿ ಸರ್ಕಾರ ಗ್ಯಾರಂಟಿಗಳ ನೆಪದಲ್ಲಿ ಒಂದು ಕಡೆ ಹೆಚ್ಚಿನ ಹಣಕಾಸನ್ನು ಕಸಿದು ಇನ್ನೊಂದೆಡೆ ಅಲ್ಪಸ್ವಲ್ಪ ಹಣವನ್ನು ಜನರಿಗೆ ನೀಡುತ್ತಾ ಸಾರ್ವಜನಿಕರಿಂದ ವಸೂಲಿಯಾದ ಹಣವನ್ನು ದೋಚುತ್ತಿರುವ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜನ ವಿರೋಧಿಯಾಗಿದೆ. ರಾಜ್ಯದಲ್ಲಿ ಕಾಂಗ್ರೇಸ್ ಸರ್ಕಾರ ಅಧಿಕಾರಕ್ಕೆ ಬಂದ ಕೆಲವೇ ತಿಂಗಳುಗಳಲ್ಲಿ ಕಾನೂನು ಸುವವ್ಯಸ್ಥೆ ಹದಗೆಡುತ್ತಿದೆ. ಹಣಕಾಸು ಖಾತೆಯನ್ನು ವಹಿಸಿಕೊಂಡಿರುವ ಮುಖ್ಯಮಂತ್ರಿಗಳ ಕುಮ್ಮಕ್ಕಿನಿಂದಲೇ ದಲಿತರ ಹಣ ಚುನಾವಣೆ ವೇಳೆ ಅನ್ಯರಾಜ್ಯಗಳ ಪಾಲಾಗುತ್ತಿದೆ.


ಉದಯವಾಹಿನಿ ಚಿತ್ರ

ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ಹಣ ತೆಲಂಗಾಣಕ್ಕೆ ವರ್ಗಾವಣೆಯಾಗಿದೆ. ದಲಿತರಿಗೆ ಮೀಸಲಿಟ್ಟ ವಿಶೇಷ ಅನುದಾನವು ಗ್ಯಾರಂಟಿ ಪಾಲಾಗಿದ್ದು ಕೂಡಲೇ ಮುಖ್ಯಮಂತ್ರಿಗಳು ರಾಜಿನಾಮೆ ನೀಡಬೇಕೆಂದು ಒತ್ತಾಯಿಸಿದರು. ತಾಲ್ಲೂಕಿನಲ್ಲಿ ಕೆಲವು ಮುಖಂಡರು, ಅಧಿಕಾರಿಗಳು, ಪೋಲೀಸರ ಕುಮ್ಮಕ್ಕಿನಿಂದಲೇ ರಾಜಾರೋಷವಾಗಿ ನೋಂಧಣಿಯ ಹೆಚ್ಚುವರಿ ಶುಲ್ಕ, ಮರಳು ಮತ್ತು ಮರ ಸಾಗಣೆ ದಂಧೆಗಳನ್ನು ನಡೆಯುತ್ತಿವೆಯೆಂದು ಆರೋಪಿಸಿದರು.

## ಲೋಕಾಯುಕ್ತ ಅಧಿಕಾರಿಗಳ ಪ್ರವಾಸ : ಸಾರ್ವಜನಿಕರ ಅಹವಾಲು ಸ್ವೀಕಾರ

• ಉದಯವಾಹಿನಿ ಚಿತ್ರದುರ್ಗ

ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಅಧಿಕಾರಿಗಳು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಭೇಟಿ ನೀಡಿ ಸಾರ್ವಜನಿಕರಿಂದ ದೂರು ಅಹವಾಲುಗಳನ್ನು ಸ್ವೀಕರಿಸುವ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ಲೋಕಾಯುಕ್ತ ಪೊಲೀಸ್ ನಿರೀಕ್ಷಕರು ಜೂ. 27 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹೊಸದುರ್ಗ, ಮೊಳಕಾಲ್ಮೂರು ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಹಾಗೂ ಅದೇ ದಿನ ಮಧ್ಯಾಹ್ನ 2.30 ರಿಂದ ಸಂಜೆ 05.30 ರವರೆಗೆ ಚಳ್ಳಕೆರೆ ತಾಲ್ಲೂಕು ಪಂಚಾಯತಿ ಕಚೇರಿಯಲ್ಲಿ ಉಪಸ್ಥಿತರಿದ್ದು, ಸಾರ್ವಜನಿಕರಿಂದ ದೂರು, ಅಹವಾಲುಗಳನ್ನು ನಿಗದಿತ ಅರ್ಜಿ ನಮೂನೆಯಲ್ಲಿ ಸ್ವೀಕರಿಸುವರು. ಜೂ.28 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹಿರಿಯೂರು ತಾ.ಪಂ., ಮಧ್ಯಾಹ್ನ 2.30 ರಿಂದ ಸಂಜೆ 05.30ರವರೆಗೆ ಚಿತ್ರದುರ್ಗ ತಾಲ್ಲೂಕು ಪಂಚಾಯತಿ ಕಚೇರಿಯಲ್ಲಿ ಪೊಲೀಸ್ ನಿರೀಕ್ಷಕರು. ಅದೇ ದಿನ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.30 ರವರೆಗೆ ಹೊಳಲ್ಕೆರೆ ತಾಲ್ಲೂಕು ಪಂಚಾಯತಿ ಕಚೇರಿಯಲ್ಲಿ ಪೊಲೀಸ್ ಉಪಾಧೀಕ್ಷಕರು ಸಾರ್ವಜನಿಕರಿಂದ ದೂರು, ಅಹವಾಲುಗಳನ್ನು ಸ್ವೀಕರಿಸುವರು. ಸಾರ್ವಜನಿಕರು ತಮ್ಮ ದೂರು, ಅಹವಾಲುಗಳನ್ನು ನಿಗದಿತ ನಮೂನೆ 01 ಮತ್ತು 02 ರಲ್ಲಿ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾರಾಟಗಾರರಿಗೆ ವರವಾದ ಕಾರ್ಚಿಕಾಯಿ

## ಜಮೀನುಗಳಲ್ಲಿ ಯಾವುದೇ ಆರೈಕೆ, ಗೊಬ್ಬರ, ಬಿತ್ತನೆ ಬೇಡದೇ ಬೆಳೆಯುವ ಅಪಾರ ಪ್ರಮಾಣದಲ್ಲಿ ಬೆಳೆಯುವ ಔಷಧಿ ತರಕಾರಿ


• ಉದಯವಾಹಿನಿ ನರೇಗಲ್

ಅನೇಕ ಕಾಯಿಲೆಗಳನ್ನು ವಾಸಿಮಾಡಬಲ್ಲ ಕಾರ್ಚಿಕಾಯಿಯು ನರೇಗಲ್ ಹೋಬಳಿಯ ಎರೆ ಭೂಮಿಯಲ್ಲಿ ಅಧಿಕವಾಗಿ ನೈಸರ್ಗಿಕವಾಗಿಯೇ ಬೆಳೆಯುತ್ತದೆ. ಜೂನ್, ಜುಲೈ, ಆಗಸ್ಟ್ ತಿಂಗಳಲ್ಲಿ ಕೃಷಿಕರ ಪಾಲಿಗೆ ಆದಾಯದ ಮೂಲವಾಗಿದೆ.

ಜಿಲ್ಲೆಗೆ ದೊಡ್ಡ ಹೋಬಳಿಯಾಗಿರುವ ನರೇಗಲ್ ವ್ಯಾಪ್ತಿಯ ಬೂದಿಹಾಳ, ತೋಟಗಂಟಿ, ಹಾಲಕೆರೆ, ಜಕ್ಕಲಿ, ಮಾರನಬಸರಿ, ಅಬ್ಬಿಗೇರಿ, ನಿಡಗುಂದಿ, ನಿಡಗುಂದಿಕೊಪ್ಪ, ಕಳಕಾಪುರ, ಹೊಸಳ್ಳಿ, ಯರೇಬೇಲೇರಿ, ಕುರುಡಗಿ ಗ್ರಾಮಗಳ ವ್ಯಾಪ್ತಿಗೆ ಒಳಪಡುವ ಬಯಲು ಸೀಮೆಯ ಮಳೆ ಆಶ್ರಿತ ಜಮೀನುಗಳಲ್ಲಿ ಯಾವುದೇ ಆರೈಕೆ, ಗೊಬ್ಬರ, ಬಿತ್ತನೆ ಬೇಡದೇ ಬೆಳೆಯುವ ಅಪಾರ ಪ್ರಮಾಣದಲ್ಲಿ ಬೆಳೆಯು ಔಷಧಿ ತರಕಾರಿಯಾಗಿದೆ.

ನೆಲದಲ್ಲಿ ಬಳ್ಳಿಯ ರೂಪದಲ್ಲಿ ಹರಡುವ ಕಾರ್ಚಿಕಾಯಿ ಸಸ್ಯ ಉಳಿದ ಸಮಯದಲ್ಲಿ ಗಡ್ಡೆಯ ರೂಪದಲ್ಲಿ ಜಮೀನಿನ ಅಡಿಯಲ್ಲಿ ಅಡಗಿರುತ್ತದೆ. ಹಲವಾರು ರೈತರು ಇದೊಂದು ಕಳೆ ಸಸ್ಯ ಎಂದು ಭಾವಿಸುತ್ತಾರೆ. ಆದರೆ, ಶತಮಾನಗಳಿಂದ ಕಾರ್ಚಿಕಾಯಿ ಇಂತಹ ಹಲವಾರು ಅಡಚಣೆಗಳ ನಡುವೆ ಬೇಸಿಗೆಯ ಸಂದರ್ಭದಲ್ಲಿ ಉದುರುವ ಕೆಲವು ಹನಿಗಳಿಂದ ಭೂಮಿಯಲ್ಲಿ ಅಡಗಿ ಕುಳಿತ ಗಡ್ಡೆ ಮರು ಜೀವ ಪಡೆದು ಸಮೃದ್ಧವಾಗಿ ಬೆಳೆದು ರುಚಿಕರ ಆಹಾರವಾಗಿ ದೊರೆಯುತ್ತದೆ. ಬೀಜ ಬಿತ್ತನೆ ಮಾಡಲು, ಕಳೆ ತೆಗೆಯಲು, ಗೊಬ್ಬರ ಹರಡಲು ಹಾಗೂ ಇತರೆ ಕೃಷಿ ಚಟುವಟಿಕೆಗಳಿಗಾಗಿ ಹೊಲಕ್ಕೆ ಹೋಗುವ ಮಹಿಳೆಯರು ತಮ್ಮ ಕೆಲಸದ ಜೊತೆಯಲ್ಲಿ ಪುಕ್ಕಟೆಯಾಗಿ ದೊರೆಯುವ ಕಾರ್ಚಿಕಾಯಿ ಆರಿಸಿಕೊಂಡು ಬರುತ್ತಾರೆ. ತಮ್ಮ ಸೀರೆಯ ಸೆರಗನ್ನೇ ಚೀಲವಾಗಿಸಿಕೊಂಡು, ಮೈ ಬಗ್ಗಿಸಿ ನೆಲ ಮಟ್ಟದ ಬಳ್ಳಿಯಿಂದ ಕಾರ್ಚಿಕಾಯಿ ಸಂಗ್ರಹಿಸುತ್ತಾರೆ. ಮನೆಗೆ ತಂದು ಹಸಿ ಮೆಣಸಿನ ಕಾಯಿ, ಅರಿಸಿನ, ಉಪ್ಪು ಅಗತ್ಯ ಮಸಾಲೆ ಹಾಕಿ ಎಣ್ಣೆಯಲ್ಲಿ ಕರಿದು ಪಲ್ಯ ಮಾಡುತ್ತಾರೆ. ಸ್ವಾದಿಷ್ಟ ಪಲ್ಯವನ್ನು ರೊಟ್ಟಿ, ತಾಲಿಪೆಟ್ಟು, ಚಪಾತಿ, ಅನ್ನ, ಮುದ್ದೆಗಳ ಜೊತೆಯಲ್ಲಿ ಸವಿಯುತ್ತಾರೆ. ಹೊಲದಿಂದ ತಂದಿರುವ ಕಾರ್ಚಿಕಾಯಿಗಳನ್ನು ತಟ್ಟೆಯಲ್ಲಿ ಹಾಕಿರುವುದು ಡಾ.ಶಿವಯ್ಯ.ಎ.ರೋಣ ಆಯುರ್ವೇದ ವೈದ್ಯರೋಗ ನಿರೋಧಕ ಶಕ್ತಿಯನ್ನು ಹೊಂದಿರುವ ಕಾರ್ಚಿಕಾಯಿಯು ದೇಹದಲ್ಲಿ ಚೈತನ್ಯ ತುಂಬುವುದಲ್ಲದೆ ತನ್ನ ಔಷಧೀಯ ಗುಣಗಳಿಂದ ಅನೇಕ ಕಾಯಿಲೆಗಳಿಂದ ರಕ್ಷಣೆ ಮಾಡುತ್ತದೆ ಕೆಲವು ಮಹಿಳೆಯರು ಕಾರ್ಚಿಕಾಯಿಗಳನ್ನು ದೊಡ್ಡ ಪ್ರಮಾಣದಲ್ಲಿ ಸಂಗ್ರಹಿಸಿ ಪ್ರತಿ ಕೆಜಿಗೆ 50 ರಿಂದ 80 ವರೆಗೆ ಮಾರಾಟ ಮಾಡುತ್ತಾರೆ. ಗಾಡಿ ಮೂಲಕ ಮಾರಾಟ ಮಾಡುವ ಸಂಚಾರಿ ವ್ಯಾಪಾರಸ್ಥರು ಮನೆ, ಮನೆಗೆ ಹೋಗಿ ಪ್ರತಿ ಕೆಜಿಗೆ 100 ರಿಂದ 150 ವರೆಗೆ ಮಾರಾಟ ಮಾಡುತ್ತಾರೆ.

ಕಾರ್ಚಿಕಾಯಿ ಒಟ್ಟಾಗಿದ್ದರೆ ಉಂಟಾಗುವ ಕಾವಿನಿಂದ ಬೀಜಗಳು ಒಡೆದು ಹೋಗುತ್ತವೆ. ಆಗ ಪಲ್ಯ ಮಾಡಲು ಬರುವುದಿಲ್ಲ. ಹಾಗಾಗಿ ಬೇಗನೆ ಮಾರಾಟ ಮಾಡುವ ಉದ್ದೇಶದಿಂದ ಕೆಲವೊಮ್ಮೆ ಕಡಿಮೆ ಬೆಲೆಗೂ ಮಾರಾಟ ಮಾಡುವ ಸಾಧ್ಯತೆ ಇರುತ್ತದೆ' ಎನ್ನುತ್ತಾರೆ.



ಉದಯವಾಹಿನಿ ಚಿತ್ರ

### ಔಷಧೀಯ ಗುಣಗಳ ಆಗರ ಕಾರ್ಚಿಕಾಯಿ

ಔಷಧೀಯ ಗುಣಗಳ ಆಗರವಾಗಿರುವ ಕಾರ್ಚಿಕಾಯಿಯನ್ನು ರಕ್ತನಾಳಗಳಲ್ಲಿ ತುಂಬಿರುವ ಕೊಬ್ಬಿನ ಅಂಶವನ್ನು ಪರಿಣಾಮಕಾರಿಯಾಗಿ ಹೋಗಲಾಡಿಸುತ್ತದೆ. ಹೃದಯಾಘಾತವನ್ನು ತಡೆಗಟ್ಟುವಲ್ಲಿ ಮಹತ್ತರ ಪಾತ್ರವಹಿಸುತ್ತದೆ. ಕೆಂಪು ರಕ್ತಕಣಗಳ ಉತ್ಪತ್ತಿಗೆ ಸಹಕರಿಸಿ ಉತ್ತೇಜನ ನೀಡುತ್ತದೆ. ಕೀಲು ಸಂಧು ನೋವುಗಳ ನಿವಾರಣೆಗೂ ಯಕೃತ್ ಸಂರಕ್ಷಕವಾಗಿಯೂ ಮೂತ್ರಪಿಂಡದ ಹರಳುಗಳನ್ನು ಕರಗಿಸಲೂ ಬಳಕೆಯಾಗುತ್ತದೆ. ಕಾರ್ಚಿಕಾಯಿ ಸೇವನೆಯಿಂದ ಹೊಟ್ಟೆಯ ಜಂತುಗಳು ನಾಶವಾಗುತ್ತವೆ. ಇದನ್ನು ತಿನ್ನುವುದರಿಂದ ರೋಗ ನಿರೋಧಕ ಶಕ್ತಿ ಬೆಳೆಯುತ್ತದೆ ಎನ್ನುವ ಪಾರಂಪರಿಕ ನಂಬಿಕೆ ಇಂದಿಗೂ ಜನರಲ್ಲಿ ಉಳಿದಿದೆ.

> ಕಾರ್ಚಿಕಾಯಿಗಳನ್ನು ರಾತ್ರಿ ವೇಳೆ ಮಜ್ಜಿಗೆಯಲ್ಲಿ ನೆನೆಹಾಕಿ ಮಾರನೇ ದಿನ ಬಿಸಿಲಿನಲ್ಲಿ ಒಣಗಿಸುವ (ಈ ರೀತಿ ಏಳೆಂಟು ದಿನ ಮಾಡ್ತಾರೆ) ಮೂಲಕ ಬಾಳಕ ಕೂಡ ತಯಾರಿಸುತ್ತಾರೆ. ಇವನ್ನು ಬೇಕೆನಿಸಿದಾಗ ಎಣ್ಣೆಯಲ್ಲಿ ಕರಿದು ಬಳಸಬಹುದಾಗಿದೆ. ಅಷ್ಟೇ ಅಲ್ಲದೇ, ಕಾರ್ಚಿಕಾಯಿಗಳಿಂದ ಚಟ್ನಿ, ಉಪ್ಪಿನಕಾಯಿ ಕೂಡ ತಯಾರಿಸಬಹುದಾಗಿದೆ. ಇದರ ಮೌಲ್ಯವರ್ಧನೆಗೆ ಅವಕಾಶಗಳಿವೆ' ಎನ್ನುತ್ತಾರೆ ಬಸಮ್ಮ ಮಾರನಬಸರಿ.
> –ಫಕೀರವ್ವ ತಳವಾರ, ರೈತ ಮಹಿಳೆ

> ಕಾರ್ಚಿಕಾಯಿಯು ಕಕುರಬಿಟೇಸಿ ಕುಟಂಬಕ್ಕೆ ಸೇರಿದ್ದು ವೈಜ್ಞಾನಿಕವಾಗಿ ಮೊಮೊರ್ಡಿಕಾ ಸಿಂಬಲೇರಿಯಾ ಎಂದು ಕರೆಯುತ್ತಾರೆ ಔಷಧೀಯ ವಿಶಿಷ್ಟ ಗುಣಗಳನ್ನೇ ಹೊಂದಿದ್ದರು ರೈತರು ಅಧಿಕ ರಾಸಾಯನಿಕ ಬಳಕೆ ಮಾಡುತ್ತಿರುವ ಕಾರಣ ಅಳವಿನಂಚಿನಲ್ಲಿದೆ
> –ಮಂಜುನಾಥ.ಎಸ್.ನಾಯಕ, ಜೀವ ವೈವಿಧ್ಯ ಸಂಶೋಧಕ

# ಯಹೂದಿಗಳ ಎರಡು ಪ್ರಾರ್ಥನಾ ಮಂದಿರಗಳ ಮೇಲೆ ದಾಳಿ

## ರಷ್ಯಾದಲ್ಲಿ ಕ್ರೈಸ್ತ, ಯಹೂದಿ ಪ್ರಾರ್ಥನಾ ಮಂದಿರಗಳ ಮೇಲೆ ಉಗ್ರ ದಾಳಿ: 16 ಜನರನ್ನು ಕೊಂದಿದ್ದ 6 ಉಗ್ರರ ಹತ್ಯೆ



ಮಾಹಿತಿ ಹೊರ ಬೀಳಬೇಕಿದೆ

**ರಷ್ಯಾ:** ಮುಸ್ಲಿಂ ಬಾಹುಳ್ಯದ ರಷ್ಯಾದ ದಾಗೆಸ್ತಾನ್ ಪ್ರಾಂತ್ಯ ಭೀಕರ ಭಯೋತ್ಪಾದಕ ದಾಳಿಗೆ ಸಾಕ್ಷಿಯಾಗಿದ್ದು, ಎಲ್ಲಾ ದಾಳಿಕೋರರನ್ನೂ ಹೊಡೆದುರುಳಿಸಿರುವುದಾಗಿ ರಷ್ಯಾ ಸರ್ಕಾರ ಹೇಳಿಕೊಂಡಿದೆ. ರಷ್ಯಾದ ದಾ ಗೆಸ್ತಾನ್ ಪ್ರಾಂತ್ಯದ ಒಂದು ಚರ್ಚ್, ಯಹೂದಿಗಳ ಎರಡು ಪ್ರಾರ್ಥನಾ ಮಂದಿರಗಳ ಮೇಲೆ ಭಾನುವಾರ ಉಗ್ರರು ದಾಳಿ ನಡೆಸಿದ್ದರು. ಉಗ್ರರ ಭೀಕರ ದಾಳಿಯಿಂದಾಗಿ 16 ಮಂದಿ ಸಾವನ್ನಪ್ಪಿದ್ದರು. ಕೂಡಲೇ ಕಾರ್ಯಾಚರಣೆ ಕೈಗೊಂಡ ರಷ್ಯಾದ ಭದ್ರತಾ ಸಿಬ್ಬಂದಿ ಎಲ್ಲಾ 6 ಭಯೋತ್ಪಾದಕರನ್ನು ಹೊಡೆದುರುಳಿಸಿರುವುದಾಗಿ ಹೇಳಿದೆ. ಈ ಉಗ್ರರು ಯಾವ ಉಗ್ರಗಾಮಿ ಸಂಘಟನೆಗೆ ಸೇರಿದವರು ಎಂದು ಈವರೆಗೂ ತಿಳಿದು ಬಂದಿಲ್ಲ. ಈ ಪ್ರಕರಣದ ಕುರಿತಾಗಿ ತನಿಖೆ ನಡೆಯುತ್ತಿದ್ದು, ಉಗ್ರರ ಸಂಚು ಹಾಗೂ ಅವರಿಗೆ ಬೆಂಬಲ ನೀಡಿದವರ ಕುರಿತಾಗಿ ಇನ್ನಷ್ಟೇ ಮಾಹಿತಿ ಹೊರ ಬೀಳಬೇಕಿದೆ. ಭಾರತೀಯ ಕಾಲಮಾನ ಸೋಮವಾರ ಬೆಳಗ್ಗೆ 10.45ರ ಸುಮಾರಿಗೆ ಈ ಕಾರ್ಯಾಚರಣೆ ಅಂತ್ಯಗೊಂಡಿದೆ ಎಂದ ರಷ್ಯಾದ ಭದ್ರತಾ ಪಡೆಗಳು ಮಾಹಿತಿ ನೀಡಿವೆ. ಉಗ್ರರು ಚರ್ಚ್, ಯಹೂದಿ ಪ್ರಾರ್ಥನಾ ಮಂದಿರದ ಮೇಲೆ ದಾಳಿ ನಡೆಸುವ ಮುನ್ನ ಪೊಲೀಸರ ಚೆಕ್ ಪಾಯಿಂಟ್‌ಗಳ ಮೇಲೂ ದಾಳಿ ನಡೆಸಿದ್ದರು ಎಂಬ ಮಾಹಿತಿ ಲಭ್ಯವಾಗಿದೆ. ರಷ್ಯಾದಲ್ಲಿ ಭಾನುವಾರ ಧಾರ್ಮಿಕ ರಜೆ ಇತ್ತು. ಈ ಹಿನ್ನೆಲೆಯಲ್ಲಿ ಈ ಭಾಗದ ಕ್ರೈಸ್ತರು, ಯಹೂದಿಗಳು ತಮ್ಮ ಪ್ರಾರ್ಥನಾ ಮಂದಿರಗಳಲ್ಲಿ ಪ್ರಾರ್ಥನೆಯಲ್ಲಿ ನಿರತರಾಗಿದ್ದರು. ಈ ವೇಳೆ ಉಗ್ರರು ದಾಳಿ ನಡೆಸಿದ್ದಾರೆ ಎಂದು ಎಎಫ್‌ಪಿ ಸುದ್ದಿ ಸಂಸ್ಥೆಯ ವರದಿಯಲ್ಲಿ ವಿವರಿಸಲಾಗಿದೆ.

ಇದಾದ ಬಳಿಕ ಹೆಚ್ಚಿನ ಪೊಲೀಸ್ ಸಿಬ್ಬಂದಿ ಹಾಗೂ ಉಗ್ರ ನಿಗ್ರಹ ಪಡೆಯನ್ನು ಸ್ಥಳಕ್ಕೆ ರವಾನಿಸಲಾಯ್ತು. ಭದ್ರತಾ ಪಡೆಯ ಕಾರ್ಯಾಚರಣೆ ವೇಳೆ ಎಲ್ಲಾ 6 ಉಗ್ರರೂ ಹತ್ಯೆಗೀಡಾದರು. ದಾಗೆಸ್ತಾನ್ ಪ್ರಾಂತ್ಯವು ಮುಸ್ಲಿಂ ಬಾಹುಳ್ಯದ ಪ್ರದೇಶವಾಗಿದ್ದು, ಇಲ್ಲಿ ನೆಲೆಸಿರುವ ಕ್ರೈಸ್ತರು ಹಾಗೂ ಯಹೂದಿಗಳ ಮೇಲೆ ಆಗಾಗ ದಾಳಿ ನಡೆಯುತ್ತಿರುತ್ತದೆ. ಈ ಭಾಗದಲ್ಲಿ ಅಂತಾರಾಷ್ಟ್ರೀಯ ಭಯೋತ್ಪಾದಕ ಸಂಘಟನೆಗಳ ಸ್ಲೀಪರ್ ಸೆಲ್ ಕೂಡಾ ಇರುವ ಶಂಕೆ ಇದೆ. ಇಸ್ರೇಲ್ – ಹಮಾಸ್ ಯುದ್ಧ ಶುರುವಾದ ಬಳಿಕ ಈ ಭಾಗದಲ್ಲಿ ಯಹೂದಿಗಳ ಮೇಲೆ ಭಾರೀ ಆಕ್ರೋಶ ವ್ಯಕ್ತವಾಗುತ್ತಿದೆ.

1990ರ ದಶಕದಲ್ಲಿ ರಷ್ಯಾದ ದಾಗೆಸ್ತಾನ್ ಪ್ರಾಂತ್ಯ, ಚೆಚೈನ್ಯಾ ಭಾಗಗಳು ಉಗ್ರ ಕೃತ್ಯಗಳ ಕಾರಸ್ಥಾನವಾಗಿದ್ದವು. ಈ ಭಾಗದಲ್ಲಿ 2 ಭೀಕರ ಯುದ್ಧಗಳೂ ನಡೆದಿವೆ. ಒಂದು ಯುದ್ಧ 1994 ರಿಂದ 1996ರವರೆಗೆ ನಡೆದಿತ್ತು. ಮತ್ತೊಂದು ಯುದ್ಧ 1999 ರಿಂದ 2000ನೇ ಇಸವಿವರೆಗೂ ನಡೆದಿತ್ತು. ಈ ಭಾಗದ ಉಗ್ರರು ಸಿರಿಯಾ ದೇಶಕ್ಕೆ ಪ್ರಯಾಣ ಬೆಳೆಸಿ ಐಸಿಸ್ ಉಗ್ರ ಸಂಘಟನೆ ಬಳಿ ತರಬೇತಿ ಪಡೆದು ಬಳಿಕ ದಾಗೆಸ್ತಾನ್‌ಗೆ ವಾಪಸ್ ಆಗುತ್ತಾರೆ. ಇಲ್ಲಿ ಉಗ್ರ ಕೃತ್ಯಗಳನ್ನ ನಡೆಸುತ್ತಾರೆ.

**ಐಸಿಸ್ ಬಳಿ ತರಬೇತಿ**

**ರಷ್ಯಾದ ದಾಗೆಸ್ತಾನ್, ಚೆಚೈನ್ಯಾ ಪ್ರಾಂತ್ಯಗಳು ಮುಸ್ಲಿಂ ಬಾಹುಳ್ಯದ ಪ್ರದೇಶ. ಇಲ್ಲಿನ ಉಗ್ರರು ಸಿರಿಯಾ ದೇಶಕ್ಕೆ ತೆರಳಿ ಐಸಿಸ್ ಬಳಿ ತರಬೇತಿ ಪಡೆದು ಬಂದು ದಾಗೆಸ್ತಾನ್‌ನಲ್ಲಿ ಉಗ್ರ ಕೃತ್ಯ ಎಸಗುತ್ತಾರೆ. ಭಾನುವಾರ ಕ್ರೈಸ್ತ ಹಾಗೂ ಯಹೂದಿಗಳ ಪ್ರಾರ್ಥನಾ ಮಂದಿರಗಳಲ್ಲಿ ಭಕ್ತರು ಸೇರುತ್ತಾರೆ. ಇದನ್ನೇ ಅವಕಾಶವನ್ನಾಗಿ ಬಳಸಿಕೊಂಡ ಉಗ್ರರು ದಾಳಿ ನಡೆಸಿದ್ದಾರೆ. ಈ ವೇಳೆ ಭಕ್ತರನ್ನು ರಕ್ಷಿಸಲು 15 ಪೊಲೀಸರು ಜೀವ ತೆತ್ತಿದ್ದು, ಎಲ್ಲಾ ಉಗ್ರರನ್ನೂ ಹೊಡೆದುರುಳಿಸಿದ್ದಾರೆ.**

**ಇನ್ನು ಈ ಘಟನೆಯಲ್ಲಿ ಕ್ರೈಸ್ತ ಹಾಗೂ ಯಹೂದಿ ಧರ್ಮೀಯ ಭಕ್ತಾದಿಗಳಿಗಿಂತಲೂ ಹೆಚ್ಚಾಗಿ ಪೊಲೀಸರೆ ಹತ್ಯೆಗೀಡಾಗಿದ್ದಾರೆ. ಒಟ್ಟು 16 ಮಂದಿ ಸಾವನ್ನಪ್ಪಿದ್ದವರ ಪೈಕಿ 15 ಮಂದಿ ಪೊಲೀಸರೇ ಇದ್ದಾರೆ. ಇನ್ನು ಈ ಘಟನೆಯಲ್ಲಿ ಓರ್ವ ಪಾದ್ರಿ ಸಾವನ್ನಪ್ಪಿದ್ದಾರೆ. ಪ್ರಾರ್ಥನಾ ಮಂದಿರಕ್ಕೆ ಬಂದಿದ್ದ ಭಕ್ತಾದಿಗಳಿಗೆ ಯಾವುದೇ ತೊಂದರೆ ಆಗದಂತೆ ಕಾಪಾಡಿದ್ದೇವೆ ಎಂದು ದಾಗೆಸ್ತಾನ್ ಪ್ರಾಂತ್ಯದ ಮುಖ್ಯ ಪೊಲೀಸ್ ಅಧಿಕಾರಿ ಮಾಹಿತಿ ನೀಡಿದ್ದಾರೆ.**

---

# ಮರಣ ಮೃದಂಗ : ಬಿಸಿಲ ಹೊಡೆತಕ್ಕೆ 1,301 ಮಂದಿ ಬಲಿ



**ಮೆಕ್ಕಾ:** ಹಜ್ ಯಾತ್ರೆಗಾಗಿ ಸೌದಿ ಅರೇಬಿಯಾದ ಮೆಕ್ಕಾಕ್ಕೆ ತೆರಳಿದ ಯಾತ್ರಾರ್ಥಿಗಳಿಗೆ ಬೇಸಿಗೆಯ ಬಿಸಿಲು, ಬಿಸಿಗಾಳಿಯ ಹೊಡೆತವು ಮಾರಣಾಂತಿಕವಾಗಿ ಪರಿಣಮಿಸಿದೆ.ಹಜ್ ಯಾತ್ರೆಯ ಸಮಯದಲ್ಲಿ 1,301 ಮಂದಿ ಮೃತಪಟ್ಟಿದ್ದಾರೆ ಎಂದು ಸೌದಿ ಅರೇಬಿಯಾ ನಿನ್ನೆ ಹೇಳಿದೆ. ಬಿಸಿಲಿನ ಝಳವೇ ಇದಕ್ಕೆ ಪ್ರಮುಖ ಕಾರಣ ಎಂದು ತಿಳಿಸಿದೆ.

ಈ ಕುರಿತು ಹೇಳಿಕೆ ನೀಡಿರುವ ಸೌದಿ ಸರ್ಕಾರ, ಈ ವರ್ಷ ಶಾಖದ ಒತ್ತಡದಿಂದ ಹಲವು ಆರೋಗ್ಯ ಸಮಸ್ಯೆ ಕಾಣಿಸಿಕೊಂಡಿದೆ. ಸಾವಿನ ಸಂಖ್ಯೆ 1,301ಕ್ಕೆ ತಲುಪಿದೆ. ಇನ್ನು ಹಲವರು ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಮಾಹಿತಿ ನೀಡಿದೆ. ಮೃತಪಟ್ಟವರಲ್ಲಿ ಬಹುತೇಕರು ಅಂದರೆ ಶೇ. 83ರಷ್ಟು ಮಂದಿ ಹಜ್ ಮಾಡಲು ಅರ್ಹರಾಗಿರಲಿಲ್ಲ. ಸಾಕಷ್ಟು ಮುಂಜಾಗ್ರತಾ ಕ್ರಮ ಕೈಗೊಳ್ಳದೆ ನೇರ ಸೂರ್ಯನ ಬೆಳಕಿಗೆ ಒಡ್ಡಿಕೊಂಡು ಮೈಲಿಗಟ್ಟಲೆ ನಡೆದಿದ್ದಾರೆ. ಇದರಿಂದ ಹೆಚ್ಚಿನ ಸಾವು ಸಂಭವಿಸಿದೆ ಎಂದು ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ.

ಮೃತರ ಪೈಕಿ ವೃದ್ಧರು ಮತ್ತು ದೀರ್ಘ ಕಾಲದ ಅನಾರೋಗ್ಯದಿಂದ ಬಳಲುತ್ತಿರುವ ವ್ಯಕ್ತಿಗಳೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಮೃತರನ್ನು ಗುರುತಿಸಲಾಗಿದೆ ಎಂದು ಸಿಎನ್‌ಎನ್ ವರದಿ ತಿಳಿಸಿದೆ. ಪವಿತ್ರ ನಗರವಾದ ಮೆಕ್ಕಾವನ್ನು ಕಾನೂನುಬದ್ಧವಾಗಿ ಪ್ರವೇಶಿಸಲು ಯಾತ್ರಾರ್ಥಿಗಳು ಲಭ್ಯವಿರುವ ಪರವಾನಗಿಗಳಲ್ಲಿ ಒಂದನ್ನು ಪಡೆದುಕೊಳ್ಳಬೇಕು. ಈ ಪರವಾನಗಿ ದುಬಾರಿ. ಹೀಗಾಗಿ ಸಾಮಾನ್ಯವಾಗಿ ಪ್ರತಿ ವರ್ಷ ಸಾವಿರಾರು ಮಂದಿ ಅನಧಿಕೃತವಾಗಿ ಮೆಕ್ಕಾ ಪ್ರವೇಶಿಸುತ್ತಾರೆ. ಪರವಾನಗಿ ಹೊಂದಿರುವ ಯಾತ್ರಾರ್ಥಿಗಳು ಹವಾನಿಯಂತ್ರಣ, ನೀರು, ಆಹಾರ ಸರಬರಾಜಿನ ವ್ಯವಸ್ಥೆ ಹೊಂದಿರುವ ಬಸ್‌ನಲ್ಲಿ ಪ್ರಯಾಣಿಸುವ ಅವಕಾಶ ಹೊಂದಿದ್ದಾರೆ.

ವೈಯಕ್ತಿಕ ಮಾಹಿತಿ, ಗುರುತಿನ ದಾಖಲೆಗಳ ಕೊರತೆಯ ಹೊರತಾಗಿಯೂ ಮೃತರನ್ನು ಗುರುತನ್ನು ಪತ್ತೆ ಹಚ್ಚಲಾಗಿದೆ. ಮೃ ತರನ್ನು ಗುರುತಿಸಲು, ಗೌರವ ಪೂರ್ವಕವಾಗಿ ಸಮಾಧಿ ಮಾಡಲು ಸೂಕ್ತ ಕ್ರಮ ಕೈಗೊಂಡಿದ್ದೇವೆ. ಮೃತರ ಕುಟುಂಬಗಳಿಗೆ ಮರಣ ಪ್ರಮಾಣ ಪತ್ರ ಗಳನ್ನು ನೀಡಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅತಿಯಾದ ಬಿಸಿಲಿನ ಜತೆಗೆ ಮೂಲ ಸೌಕರ್ಯದ ಕೊರತೆಯಿಂದ ಈ ಬಾರಿಯ ಹಜ್ ಯಾತ್ರೆ ಅಸಹನೀಯವಾಗಿದೆ ಎಂದು ಕೆಲವು ಪ್ರ್ಯಾರವಾಸಿಗರು ದೂರಿದ್ದಾರೆ. ಅ ಧಿಕೃತ ಪ್ರವಾಸ ಕೈಗೊಂಡವರೂ ಹೆಚ್ಚಿನ ಸಮ ಯವನ್ನು ಸುಡುವ ಬಿಸಿಲಿನಲ್ಲಿ ಹೊರಾಂಗಣದಲ್ಲಿ ಕಳೆಯುವಂತಾಗಿತ್ತು.

ಮೆಕ್ಕಾ ತೀರ್ಥಯಾತ್ರೆಯಲ್ಲಿ ತೊಡಗಿರುವ 16 ಹಜ್ ಪ್ರವಾಸೋದ್ಯಮ ಸಂಸ್ಥೆಗಳ ಪರವಾನಗಿಯನ್ನು ಹಿಂತೆಗೆದುಕೊಳ್ಳುವುದಾಗಿ ಈಗಾಗಲೇ ಈಜಿಪ್ ಸರ್ಕಾರ ಭರವಸೆ ನೀಡಿದೆ. ಕೆಲವು ಸಂಸ್ಥೆಗಳು ಉಳಿಯಲು ಸರಿಯಾದ ವಸತಿ ಸೌಕರ್ಯವನ್ನು ಒದಗಿಸದೆ ಸಾಕಷ್ಟು ಮಂದಿ ಶಾಖಕ್ಕೆ ತಮನ್ನು ಒಡ್ಡಿಕೊಂಡು ಸಂಕಷ್ಟ ಅನುಭವಿಸಿದ್ದಾರೆ. ಮೃತರ ಕುಟುಂಬಕ್ಕೆ ಸೂಕ್ತ ನೆರವು ನೀಡುವುದಾಗಿ ಈಜಿಪ್ ಪ್ರಧಾನಿ ಮುಸ್ತಾ ಮಡ್ಬೌಲಿ ಭರವಸೆ ನೀಡಿದ್ದಾರೆ.

**ಈ ವರ್ಷದ ಹಜ್ ಯಾತ್ರೆಯ ಸಮಯದಲ್ಲಿ ವರದಿಯಾದ ನೂರಾರು ಸಾವುಗಳು ಮತ್ತು ಗಾಯಗಳ ಹಿಂದಿನ ಮುಖ್ಯ ಕಾರಣ ವಿಪರೀತ ಶಾಖ ಎಂದು ಕಂಡುಕೊಳ್ಳಲಾಗಿದೆ. ಮೆಕ್ಕಾದಲ್ಲಿ ತಾಪಮಾನವು ದಾಖಲೆಯ ಪ್ರಮಾಣಕ್ಕೆ ಏರಿದೆ. ಅನಧಿಕೃತ ಯಾತ್ರೆಯ ಕಾರಣದಿಂದ ಸಮಸ್ಯೆಗಳು ಹೆಚ್ಚಿವೆ ಎಂದು ವಿವಿಧ ಅಧಿಕಾರಿಗಳು ಹೇಳಿದ್ದಾರೆ.**

---

# ವಿಶ್ವ ಕ್ರಾಫ್ಟ್ ಸಿಟಿ ಪಟ್ಟ ಅಲಂಕರಿಸಿದ ಶ್ರೀನಗರ



**ಶ್ರೀನಗರ:** ಜಮ್ಮು, ಕಾಶ್ಮೀರದ ಬೇಸಿಗೆ ರಾಜಧಾನಿಯಾದ ಶ್ರೀನಗರವನ್ನು ವಿಶ್ವ ಕರಕುಶಲ ಮಂಡಳಿಯು ಅಧಿಕೃತವಾಗಿ ವಿಶ್ವ ಕ್ರಾಫ್ಟ್ ಸಿಟಿ ಎಂದು ಗುರುತಿಸಿದೆ ಎಂದು ಅಧಿಕತ ವಕ್ತಾರರು ಇಲ್ಲಿ ತಿಳಿಸಿದ್ದಾರೆ. ಈ ಮಾನ್ಯತೆ ಕೈಮಗ್ಗ ಮತ್ತು ಕರಕುಶಲ ಕ್ಷೇತ್ರಕ್ಕೆ ಉತ್ತೇಜನ ನೀಡುತ್ತದೆ, ಇದು ಪ್ರವಾಸೋದ್ಯಮ ಮತ್ತು ಮೂಲಸೌಕರ್ಯ ಅಭಿವದ್ಧಿಗೆ ಪ್ರಯೋಜನವನ್ನು ನೀಡುತ್ತದೆ ಎಂದು ವಕ್ತಾರರು ಹೇಳಿದರು.

ಈ ಪ್ರತಿಷ್ಠಿತ ಗೌರವವು ನಗರದ ಶ್ರೀಮಂತ ಪರಂಪರೆ ಮತ್ತು ಅದರ ಕುಶಲಕರ್ಮಿಗಳ ಅಸಾಧಾರಣ ಕೌಶಲ್ಯಗಳನ್ನು ಒತ್ತಿಹೇಳುತ್ತದೆ, ಅವರ ಸಮರ್ಪಣೆ, ಕಲಾತಕತೆಯು ಜಾಗತಿಕ ಮೆಚ್ಚುಗೆಯನ್ನು ಗಳಿಸಿದೆ ಎಂದು ವಕ್ತಾರರು ಬಣ್ಣಿಸಿದ್ದಾರೆ. ಕಾಶೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಈ ಮಾನ್ಯತೆ ಕುಶಲಕರ್ಮಿಗಳ ಕಠಿಣ ಪರಿಶ್ರಮ ಮತ್ತು ಅಸಾಧಾರಣ ಪ್ರತಿಭೆಗಳಿಗೆ ಸಾಕ್ಷಿಯಾಗಿದೆ, ಇದು ಶ್ರೀನಗರದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಎತ್ತಿ ತೋ ರಿಸುತ್ತದೆ ಎಂದಿದ್ದಾರೆ. ನಮ ಕುಶಲಕರ್ಮಿಗಳನ್ನು ಬೆಂಬ ಲಿಸಲು ನಾವು ಬದ್ಧರಾಗಿದ್ದೇವೆ ಮತ್ತು ಈ ಪುರಸ್ಕಾರವು ಸಮುದಾಯಕ್ಕೆ ಸ್ಪಷ್ಟವಾದ ಪ್ರಯೋಜನಗಳನ್ನು ಅನುವಾದಿಸುತ್ತದೆ ಎಂದು ಖಚಿತಪಡಿಸಿಕೊಳ್ಳುತ್ತೇವೆ ಎಂದು ಅವರು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಜಮು ಮತ್ತು ಕಾಶೀರದ ಕರಕುಶಲ ಮತ್ತು ಕೈಮಗ್ಗ ವಲಯಕ್ಕೆ ಸ್ಥಿರವಾದ ಬೆಂಬಲವನ್ನು ತೋರಿಸಿದ್ದಾರೆ ಎಂದು ಸಿನ್ಹಾ ಹೇಳಿದ್ದಾರೆ.

ವರ್ಲ್ಡ್ ಕ್ರಾಫ್ಟ್ ಸಿಟಿ ಎಂಬ ಮಾನ್ಯತೆ ಕೈಮಗ್ಗ ಮತ್ತು ಕರಕುಶಲ ಕ್ಷೇತ್ರದ ಮೇಲೆ ಪರಿವರ್ತಕ ಪರಿಣಾಮ ಬೀರುತ್ತದೆ, ಬೆಳವಣಿಗೆ, ಸುಸ್ಥಿರತೆ, ನಾವೀನ್ಯತೆಯನ್ನು ಬೆಳೆಸುತ್ತದೆ.ಹೆಚ್ಚಿದ ಜಾಗತಿಕ ಮಾನ್ಯತೆಯೊಂದಿಗೆ, ಶ್ರೀನಗರದ ಕರಕುಶಲ ವಸ್ತುಗಳು ಅಂತರರಾಷ್ಟ್ರೀಯ ವೇದಿಕೆಯಲ್ಲಿ ವರ್ಧಿತ ಗೋಚರತೆಯನ್ನು ಪಡೆಯುತ್ತವೆ, ಹೊಸ ಮಾರುಕಟ್ಟೆಗಳನ್ನು ಮತ್ತು ಕುಶಲಕರ್ಮಿಗಳಿಗೆ ಅವಕಾಶಗಳನ್ನು ತೆರೆಯುತ್ತವೆ ಎಂದು ವಕ್ತಾರರು ತಿಳಿಸಿದ್ದಾರೆ. ಈ ವಲಯವು ಹೆಚ್ಚಿನ ಹೂಡಿಕೆ, ಹಣವನ್ನು ಆಕರ್ಷಿಸುವ ಸಾಧ್ಯತೆಯಿದೆ, ಮೂಲ ಸೌಕರ್ಯ ಅಭಿವದ್ಧಿಗೆ ಸಹಾಯ ಮಾಡುತ್ತದೆ ಮತ್ತು ಸಾಂಪ್ರದಾಯಿಕ ವಿಧಾನಗಳನ್ನು ಉಳಿಸಿಕೊಂಡು ಆಧುನಿಕ ತಂತ್ರಗಳನ್ನು ಪರಿಚಯಿಸುತ್ತದೆ ಎಂದು ಅವರು ಹೇಳಿದರು.

---

# ಯುಎಇ ವಿದೇಶಾಂಗ ಸಚಿವರೊಂದಿಗೆ ಜೈಶಂಕರ್ ಚರ್ಚೆ




**ದುಬೈ:** ವಿದೇಶಾಂಗ ವ್ಯವಹಾರಗಳ ಸಚಿವ ಎಸ್ ಜೈಶಂಕರ್ ಅವರು ಯುನೈಟೆಡ್ ಅರಬ್ ಎಮಿ ರೇಟ್ಸ್ ಸಹವರ್ತಿ ಅಬ್ದುಲ್ಲಾ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ ಭಾರತ ಮತ್ತು ಯುಎಇಯ ನಿರಂತರವಾಗಿ ಬೆಳೆಯುತ್ತಿರುವ ಸಮಗ್ರ ಕಾರ್ಯತಂತ್ರದ ಸಂಬಂಧಗಳ ಕುರಿತು ಉತ್ಪಾದಕ ಮತ್ತು ಆಳವಾದ ಸಂವಾದ ನಡೆಸಿದರು ಮತ್ತು ಪ್ರಾದೇಶಿಕ, ಜಾಗತಿಕ ಸಮಸ್ಯೆಗಳ ಕುರಿತು ಚರ್ಚಿಸಿದರು. ಅಬುಧಾಬಿಯ ಐಕಾನಿಕ್ ಬಿಎಪಿಎಸ್ ಹಿಂದೂ ಮಂದಿರಕ್ಕೆ ಭೇಟಿ ನೀಡಿ ಅಲ್ ನಹ್ಯಾನ್ ಅವರನ್ನು ಭೇಟಿ ಮಾಡುವ ಮುನ್ನ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಅಬುಧಾಬಿಯಲ್ಲಿ ಸೋಮವಾರ ಅಬ್ದುಲ್ಲಾ ಅವರನ್ನು ಭೇಟಿಯಾಗಲು ತುಂಬಾ ಸಂತೋಷವಾಗಿದೆ ಎಂದು ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಈ ವರ್ಷ ಫೆಬ್ರವರಿ 14 ರಂದು ಪ್ರಧಾನಿ ನರೇಂದ್ರ ಮೋದಿ ಅವರು ಉದ್ಘಾಟಿಸಿದ ಅಬುಧಾಬಿಯ ಹಿಂದೂ ಮಂದಿರಕ್ಕೆ ಜೈಶಂಕರ್ ಭೇಟಿ ನೀಡಿದರು. ಅವರು ದೇವಾಲಯವನ್ನು ಭಾರ ತ-ಯುಎಇ ಸ್ನೇಹದ ಗೋಚರ ಸಂಕೇತ ಎಂದು ಎಕ್ಸ್‌ನಲ್ಲಿ ಶ್ಲಾಘಿಸಿದ್ದಾರೆ. ದೇವಾಲಯದಲ್ಲಿ, ಸಚಿ ವರು ಯುಎಇ ದಾನವಾಗಿ ನೀಡಿದ ಭೂಮಿಯಲ್ಲಿ ದೇವಾಲಯವನ್ನು ನಿರ್ಮಿಸಿದ ಸಂಸ್ಥೆಯಾದ ಬೋಚಸನ್ವಾಸಿ ಅಕ್ಷರ ಪುರುಷೋತ್ತಮ ಸಂಸ್ಥಾನದ ಬಿಎಪಿಎಸ್‌ನ ಸನ್ಯಾಸಿಗಳೊಂದಿಗೆ ಸಂವಾದ ನಡೆಸಿದರು. ನಂತರ ಅಬುಧಾಬಿಯ ಲೌವ್ರೆ ಮ್ಯೂಸಿಯಂ ಆವರಣದಲ್ಲಿ ನಡೆದ ಯುಎಇಯಲ್ಲಿ ಭಾರತೀಯ ರಾಯಭಾರಿ ಕಚೇರಿ ಆಯೋಜಿಸಿದ್ದ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೈಶಂಕರ್ ಉದ್ಘಾಟಿಸಿ ಮಾತನಾಡಿದರು.ಅಧಿವೇಶನವು ಸುಮಾರು 30 ನಿಮಿಷಗಳ ಕಾಲ ನಡೆಯಿತು, ವಿವಿ ಧ ಹಿನ್ನೆಲೆಗಳಿಗಾಗಿ ನಿಯಮಿತವಾಗಿ ಯೋಗ ತರಗತಿಗಳನ್ನು ನಡೆಸುವ ವಸ್ತುಸಂಗ್ರಹಾಲಯದಲ್ಲಿ ಬಹುಸಂಖ್ಯೆಯ ದೇಶಗಳ ಭಾಗವಹಿಸುವವರು.

---

# ಲೋಕಸಭೆ ಅಧಿವೇಶನಕ್ಕೂ ಮುನ್ನ ಪ್ರತಿಪಕ್ಷಗಳಿಗೆ ಛಾಟಿ



**ನವದೆಹಲಿ:** ದೇಶದ ಜನತೆ ನನ್ನ ಮೇಲೆ ನಂಬಿಕೆ ಇಟ್ಟು ಲೋಕಸಭೆಗೆ ಆಯ್ಕೆ ಮಾಡಿದ್ದಾರೆ. ಅವರ ನಿರೀಕ್ಷೆಗಳನ್ನು ಈಡೇರಿಸುವುದು ಪ್ರತಿಯೊಬ್ಬರ ಕರ್ತವ್ಯ. ನಾಟಕ ಮಾಡುವುದು, ಕಲಾಪಕ್ಕೆ ಅಡ್ಡಿಪಡಿಸುವುದನ್ನು ಸಹಿಸುವುದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಮೊದಲ ದಿನವೇ ಪರೋಕ್ಷವಾಗಿ ಪ್ರತಿಪಕ್ಷಗಳಿಗೆ ಛಾಟಿ ಬೀಸಿದ್ದಾರೆ. ಸೋಮವಾರದಿಂದ ಆರಂಭವಾದ 18ನೇ ಲೋಕಸಭೆ ಪ್ರಾರಂಭಕ್ಕೂ ಮುನ್ನ ಸಂಸತ್ ಮುಂಭಾಗ ಮಾತನಾಡಿದ ಅವರು, ಕಲಾಪ ಆರಂಭಕ್ಕೂ ಮುನ್ನವೇ ಪ್ರತಿಪಕ್ಷಗಳಿಗೆ ಸ್ಪಷ್ಟವಾದ ಕಠಿಣ ಸಂದೇಶವನ್ನು ರವಾನಿಸಿದರು. ಇದು ಭಾರತೀಯ ಪ್ರಜಾಪ್ರಭುತ್ವದ ಮೈಲಿಗಲ್ಲು. 18ನೇ ಲೋಕಸಭೆ ಕಲಾಪವು ಸಂಸತ್ನ ಹೊಸ ಭವನದಲ್ಲಿ ನಡೆಯುತ್ತಿದೆ. ದೇಶದ 1.4 ಶತಕೋಟಿ ಜನರ ಆಕಾಂಕ್ಷೆಗಳನ್ನು ಈಡೇರಿಸುವ ಜವಾಬ್ದಾರಿ ನಮ ಮೇಲಿದೆ. ಜನರ ಹಿತಾಸಕ್ತಿಗಳಿಗೆ ಅನುಗುಣವಾಗಿ ಆಡಳಿತ ನಡೆಸುತ್ತೇವೆ ಎಂದು ವಾಗ್ದಾನ ಮಾಡಿದರು. ಸಾಮೂಹಿಕ ಸಹಭಾಗಿತ್ವದಲ್ಲೇ ನೀತಿ, ನಿರೂಪಣೆಗಳನ್ನು ಅನುಷ್ಠಾನಗೊಳಿಸುವಾಗ ಸಾಂವಿಧಾನಿಕ ಸಮಗ್ರತೆಯನ್ನು ಎತ್ತಿ ಹಿಡಿಯುತ್ತೇವೆ ಎಂದು ಶಪಥ ಮಾಡಿದರು. ದೇಶದ ಜನರು ಪ್ರತಿಪಕ್ಷಗಳಿಂದ ಹಲವಾರು ನಿರೀಕ್ಷೆಗಳನ್ನು ಎದುರು ನೋಡುತ್ತಾರೆ.

ಪ್ರಜಾಪ್ರಭುತ್ವದ ಘನತೆ ಕಾಪಾಡಲು ಪ್ರತಿಪಕ್ಷಗಳು ದೇಶದ ಸಾಮಾನ್ಯ ನಾಗರಿಕರ ನಿರೀಕ್ಷೆಗಳನ್ನು ಈಡೇರಿಸುತ್ತವೆ ಎಂದು ನಾನು ಭಾವಿಸುತ್ತೇನೆ. ಜನರಿಗೆ ನಾಟಕ ಮಾಡುವುದು, ಅವಾಂತರ ಮಾಡುವುದು ಬೇಡ. ಅವರಿಗೆ ಸತ್ಯ ಬೇಕು. ಅದರಲ್ಲಿ ಸತ್ವವೂ ಇರಬೇಕು. ಬರೀ ಘೋಷಣೆಗಳನ್ನು ಹೇಳುವುದರಿಂದ ಯಾವ ಪ್ರಯೋಜನವೂ ಇಲ್ಲ ಎಂದು ವಿ ರೋಧ ಪಕ್ಷಗಳಿಗೆ ಬಿಸಿ ಮುಟ್ಟಿಸಿದರು. ದೇಶಕ್ಕೆ ಉತ್ತಮ, ಜವಾಬ್ದಾರಿಯುತ ಪ್ರತಿಪಕ್ಷದ ಅಗತ್ಯವಿದೆ. 18ನೇ ಲೋಕಸಭೆ ಚುನಾವಣೆಯಲ್ಲಿ ಗೆದ್ದಿರುವ ಸಂಸದರು ಸಾಮಾನ್ಯ ಜನರ ನಿರೀಕ್ಷೆಗಳನ್ನು ಈಡೇರಿಸಲು ಬದ್ಧರಾಗಿರುತ್ತಾರೆ ಎಂಬ ಸಂಪೂರ್ಣ ನಂಬಿಕೆ ಇದೆ ಎಂಬ ವಿಶ್ವಾಸವನ್ನು ಮೋದಿ ವ್ಯಕ್ತಪಡಿಸಿದರು. ಎಲ್ಲರ ಒಪ್ಪಿಗೆ ಜೊತೆಗೆ ಎಲ್ಲರನ್ನೂ ಒಟ್ಟಿಗೆ ತೆಗೆದುಕೊಂಡು ಹೋಗುತ್ತೇವೆ. ಸಂವಿಧಾನದ ಪಾವಿತ್ರತೆಯನ್ನು ಕಾಪಾಡುವ ಮೂಲಕ ಎಲ್ಲರನ್ನೂ ಒಗ್ಗೂಡಿಸುವ ನಿರ್ಧಾರಗಳನ್ನು ವೇಗಗೊಳಿಸಲು ನಾವು ಬಯಸುತ್ತೇವೆ ಎಂದರು.

**ಕಳೆದ 10 ವರ್ಷಗಳಲ್ಲಿ ನಾವು ಯಾವಾ ಗಲೂ ಸಂಪ್ರದಾಯವನ್ನು ಜಾರಿಗೆ ತರಲು ಪ್ರಯತ್ನಿಸಿದ್ದೇವೆ. ಏಕೆಂದರೆ ಸರ್ಕಾರವನ್ನು ನಡೆಸಲು ಬಹುಮತ ಎಷ್ಟು ಮುಖ್ಯವೋ ಅದೇ ರೀತಿ ದೇಶ ಮುನ್ನಡೆಸಲು ಒಮತವೂ ಅಷ್ಟೇ ಮುಖ್ಯ ಎಂದು ಕಿವಿಮಾತು ಹೇಳಿದರು. 140 ಕೋಟಿ ಜನರ ಆಕಾಂಕ್ಷೆಗಳು ಮತ್ತು ಮಹಾತ್ವಾಕಾಂಕ್ಷೆಗಳನ್ನು ಪೂರೈಸಲು ನಾವು ನಿರಂತರವಾಗಿ ಪ್ರಯತ್ನಿಸುತ್ತೇವೆ**

**-ನರೇಂದ್ರಮೋದಿ, ಪ್ರಧಾನಿ**

---

# ಲೋಕಸಭೆ ಹಂಗಾಮಿ ಸ್ಪೀಕರ್ ಆಗಿ ಭರ್ತೃಹರಿ ಪ್ರಮಾಣ ವಚನ



**ನವದೆಹಲಿ:** ಏಳು ಬಾರಿ ಸಂಸದರಾಗಿರುವ ಭರ್ತೃಹರಿ ಮಹತಾಬ್ ಅವರು ಇಂದು 18ನೇ ಲೋಕಸಭೆಗೆ ಹಂಗಾಮಿ ಸ್ಪೀಕರ್ ಆಗಿ ಪ್ರಮಾಣ ವಚನ ಸ್ವೀಕರಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಹಂಗಾಮಿ ಸ್ಪೀಕರ್ ಭರ್ತೃಹರಿ ಅವರಿಗೆ ಪ್ರಮಾಣ ವಚನ ಬೋಧಿ ಸಿದರು. ಆದಾಗ್ಯೂ, ಹಂಗಾಮಿ ಸ್ಪೀಕರ್ ಆಗಿ ಇವರನ್ನು ನೇಮಿಸಿದ್ದಕ್ಕಾಗಿ ಪ್ರತಿಪಕ್ಷಗಳು ಕೇಂದ್ರವನ್ನು ತರಾಟೆಗೆ ತೆಗೆದುಕೊಂಡಿವೆ.

ಎಂಟು ಅವಧಿಯ ಲೋಕಸಭಾ ಸದಸ್ಯರಾಗಿರುವ ಅತ್ಯಂತ ಹಿರಿಯ ಸದಸ್ಯ ಕೋಡಿಕುನ್ನಿಲ್ ಸುರೇಶ್ ಅವರನ್ನು ಕಡೆಗಣಿಸಿ ಭರ್ತೃಹರಿ ಅವರನ್ನು ಹಂಗಾಮಿ ಸ್ಪೀಕರ್ ಮಾಡಿರುವುದು ತರವಲ್ಲ ಎಂದು ಪ್ರತಿಪಕ್ಷಗಳು ಆರೋಪಿಸಿವೆ. ದಲಿತ ಸಮುದಾಯಕ್ಕೆ ಸೇರಿದವರು ಎಂಬ ಕಾರಣಕ್ಕೆ ಸುರೇಶ್ ಅವರನ್ನು ದೂರವಿಡಲಾಗಿದೆ ಎಂದು ಪ್ರತಿಪಕ್ಷಗಳು ಕಿಡಿಕಾರಿವೆ.

1957 ರಲ್ಲಿ ಜನಿಸಿದ ಮಹತಾಬ್ ಒಡಿಶಾದ ಮೊದಲ ಮುಖ್ಯಮಂತ್ರಿ ದಿ ವಂಗತ ಹರೇಕಷ್ಣ ಮಹತಾಬ್ ಅವರ ಮಗ. ಭದ್ರ ಕ್ನಲ್ಲಿ ತನ್ನ ಶಾಲಾ ಶಿಕ್ಷಣವನ್ನು ಪೂರ್ಣಗೊಳಿಸಿದ ನಂತರ, ಅವರು ತಮ ಚುನಾವಣಾ ಅಫಿಡವಿಟ್ನ ಪ್ರಕಾರ 1978 ರಲ್ಲಿ ಉತ್ಕಲ್ ವಿಶ್ವವಿದ್ಯಾಲಯದಿಂದ ಬ್ಯಾಚುಲರ್ ಆಫ್ ಆರ್ಟ್ಸ್, ನಂತರ ಇಂಗ್ಲಿಷ್ನಲ್ಲಿ ಸ್ನಾತಕೋತ್ತರ ಪದವಿಯನ್ನು ಪಡೆದುಕೊಂಡಿದ್ದರು. ಕೆಲವು ದಶಕಗಳ ಕಾಲ ಒಡಿಶಾದ ಮಾಜಿ ಮುಖ್ಯಮಂತ್ರಿ ನವೀನ್ ಪಟ್ನಾಯಕ್ ನೇತೃತ್ವದ ಬಿಜು ಜನತಾ ದಳ (ಬಿಜೆಡಿ) ನ ಭಾಗವಾಗಿದ್ದ ನಂತರ ಮಹತಾಬ್ 2024 ರ ಲೋಕಸಭೆ ಚುನಾವಣೆಗೆ ಮುಂಚಿತವಾಗಿ ಪಕ್ಷದೊಂದಿಗಿನ ಸಂಬಂಧವನ್ನು ಕಡಿದುಕೊಂಡರು. ಇತ್ತೀಚಿನ ವರ್ಷಗಳಲ್ಲಿ ಪಕ್ಷದ ಕಾರ್ಯವೈಖರಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ತರುವಾಯ, ಅವರು ಬಿಜೆಪಿಗೆ ಸೇರಿದರು, ಅದು ನಂತರ ಅವರನ್ನು ಕಟಕ್ ಸ್ಥಾನಕ್ಕೆ ತನ್ನ ಅಭ್ಯರ್ಥಿ ಎಂದು ಘೋಷಿಸಿತು. 2024 ರ ಚುನಾವಣೆಯಲ್ಲಿ, ಮಹತಾಬ್ ಅವರು ತಮ ಹಿಂದಿನ ಪಕ್ಷದ ಸಹೋದ್ಯೋಗಿ ಸಂತಪ್ ಮಿಶ್ರಾ ಅವರನ್ನು 57,077 ಮತಗಳಿಂದ ಸೋಲಿಸುವ ಮೂಲಕ ಸತತ ಏಳನೇ ಬಾರಿಗೆ ಸಂಸದರಾಗಿ ಆಯ್ಕೆಯಾಗಿದ್ದಾರೆ.

---

# ಸಿಎಂ ಯೋಗಿ ಆದಿತ್ಯನಾಥ್‌ರ ನಕಲಿ ಕಾರ್ಯದರ್ಶಿ ಅರೆಸ್ಟ್

**ಲಕ್ನೋ:** ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥರ ಕಾರ್ಯದರ್ಶಿಯಂತೆ ನಟಿಸಿ, ದೂರವಾಣಿ ಮೂಲಕ ಸರ್ಕಾರಿ ಅಧಿ ಕಾರಿಗಳನ್ನು ವಂಚಿಸಿದ ಆರೋಪದ ಮೇಲೆ ಕುಖ್ಯಾತ ಕ್ರಿಮಿನಲ್ ಒಬ್ಬನನ್ನು ವಿಶೇಷ ಕಾರ್ಯಪಡೆ (ಎಸ್‌ಟಿಎಫ್) ಬಂಧಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬಂಧಿತ ಆ ರೋಪಿಯನ್ನು ವಿವೇಕ್ ಶರ್ಮಾ ಅಲಿಯಾಸ್ ಬಂಟು ಚೌ ಧರಿ ಎಂದು ಗುರುತಿಸಲಾಗಿದೆ.

ಸಿಎಂ ಕಾರ್ಯದರ್ಶಿಯ ಹೆಸರಿನಲ್ಲಿ ನಕಲಿ ಫೋನ್ ಕರೆಗಳನ್ನು ಮಾಡುವ ಮೂಲಕ ಆಡಳಿತ ಅಧಿಕಾರಿಗಳು, ಸಾರ್ವಜನಿಕರನ್ನು ವಂಚಿಸುತ್ತಿದ್ದ ಈತನನ್ನು ಬಸ್ತಿ ಜಿಲ್ಲೆಯಲ್ಲಿ ಬಂಧಿಸಲಾಗಿದೆ ಎಂದು ಎಸ್‌ಟಿಎಫ್ ಹೇಳಿಕೆಯಲ್ಲಿ ತಿಳಿಸಿದೆ. ಕೆಲವು ದಿನಗಳ ಹಿಂದೆ, ಜಿಲ್ಲಾಧಿಕಾರಿ, ಬಸ್ತಿ ಮುಖ್ಯ ಅಭಿ ವದ್ಧಿ ಅಧಿಕಾರಿಗೆ ವಂಚಿಸುವ ಸಲುವಾಗಿ, ಅವರ ಅಧಿ ಕತ ಸಂಖ್ಯೆಗಳಿಗೆ ಕರೆ ಮಾಡಿ ತಾನು ಮುಖ್ಯಮಂತ್ರಿಯ ಕಾರ್ಯದರ್ಶಿ ಎಂದು ಪರಿಚಯಿಸಿಕೊಂಡಿದ್ದೇನೆ ಎಂದು ವಿವೇಕ್ ತಪ್ಪೊಪ್ಪಿಕೊಂಡಿದ್ದಾನೆ.

ಟ್ರೂ-ಕಾಲರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ವಿವೇಕ್ ಅವರ ಮೊಬೈಲ್ ಸಂಖ್ಯೆಯು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಎಂದು ಕಂಡುಬಂದಿದೆ. ಬಸ್ತಿಯ ಕೊತ್ವಾಲಿಯಲ್ಲಿ ಐಪಿಸಿಯ ಸೆಕ್ಷನ್ 419 (ವ್ಯಕ್ತಿಯಿಂದ ವಂಚನೆಗೆ ಶಿಕ್ಷೆ), 420 (ವಂಚನೆ, ಅಪ್ರಾಮಾಣಿಕವಾಗಿ ಆಸ್ತಿ ವಿತರಣೆಗೆ ಪ್ರೇರೇಪಿಸುವುದು), 384 (ಸುಲಿಗೆ ಶಿಕ್ಷೆ) ಮತ್ತು 507 (ಅ ನಾಮಧೇಯ ಸಂವಹನದಿಂದ ಅಪರಾಧ ಬೆದರಿಕೆ) ಅಡಿ ಯಲ್ಲಿ ಪ್ರಕರಣ ದಾಖಲಿಸಲಾಗಿದೆ. ವಂಚನೆ ಆರೋಪದ ಮೇಲೆ ಅಲಿಗಢ್, ಬಲ್ರಾಮ್‌ಪುರ, ಮಥುರಾ, ಕಾನ್ಪುರ್ ನಗರ ಮತ್ತು ಹರ್ದೋಯಿ ಜಿಲ್ಲೆಗಳ ವಿವಿಧ ಪೊಲೀಸ್ ಠಾಣೆಗಳಲ್ಲಿ ಈತನ ವಿರುದ್ಧ ಹಲವಾರು ಪ್ರಕರಣಗಳು ದಾಖಲಾಗಿವೆ ಎಂದು ಎಸ್‌ಟಿಎಫ್ ಹೇಳಿಕೆಯಲ್ಲಿ ತಿಳಿಸಿದೆ. ವಿವೇಕ್ ಅವರನ್ನು ವಿಚಾರಣೆ ನಡೆಸಲಾಗುತ್ತಿದೆ.

---

# ಒಂದೆಡೆ ಉಷ್ಣಾಘಾತ, ಮತ್ತೊಂದೆಡೆ ಭಾರೀ ಮಳೆ, ಪ್ರವಾಹ

## ಹಿಂದೆಂದೂ ಕಂಡು ಕೇಳರಿಯದಂಥ ಬಿಸಿಗಾಳಿ, ಜಾಗತಿಕ ತಾಪಮಾನ, ಹವಾಮಾನ ಬದಲಾವಣೆಯ ಗಂಭೀರ ಪರಿಣಾಮ



ಹತ್ತು ಕೋಟಿ ಜನರಿಗೆ ಸಂಕಷ್ಟ

**ಅಮೆರಿಕ:** ವಿಶ್ವದ ದೊಡ್ಡಣ್ಣ ಅಮೆರಿಕ ದೇಶದಲ್ಲಿ ಹಿಂ ದೆಂದೂ ಕಂಡು ಕೇಳರಿಯಂಥಾ ಬಿಸಿ ಗಾಳಿ ಬೀಸುತ್ತಿದೆ. ಒಂದೆಡೆ ಉಷ್ಣಾಘಾತ ಜನರನ್ನು ಕಾಡು ತ್ತಿದ್ದರೆ, ಮತ್ತೊಂದೆಡೆ ಭಾರೀ ಮಳೆ, ಪ್ರವಾಹ ಪರಿಸ್ಥಿತಿ ಕೂಡಾ ಎದುರಾಗಿದೆ. ಜಾಗತಿಕ ತಾಪಮಾನ ಏರಿಕೆ ಹಾಗೂ ಹವಾಮಾನ ಬದಲಾವಣೆಯ ಗಂಭೀರ ಪರಿಣಾಮವು ಅಮೆರಿಕ ದೇ ಶಾದ್ಯಂತ ಸುಮಾರು 10 ಕೋಟಿ ಜನರನ್ನು ಕಾಡುತ್ತಿದೆ!

ಅಮೆರಿಕದ ಪೂರ್ವ ಕರಾವಳಿಯಿಂದ ಪಶ್ಚಿಮ ಕರಾವಳಿಯತ್ತ ಉಷ್ಣ ಮಾರುತಗಳು ಬೀಸುತ್ತಿವೆ. ಹೀಗಾಗಿ, ಅಮೆರಿಕ ದೇಶದ ಹಲವು ರಾಜ್ಯಗಳಲ್ಲಿ ತಾಪಮಾನದಲ್ಲಿ ಭಾರೀ ಏರಿಕೆ ದಾಖಲಾಗಿದೆ.

ಈಗಾಗಲೇ ಅಮೆರಿಕದ ಪೂರ್ವ ಕರಾವಳಿಯಲ್ಲಿ ಜನರು ಉಷ್ಣಾಘಾತ ಎದುರಿಸುತ್ತಿದ್ದು, ಪಶ್ಚಿಮ ಕರಾವಳಿಯ ಜನರು ಸಿದ್ಧತೆ ನಡೆಸುತ್ತಿದ್ದಾರೆ. ಅಮೆರಿಕದ ಬಾಲ್ಟಿಮೋರ್ ಹಾಗೂ ಫಿಲಿಡೆಲ್ಫಿಯಾ ರಾಜ್ಯಗಳಲ್ಲಿ ಈಗಾಗಲೇ ತಾಪಮಾನ 100 ಡಿಗ್ರಿ ಫ್ಯಾರನ್ ಹೀಟ್ ತಲುಪಿದೆ. ಸೆಲ್ಸಿಯಸ್‌ನಲ್ಲಿ ಹೇಳೋ ದಾದರೆ 38 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಈ ಭಾಗದಲ್ಲಿ ದಾ ಖಲಾಗಿದೆ. ಇದು ಅಮೆರಿಕದ ಇತಿಹಾಸದಲ್ಲೇ ಅತ್ಯಂತ ಗರಿಷ್ಠ ತಾಪಮಾನದ ದಾಖಲೆಯಾದೆ. ಇದಲ್ಲದೆ ಇದಾಹೊ, ಮೊಂಟಾನಾ ಹಾಗೂ ವ್ಯೋಮಿಂಗ್ ರಾಜ್ಯಗಳಲ್ಲಿ ತಾಪಮಾನ 90 ಡಿಗ್ರಿ ಫ್ಯಾರನ್ ಹೀಟ್‌ಗೆ ಏರಿಕೆ ಕಂಡಿದೆ. ಸಾಮಾನ್ಯವಾಗಿ ಯಾವುದೇ ವರ್ಷದ ಈ ಅವಧಿಯಲ್ಲಿ ಇರುವ ತಾಪಮಾನಕ್ಕಿಂತಲೂ ಬರೋಬ್ಬರಿ 15 ಡಿಗ್ರಿ ಫ್ಯಾರನ್ ಹೀಟ್ ಹೆಚ್ಚಿನ ತಾಪಮಾನ ಏರಿಕೆ ಈ ಬಾರಿ ಆಗಿದೆ.

ನ್ಯೂಯಾರ್ಕ್ ನಗರದ ಉತ್ತರ ಭಾಗದಲ್ಲಿ ಗುಡುಗು, ಮಿಂಚಿನ ಸಹಿತ ಭಾರೀ ಮಳೆಯ ಎಚ್ಚರಿಕೆ ನೀಡಲಾಗಿದೆ.

ದಕ್ಷಿಣ ಡಕೋಟಾ ರಾಜ್ಯದ ಲೋವಾ ನಗರದ ಜನರು ಈಗಾಗಲೇ ಪ್ರವಾಹಕ್ಕೆ ತುತ್ತಾಗಿದ್ದು, ಸಾವಿರಾರು ಜನರನ್ನು ಸುರಕ್ಷಿತ ಸ್ಥಳಗಳಿಗೆ ರವಾನೆ ಮಾಡಲಾಗುತ್ತಿದೆ. ರಕ್ಷಣಾ ಕಾರ್ಯಾಚರಣೆಗೆ ಹಲಿಕಾಪ್ಟರ್‌ಗಳನ್ನು ಬಳಕೆ ಮಾಡಿಕೊಳ್ಳಲಾಗುತ್ತಿದೆ.

ದಕ್ಷಿಣ ಡಕೋಟಾ ರಾಜ್ಯದ ಲೋವಾ ನಗರದ ಮೇಯರ್ ಪ್ರಕಾರ, ಇಲ್ಲಿನ ಸ್ಥಳೀಯ ಕಾಲಮಾನ ಭಾನುವಾರ ಸಂಜೆ ಕೇವಲ ಒಂದೇ ಒಂದು ಗಂಟೆ ಅವಧಿಯಲ್ಲಿ ಸುಮಾರು 4 ಇಂಚು ಮಳೆಯಾಗಿದೆ. ಇಷ್ಟು ಭಾರೀ ಪ್ರಮಾಣದಲ್ಲಿ ದಿಢೀರ್ ಮಳೆಯಾದರೆ ಪ್ರವಾಹ ಸೃಷ್ಟಿಯಾಗೋದು ಸಹಜ.

ಇದನ್ನು ನಿಯಂತ್ರಿಸಲು ಆಗುತ್ತಿಲ್ಲ ಎಂದು ಅವರು ಅಸಹಾಯಕತೆ ವ್ಯಕ್ತಪಡಿಸಿದ್ದಾರೆ. ಪ್ರವಾಹದ ನೀರಿನಲ್ಲಿ ಸಿಲುಕಿರುವ ಜನರನ್ನು ರಕ್ಷಣೆ ಮಾಡಲು ರಸ್ತೆಗಳಲ್ಲಿ ಬೋಟ್‌ಗಳು ಸಂಚರಿಸುತ್ತಿವೆ!

**ಒಂದೆಡೆ ಸುಡು ಬಿಸಿಲು, ಮತ್ತೊಂದೆಡೆ ಭಾರೀ ಮಳೆ, ಪ್ರವಾಹ!**

**ಉಷ್ಣ ಗಾಳಿಯು ಅಮೆರಿಕ ದೇಶದ ಪಶ್ಚಿಮ ದಿಕ್ಕಿನತ್ತ ಸಾಗುತ್ತಿದ್ದಂತೆಯೇ ಪೂರ್ವ ಭಾಗದಲ್ಲಿ ಮಳೆಯ ಆರ್ಭಟ ಹೆಚ್ಚಾಗುತ್ತಿದೆ. ಒಹಾಯೋ ಸೇರಿದಂತೆ ಹಲವು ರಾಜ್ಯಗಳಲ್ಲಿ ಭಾನುವಾರ ದಿನವಿಡೀ ಮಳೆ ಆರ್ಭಟಿಸಿದ್ದು, ಪ್ರವಾಹ ಪರಿಸ್ಥಿತಿ ಎದುರಾಗಿದೆ. ಈ ಭಾಗದಲ್ಲಿ ಪ್ರತಿ ಗಂಟೆಗೆ 2 ಇಂಚು ಮಳೆ ಆಗಬಹುದು, ಇದರಿಂದಾಗಿ ದಿಢೀರ್ ಪ್ರವಾಹ ಸೃಷ್ಟಿ ಆಗಬಹುದು ಎಂದು ರಾಷ್ಟ್ರೀಯ ಹವಾಮಾನ ಸೇವಾ ಇಲಾಖೆ ಎಚ್ಚರಿಕೆ ನೀಡಿದೆ.**

**ಜಾಗತಿಕ ತಾಪಮಾನ ಏರಿಕೆ ಹಾಗೂ ಹವಾಮಾನ ಬದಲಾವಣೆ ಇಡೀ ವಿಶ್ವವನ್ನೇ ಕಾಡುತ್ತಿದೆ. ಅಮೆರಿಕ ಜನತೆಗೆ ಇದೀಗ ಉಷ್ಣಾಘಾತದ ಜೊತೆಗೆ ಭಾರೀ ಮಳೆ ಹಾಗೂ ಪ್ರವಾಹ ಪರಿಸ್ಥಿತಿ ಕೂಡಾ ಕಾಡುತ್ತಿದೆ. ಒಂದೆಡೆ ಉಷ್ಣಾಘಾತದಿಂದ ಜನರು ತತ್ತರಿಸುತ್ತಿದ್ದರೆ ಮತ್ತೊಂದೆಡೆ ಭಾರೀ ಮಳೆಯಿಂದ ದಿಢೀರ್ ಪ್ರವಾಹ ಪರಿಸ್ಥಿತಿ ಎದುರಾಗಿ ಜನರು ಕಂಗಾಲಾಗಿದ್ದಾರೆ. ದಕ್ಷಿಣ ಡಕೋಟಾ ರಾಜ್ಯದ ಕೆಲವೆಡೆ ಜನರ ರಕ್ಷಣೆಗೆ ರಸ್ತೆಗಳಲ್ಲಿ ಬೋಟ್ ಚಲಾಯಿಸುವಂಥಾ ಪರಿಸ್ಥಿತಿ ಎದುರಾಗಿದೆ!**

---



# ಮಿನಿ ನ್ಯೂಸ್

## ಬಂಡಾಯದ ಮುನ್ಸೂಚನೆ ನೀಡಿದ ವಸುಂಧರಾ ರಾಜೆ

**ಜೈಪುರ:** ಬಿಜೆಪಿಯ ಹಿರಿಯ ನಾಯಕಿ ಮತ್ತು ರಾಜಸ್ಥಾನದ ಮಾಜಿ ಮುಖ್ಯಮಂತ್ರಿ ವಸುಂಧರಾ ರಾಜೆ ಮತ್ತೆ ಬಂಡಾಯದ ಬಾವುಟ ಹಾರಿಸುವ ಮುನ್ಸೂಚನೆ ನೀಡಿದ್ದಾರೆ.ಉದಯಪುರದ ಸುಂದರ್ ಸಿಂಗ್ ಭಂಡಾರಿ ಚಾರಿಟೇಬಲ್ ಟ್ರಸ್ಟ್ ಹಮಿಕೊಂಡಿದ್ದ ಕಾರ್ಯಕ್ರಮದಲ್ಲಿ ನಿಷ್ಠೆ ಮತ್ತು ರಾಜಕೀಯ ಬೆಳವಣಿಗೆ ಕುರಿತು ಅವರು ನೀಡಿರುವ ಹೇಳಿಕೆ ಅಲ್ಲೋಲ್ಲ ಕಲ್ಲೋಲ ಸೃಷ್ಟಿಸಿದೆ.

ರಾಜಕೀಯದಲ್ಲಿ ಬಡ್ತಿ ಕೊ ಡುವ ವ್ಯಕ್ತಿಯನ್ನು ಗೌರವಿಸುತ್ತಿದ್ದ ನಿಷ್ಠೆಯ ಕಾಲವೇ ಬೇರೆ. ಆದರೆ, ಈಗಿನ ಕಾಲದಲ್ಲಿ ಹಾಗಲ್ಲ. ಇಂದು ಜನರು ಮೊದಲು ನಡೆಯಲು ಕಲಿಸಿದವರ ಬೆರಳನ್ನೇ ಕಡಿಯಲು ಬಯಸುತ್ತಿದ್ದಾರೆ ಎಂದು ಮಾ ರ್ಮಿಕವಾಗಿ ಮಾತನಾಡಿದ್ದಾರೆ. ಕಾರ್ಯಕ್ರಮದಲ್ಲಿ ಅಸ್ಸಾಂ ರಾಜ್ಯಪಾಲ, ಮಾಜಿ ಸಚಿವ ಗುಲಾಬ್ ಚಂದ್ ಕಟಾರಿಯಾ ಕೂಡ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಕಟಾರಿಯಾ ಅವರು ವೇದಿಕೆಯಲ್ಲಿದ್ದ ಕೆಲವರೊಂದಿಗೆ ವಾಗ್ವಾದ ನಡೆಸಿದರು. ಜನಸಂಘದ ಸಂಸ್ಥಾಪಕ ಸದಸ್ಯ ಸುಂದರ್ ಸಿಂಗ್ ಭಂಡಾರಿಯವರ ಪುಣ್ಯತಿಥಿ, ಸಂಸ್ಥಾಪಕ ಡಾ.ಶ್ಯಾಮ ಪ್ರಸಾದ್ ಮುಖರ್ಜಿಯವರ ಹುತಾತ ದಿನದ ಅಂಗವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

## ವಯನಾಡು ಸಂಸದ ಸ್ಥಾನಕ್ಕೆ ರಾಹುಲ್ ರಾಜೀನಾಮೆ

**ನವದೆಹಲಿ:** ಕೇರಳದ ವಯನಾಡು ಲೋಕಸಭಾ ಕ್ಷೇತ್ರದಿಂದ ವಿಜೇತರಾಗಿದ್ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ತಮ ಸಂಸತ್ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಸೋಮವಾರ ಲೋಕಸಭೆಯಲ್ಲಿ ಹಂಗಾಮಿ ಸ್ಪೀಕರ್ ಭಾತ್ರುಹರಿ ಮೆಹ್ತಾಬ್ ಅವರಿಗೆ ರಾಜೀನಾಮೆ ಪತ್ರವನ್ನು ಸಲ್ಲಿಸಿದರು. ರಾಹುಲ್ ಗಾಂಧಿ ನೀಡಿರುವ ರಾಜೀನಾಮೆ ಪತ್ರವನ್ನು ಸ್ಪೀಕರ್ ಅಂಗೀಕರಿಸಿದ್ದಾರೆ.

ಇತ್ತೀಚೆಗೆ ನಡೆದ ಲೋ ಕಸಭೆ ಚುನಾವಣೆಯಲ್ಲಿ ರಾಹುಲ್ ಗಾಂಧಿ ಕೇರಳದ ವಯನಾಡು, ಉತ್ತರಪ್ರದೇಶ ರಾಯಬರೇಲಿ ಕ್ಷೇತ್ರದಿಂದ ಸ್ಪರ್ಧಿಸಿ ಎರಡೂ ಕ್ಷೇತ್ರಗಳಲ್ಲಿ ವಿಜೇತರಾಗಿದ್ದರು. ನಿಯಮಗಳ ಪ್ರಕಾರ ಓರ್ವ ಅಭ್ಯರ್ಥಿ ಒಂದಕ್ಕಿಂತ ಹೆಚ್ಚು ಕ್ಷೇತ್ರಗಳಲ್ಲಿ ಗೆದ್ದರೂ ಯಾವುದಾದರೂ ಒಂದು ಕ್ಷೇತ್ರವನ್ನು ಆಯ್ಕೆ ಮಾಡಿಕೊಳ್ಳಬೇಕಾಗುತ್ತದೆ. ಹೀಗಾಗಿ ರಾಹುಲ್ ಗಾಂಧಿ ಅವರು ರಾಯಬರೇಲಿ ಕ್ಷೇತ್ರವನ್ನು ಉಳಿಸಿಕೊಂಡು ವಯನಾಡು ಕ್ಷೇತ್ರಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಈಗ ತೆರವಾಗಿರುವ ವಯನಾಡು ಕ್ಷೇತ್ರಕ್ಕೆ ರಾಹುಲ್ ಗಾಂಧಿ ಅವರ ಸಹೋದರಿ ಪ್ರಿಯಾಂಕ ರಾಬರ್ಟ್ ವಾದ್ರ, ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಲಿದ್ದಾರೆ. ಅವರ ಸ್ಪರ್ಧೆಗೆ ಕಾಂಗ್ರೆಸ್ ಹಸಿರುನಿಶಾನೆ ತೋರಿದೆ.

## ಬಾಡಿಗೆ ತಾಯ್ತನಕ್ಕೂ ಆರು ತಿಂಗಳು ಹೆರಿಗೆ ರಜೆ

**ನವದೆಹಲಿ:** ಸುಮಾರು ಐದು ದಶಕಗಳ ಕಾಯ್ದೆಗೆ ಕೇಂದ್ರ ಸರ್ಕಾರ ತಿದ್ದುಪಡಿ ತಂದ ಹಿನ್ನಲೆಯಲ್ಲಿ, ಬಾಡಿಗೆ ತಾಯ್ತನದ ಮೂಲಕ ಮಕ್ಕಳನ್ನು ಪಡೆದರೆ ಮಹಿಳಾ ಸರ್ಕಾರಿ ನೌಕರರು 180 ದಿನಗಳ ಹೆರಿ ಗೆ ರ ಜೆ ತೆಗೆದುಕೊಳ್ಳಬಹುದಾಗಿದೆ. ಕೇಂದ್ರ ನಾಗರಿಕ ಸೇವೆಗಳಲ್ಲಿ (ರ ಜೆ) ಮಾಡಲಾದ ಬದಲಾವಣೆಗಳ ಪ್ರಕಾರ, ಬಾಡಿಗೆ ತಾಯ್ತನದ ಮಹಿಳೆ ಬಾಡಿಗೆ ತಂದೆಗೆ 15 ದಿನಗಳ ಪಿತೃತ್ವ ರಜೆ ಜೊತೆಗೆ ಮಕ್ಕಳ ಆರೈಕೆ ರಜೆಯನ್ನೂ ಸಹ ಇದು ಅನುಮತಿಸಿದೆ.ಸಂದರ್ಭದಲ್ಲಿ ಬಾಡಿಗೆ ತಾಯ್ತನದ ಜೊತೆಗೆ ಉಳಿದಿರುವ ಎರಡಕ್ಕಿಂತ ಕಡಿಮೆ ಮಕ್ಕಳನ್ನು ಹೊಂದಿರುವ ತಾಯಿಗೆ 180 ದಿನಗಳ ಹೆರಿಗೆ ರಜೆ ನೀಡಬಹುದು.


ಬಾಡಿಗೆ ತಾಯ್ತನದ ಮೂಲಕ ಮಗು ಜನಿಸಿದರೆ ಮಹಿಳಾ ಸ ರ್ಕಾರಿ ನೌಕರರಿಗೆ ಹೆರಿಗೆ ರಜೆ ನೀಡಲು ಇದುವರೆಗೆ ಯಾವುದೇ ನಿಯಮವಿರಲಿಲ್ಲ. ಬಾಡಿಗೆ ತಾಯ್ತನದ ಮೂಲಕ ಮಗು ಜನಿಸಿದ ಸಂದರ್ಭದಲ್ಲಿ, ಎರಡು ಮಕ್ಕಳನ್ನು ಹೊಂದಿರುವ ಪುರುಷ, ಸರ್ಕಾರಿ ನೌಕರನಾಗಿರುವ ತಂದೆಗೆ ಮಗುವಿನ ಹೆರಿಗೆಯ ದಿನಾಂಕದಿಂದ 6 ತಿಂಗಳ ಅವಧಿಯೊಳಗೆ 15 ದಿನಗಳ ಪಿತೃತ್ವ ರಜೆ ನೀಡಬಹುದು. ಬಾಡಿಗೆ ತಾಯ್ತನದ ಸಂದರ್ಭದಲ್ಲಿ, ಉಳಿದಿರುವ ಎರಡಕ್ಕಿಂತ ಕಡಿಮೆ ಮಕ್ಕಳನ್ನು ಹೊಂದಿರುವ ಬಾಡಿಗೆ ತಾಯಿಗೆ ಮಕ್ಕಳ ಆರೈಕೆ ರಜೆ ನೀಡಬಹುದು ಎಂದು ಜೂ.18ರಂದು ತಿಳಿಸಲಾದ ಕೇಂದ್ರ ನಾಗರಿಕ ಸೇವೆಗಳ (ರಜೆ) (ತಿದ್ದುಪಡಿ) ನಿಯಮಗಳು ತಿಳಿಸಿವೆ.

ಅಸ್ತಿತ್ವದಲ್ಲಿರುವ ನಿಯಮಗಳು ಮಹಿಳಾ ಸರ್ಕಾರಿ ಸೇವಕ ಮತ್ತು ಏಕೈಕ ಪುರುಷ ಸರ್ಕಾರಿ ನೌಕರ ಶಿಶುಪಾಲನಾ ರಜೆಗೆ ಸಂಪೂರ್ಣ ಸೇವೆಯ ಅವಧಿಯಲ್ಲಿ ಗರಿಷ್ಠ 730 ದಿನಗಳವರೆಗೆ ಉಳಿದಿರುವ ಇಬ್ಬರು ಹಿರಿಯ ಮಕ್ಕಳನ್ನು ನೋಡಿಕೊಳ್ಳಲು, ಪೋಷಣೆಗಾಗಿ ಅಥವಾ ಅವರ ಯಾವುದೇ ಅಗತ್ಯಗಳನ್ನು ನೋಡಿಕೊಳ್ಳಲು ಅವಕಾಶ ನೀಡುತ್ತದೆ. ಬಾಡಿಗೆ ತಾಯಿ ಎಂದರೆ ನಿಯೋಜಿಸುವ ತಾಯಿಯ ಪರವಾಗಿ ಮಗುವನ್ನು ಹೆರುವ ಮಹಿಳೆ, ಬಾಡಿಗೆ ತಾಯ್ತನದ ಮೂಲಕ ಜನಿಸಿದ ಮಗುವಿನ ಉದ್ದೇಶಿತ ತಂದೆ ಎಂದರ್ಥ ಎಂದು ಸಿಬ್ಬಂದಿ ಸಚಿವಾಲಯವು ತಿದ್ದುಪಡಿ ಮಾಡಿದ ನಿಯಮಗಳಲ್ಲಿ ಸ್ಪಷ್ಟಪಡಿಸಿದೆ.

## ಮಹಿಳೆಯನ್ನು ಕೊಂದು ರೈಲಿನಲ್ಲಿರಿಸಿದ್ದ ಖತರ್ನಾಕ್ ವೃದ್ಧನ ಬಂಧನ

**ಇಂದೋರ್:** ಪತಿ ತೊರೆದು ಬಂದಿದ್ದ ಮಹಿಳೆ ಮೇಲೆ ಅತ್ಯಾಚಾರ ನಡೆಸಲು ಯತ್ನಿಸಿ ಅದು ಸಾಧ್ಯವಾಗದಿದ್ದಾಗ ಆಕೆಯನ್ನು ಕೊಲೆ ಮಾಡಿ ಶವವನ್ನು ತುಂಡರಿಸಿ ದೇಹದ ಭಾಗಗಳನ್ನು ಎರಡು ರೈಲುಗಳಲ್ಲಿ ಎಸೆದಿದ್ದ ಖತರ್ನಾಕ್ ವೃದ್ಧ ಆರೋಪಿಯನ್ನು ಬಂಧಿಸುವಲ್ಲಿ ಮಧ್ಯಪ್ರದೇಶದ ಉಜ್ಜಯನಿ ಪೊಲೀಸರು ಯಶಸ್ವಿಯಾಗಿದ್ದಾರೆ. ಬಂಧಿತ ಆರೋಪಿಯನ್ನು 60 ವರ್ಷದ ವೃದ್ಧ ಕಮಲೇಶ್ ಪಟೇಲ್ ಎಂದು ಗುರುತಿಸಲಾಗಿದೆ. ಪತಿಯೊಂದಿಗೆ ಜಗಳವಾಡಿ ಮನೆ ತೊರೆದು ಬಂದು ರೈಲು ನಿಲ್ದಾಣದಲ್ಲಿ ಕುಳಿತಿದ್ದ ಮಹಿಳೆಯನ್ನು ಈತ ಕಳೆದ ಜೂನ್ 6 ತನ್ನ ಮನೆಗೆ ಕರೆದೊಯ್ದಿದ್ದ ಎಂದು ಅಧಿಕಾರಿ ತಿಳಿಸಿದ್ದಾರೆ.

ಮನೆಗೆ ಬಂದಿದ್ದ ಮಹಿಳೆಗೆ ಆಹಾರದಲ್ಲಿ ನಿದ್ರೆ ಮಾತ್ರೆಗಳನ್ನು ಬೆರೆಸಿ ನೀಡಿ ಆಕೆಯ ಮೇಲೆ ಅತ್ಯಾಚಾರ ನಡೆಸಲು ಯತ್ನಿಸಿದ್ದ ಆದರೆ ಮಹಿಳೆ ಎಚ್ಚರಗೊಂಡು ಕೂಗಿಕೊಳ್ಳಲು ಮುಂದಾದಾಗ ಆಕೆಯ ಕತ್ತು ಹಿಸುಕಿ ಕೊಲೆ ಮಾಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ನಂತರ ಆಕೆ ಯ ದೇಹವನ್ನು ತುಂಡುಗಳಾಗಿ ಕತ್ತರಿಸಿ ಇಂದೋರ್-ನಾಗ್ಡಾ ಮತ್ತು ಇಂ ದೋರ್-ಡೆಹ್ರಾಡೂನ್ ಪ್ಯಾಸೆಂಜರ್ ರೈಲುಗಳಲ್ಲಿ ಇರಿಸಿ ಪರಾರಿಯಾಗಿದ್ದ. 37 ವರ್ಷದ ಬಲಿಪಶುವಿನ ಕೈಗಳು ಮತ್ತು ಕಾಲುಗಳು ಜೂನ್ 10 ರಂದು ಉತ್ತರಾಖಂಡದ ಋಷಿಕೇಶದಲ್ಲಿ ರೈಲಿನಲ್ಲಿ ಪತ್ತೆಯಾಗಿದ್ದವು. ಉಳಿದ ದೇಹವನ್ನು ಜೂನ್ 9 ರಂದು ಇಂದೋರ್‌ನಲ್ಲಿ ರೈಲಿನಿಂದ ವಶಪಡಿಸಿಕೊಳ್ಳಲಾಗಿತ್ತು. ಏತನಧ್ಯೆ, ಜೂನ್ 12 ರಂದು ರತ್ಲಾಮ್ ಜಿಲ್ಲೆಯ ಬಿಲ್ಪಾಂಕ್ ಪೊಲೀಸ್ ಠಾಣೆಯಲ್ಲಿ ಆಕೆಯ ಕುಟುಂಬವು ಕಾಣೆಯಾದ ವ್ಯಕ್ತಿಯ ದೂರು ದಾಖಲಿಸಿದ್ದರು.ಪ್ರಕರಣ ದಾಖಲಿಸಿಕೊಂಡ ಪೊಲೀಸರು ಪಟೇಲ್‌ನನ್ನು ಉಜ್ಜಯಿನಿಯಿಂದ ಬಂಧಿಸಲಾಗಿದ್ದು, ಅಪರಾಧಕ್ಕೆ ಬಳಸಿದ ಚಾಕುವನ್ನು ಇತರ ಸಾಕ್ಷ್ಯಗಳನ್ನು ಸಂಗ್ರಹಿಸಿದ್ದಾರೆ.






# ಆಸೀಸ್ ಪಡೆ ಬೆವರಿಳಿಸಿದ ಭಾರತದ ಬ್ಯಾಟರ್ಸ್!

## ಟಿ20 ವಿಶ್ವಕಪ್ ಫೈನಲ್ ಸೋಲಿನ ಸೇಡು ತೀರಿಸಿಕೊಳ್ಳಲು ಸಜ್ಜಾದ ಭಾರತ ತಂಡ

ಸೂಪರ್ 8 ರಣರೋಚಕ ಪಂದ್ಯದಲ್ಲಿ ರೋಹಿತ್ ಶರ್ಮಾ ನಾಯಕತ್ವದ ಭಾರತ ಮತ್ತು ಮಿಚೆಲ್ ಮಾರ್ಷ್ ನೇತೃತ್ವದ ಆಸ್ಟ್ರೇಲಿಯಾ ನಡುವೆ ನಡೆಯುತ್ತಿದೆ. ಈ ಪಂದ್ಯ ಗೆದ್ದು ಟೀಂ ಇಂಡಿಯಾ ಸೆಮಿಸ್‌ಗೆ ಎಂಟ್ರಿಯಾಗೋ ತವಕದಲ್ಲಿದೆ. ಟಿ20 ವಿಶ್ವಕಪ್ ಫೈನಲ್ ಸೋಲಿನ ಸೇಡು ತೀರಿಸಿಕೊಳ್ಳಲು ಭಾರತ ತಂಡ ಸಜ್ಜಾಗಿದೆ. ಟಾಸ್ ಗೆದ್ದ ಆಸ್ಟ್ರೇಲಿಯಾ ತಂಡ ಬೌಲಿಂಗ್ ಆಯ್ಕೆ ಮಾಡಿಕೊಂಡಿತ್ತು. ಮೊದಲು ಬ್ಯಾಟ್ ಮಾಡಿದ ಟೀಂ ಇಂಡಿಯಾ 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು ಭರ್ಜರಿ 205 ರನ್‌ಗಳಿಸಿದೆ.

**ವಿರಾಟ್ ಡಕೌಟ್, ರೋಹಿತ್ ಶರ್ಮಾ ಬೊಂಬಾಟ್!:** ವಿರಾಟ್ ಕೊಹ್ಲಿ ಔಟಾಗುತ್ತಿದ್ದಂತೆ ಅಭಿಮಾನಿಗಳು ಇಂದಿನ ಪಂದ್ಯದಲ್ಲಿ ಬಿಗ್ ಟಾರ್ಗೆಟ್ ಬರಲ್ಲ ಅಂದುಕೊಂಡಿದ್ರು. ಆದ್ರೆ ವಿರಾಟ್ ಕೊಹ್ಲಿ ಔಟಾಗುತ್ತಿದ್ದಂತೆ ರೊಚ್ಚಿಗೆದ್ದ ರೋಹಿತ್ ಶರ್ಮಾ ಆಸೀಸ್ ವಿರುದ್ಧ ಅಬ್ಬರಿಸಿ ಬೊಬ್ಬರಿದಿದ್ದಾರೆ. ಭರ್ಜರಿ ಅರ್ಧಶತಕ ಬಾರಿಸುವ ಮೂಲಕ ಹಿಟ್ ಮ್ಯಾನ್ ಕಂಬ್ಯಾಕ್ ಮಾಡಿದ್ದಾರೆ. ಎರಡನೇ ಓವರ್‌ನಿಂದಲೇ ರೊಚ್ಚಿಗೆದ್ದ ಹಿಟ್‌ಮ್ಯಾನ್ ದೊಡ್ಡ ಹೊಡೆತಗಳನ್ನೇ ಬಾರಿಸಿದ್ರು. ಮೂರನೇ ಓವರ್‌ನಲ್ಲಿಯೇ ಭರ್ಜರಿ 29 ರನ್ ಬಾರಿಸಿದ್ರು. ಇನ್ನೂ ಇದಾದ ಬಳಿಕ ಭರ್ಜರಿ ಸಿಕ್ಸರ್, ಬೌಂಡರಿ ಬಾರಿಸಿದ್ರು.

**ಭಾರತ-ಆಸ್ಟ್ರೇಲಿಯಾ ದಾಖಲೆ:** ಸೇಂಟ್ ಲೂಸಿಯಾದಲ್ಲಿ ನಡೆದಿರುವ ಪಂದ್ಯದಲ್ಲಿ ಟೀಂ ಇಂಡಿಯಾ ದಾಖಲೆಗಳಲ್ಲಿ ಮೇಲುಗೈ ಸಾಧಿಸಿದೆ. ಟಿ20 ವಿಶ್ವಕಪ್‌ನಲ್ಲಿ ಭಾರತ ಇದುವರೆಗೆ ಆಸ್ಟ್ರೇಲಿಯಾ ವಿರುದ್ಧ 5 ಪಂದ್ಯಗಳನ್ನು ಆಡಿದ್ದು, ಅದರಲ್ಲಿ 3 ಬಾರಿ ಗೆಲುವು ಸಾಧಿಸಿದೆ. ಅಂದರೆ ಆಸ್ಟ್ರೇಲಿಯ ಎರಡು ಬಾರಿ ಮಾತ್ರ ಗೆಲ್ಲಲು ಸಾಧ್ಯವಾಗಿದೆ.

**ಭಾರತದ ಅಜೇಯ ಓಟ:** 2024ರ ಟಿ20 ವಿಶ್ವಕಪ್‌ನಲ್ಲಿ ಟೀಂ ಇಂಡಿಯಾ ಇಲ್ಲಿಯವರೆಗೆ ಅಜೇಯವಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಟೀಂ ಇಂಡಿಯಾ ಈ ಪಂದ್ಯವನ್ನು ಗೆದ್ದು ಸೆಮಿಫೈನಲ್‌ಗೆ ಲಗ್ಗೆ ಇಡಲು ಪ್ರಯತ್ನಿಸುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಟೀಂ ಇಂಡಿಯಾ ಗ್ರೂಪ್ 1ರಲ್ಲಿ ಅಗ್ರಸ್ಥಾನಕ್ಕೇರುವ ನಿರೀಕ್ಷೆಯಲ್ಲಿದೆ.

**ಆಸ್ಟ್ರೇಲಿಯಾಕ್ಕೆ ಗೆಲುವು ಮುಖ್ಯ:** ಆಸ್ಟ್ರೇಲಿಯಕ್ಕೆ ಈ ಪಂದ್ಯ ಅತ್ಯಂತ ಮಹತ್ವದ್ದಾಗಿದೆ. ಭಾರತ ವಿರುದ್ಧದ ಪಂದ್ಯದಲ್ಲಿ ಸೋಲನುಭವಿಸಿದರೆ ಸೆಮಿಫೈನಲ್ ಪ್ರವೇಶಿಸುವ ಅವಕಾಶ ಬಹುಮಟ್ಟಿಗೆ ಕಡಿಮೆಯಾಗಲಿದೆ. ಈ ಪಂದ್ಯದಲ್ಲಿ ಆಸ್ಟ್ರೇಲಿಯಾ ಸೋತರೆ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನ ನಡುವಿನ ಪಂದ್ಯದ ಫಲಿತಾಂಶವನ್ನು ಅವಲಂಬಿಸಬೇಕಾಗುತ್ತದೆ.




### 8 ರನ್‌ನಿಂದ ಶತಕ ಮಿಸ್!

**ಇನ್ನೂ 92 ರನ್‌ಗಳಿಸಿ ರೋಹಿತ್ ಶರ್ಮಾ ಔಟಾದ್ರು. ಜಸ್ಟ್ 8 ರನ್‌ಗಳಿಂದ ವಿಶ್ವದಾಖಲೆ ಮಿಸ್ ಮಾಡಿಕೊಂಡ್ರು. ಟಿ20 ಅಂತಾರಾಷ್ಟ್ರೀಯದಲ್ಲಿ ಅತೀ ಹೆಚ್ಚು ಶತಕ ಬಾರಿಸಿದ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೆ ರೋಹಿತ್ ಪಾತ್ರರಾಗ್ತಿದ್ರು. ಆದರೆ 92 ರನ್ ಗಳಿಸಿದ್ದಾಗ ಮಿಚೆಲ್ ಸ್ಟಾರ್ಕ್ ಎಸೆದ ಚಂಡು ಫೇಸ್ ಮಾಡಲಾಗದೇ ಕ್ಲೀನ್ ಬೋಲ್ಡ್ ಆದ್ರು. ರೋಹಿತ್ ಶರ್ಮಾ 41 ಬಾಲ್‌ಗಳಲ್ಲಿ 92 ರನ್‌ಬಾರಿಸಿದ್ರು. ಆದ್ರೆ ಶತಕ ವಂಚಿತರಾದ್ರು. ಇನ್ನೂ ಪಂತ್ 15 ರನ್ ಗಳಿಸಿ ಔಟಾದ್ರು. ಸೂರ್ಯ ಕುಮಾರ್ ಯಾದವ್ 16 ಬಾಲ್‌ಗಳಲ್ಲಿ 31 ರನ್‌ಗಳಿಸಿ ಔಟಾದ್ರು. ಶಿವಂ ದುಬೆ 22 ಬಾಲ್ ಎದುರಿಸಿ 28 ರನ್‌ಗಳಿಸಿ ಔಟಾದ್ರು.**

**ಆಸೀಸ್ ಬೌಲರ್‌ಗಳ ಬೆವರಿಳಿಸಿದ ಭಾರತದ ಬ್ಯಾಟರ್ಸ್!:**

ವಿರಾಟ್ ಕೊಹ್ಲಿ ವಿಕೆಟ್ ಪಡೆಯುತ್ತಿದ್ದಂತೆ ಆಸೀಸ್ ಬೌಲರ್‌ಗಳ ಮುಖದಲ್ಲಿ ನಗು ಮೂಡಿತ್ತು. ಆದ್ರೆ ರೋಹಿತ್ ಶರ್ಮಾ ಹಾಗೂ ಇತರೇ ಬ್ಯಾಟರ್ಸ್ ಆಸೀಸ್ ಬೌಲರ್‌ಗಳ ಬೆವರಿಳಿಸಿದ್ರು.

ಭಾರತ (ಪ್ಲೇಯಿಂಗ್ II): ರೋಹಿತ್ ಶರ್ಮಾ (ಸಿ), ವಿರಾಟ್ ಕೊಹ್ಲಿ, ರಿಷಭ್ ಪಂತ್ (ಡಬ್ಲ್ಯು), ಸೂರ್ಯಕುಮಾರ್ ಯಾದವ್, ಶಿವಂ ದುಬೆ, ಹಾರ್ದಿಕ್ ಪಾಂಡ್ಯ, ರವೀಂದ್ರ ಜಡೇಜಾ, ಅಕ್ಷರ್ ಪಟೇಲ್, ಕುಲದೀಪ್ ಯಾದವ್, ಅರ್ಶ್‌ದೀಪ್ ಸಿಂಗ್, ಜಸ್ಪ್ರೀತ್ ಬುಮ್ರಾ

### ಆತಿಥೇಯ ತಂಡಕ್ಕೆ ಟಿ20 ವಿಶ್ವಕಪ್ ಟ್ರೋಫಿ

# ಇನ್ನೂ ಗಗನ ಕುಸುಮ..!

2024ರ ಟಿ20 ವಿಶ್ವಕಪ್‌ನಲ್ಲಿ ಇದುವರೆಗೆ 2 ತಂಡಗಳು ಸೆಮಿಫೈನಲ್ ತಲುಪಿವೆ. ಉಳಿದೆರಡು ಸ್ಥಾನಕ್ಕಾಗಿ ಭಾರತ ಮತ್ತು ಆಸ್ಟ್ರೇಲಿಯಾ ಸೇರಿದಂತೆ 3 ತಂಡಗಳ ನಡುವೆ ತೀವ್ರ ಪೈಪೋಟಿ ನಡೆಯುತ್ತಿದೆ. ಈ ಬಾರಿ ಅಮೆರಿಕ ಮತ್ತು ವೆಸ್ಟ್ ಇಂಡೀಸ್ ಟೂರ್ನಿಗೆ ಆತಿಥ್ಯ ವಹಿಸುತ್ತಿವೆ. ಎರಡೂ ಆತಿಥೇಯ ತಂಡಗಳು ಸೂಪರ್-8ರಿಂದ ಹೊರಬಿದ್ದಿವೆ. ಇದರೊಂದಿಗೆ ಈ ಆವೃತ್ತಿಯಲ್ಲೂ ಅದೊಂದು ದಾಖಲೆ ಸೃಷ್ಟಿಯಾಗದೆ ಹಾಗೆ ಉಳಿದಿದೆ.

ವಾಸ್ತವವಾಗಿ ಇದುವರೆಗೆ ಒಟ್ಟು 8 ಆವೃತ್ತಿಯ ಟಿ20 ವಿಶ್ವಕಪ್ ಆಡಿದ್ದು, ಆತಿಥೇಯ ತಂಡಕ್ಕೆ ಒಮ್ಮೆಯೂ ಚಾಂಪಿಯನ್ ಆಗಲು ಸಾಧ್ಯವಾಗಿಲ್ಲ. ಭಾರತ 2016 ರಲ್ಲಿ ಈ ಪಂದ್ಯಾವಳಿಯನ್ನು ಆಯೋಜಿಸಿತ್ತು. ಆದರೆ ಆ ಆವೃತ್ತಿಯಲ್ಲಿ ಟೀಂ ಇಂಡಿಯಾ ಪ್ರಶಸ್ತಿ ಗೆಲ್ಲುವಲ್ಲಿ ವಿಫಲವಾಯಿತು. ಇನ್ನು ಪ್ರತಿ ಆವೃತ್ತಿಯ ಟಿ20 ವಿಶ್ವಕಪ್ ಅನ್ನು ಯಾವ ದೇಶದಲ್ಲಿ ಆಯೋಜಿಸಲಾಗಿದೆ ಮತ್ತು ಯಾವ ತಂಡ ಪ್ರಶಸ್ತಿ ಗೆದ್ದಿದೆ ಎಂಬುದನ್ನು ನೋಡುವುದಾದರೆ..

2007ರಲ್ಲಿ ಮೊದಲ ಬಾರಿಗೆ ಟಿ20 ವಿಶ್ವಕಪ್ ಆಯೋಜಿಸಲಾಗಿತ್ತು. ದಕ್ಷಿಣ ಆಫ್ರಿಕಾದಲ್ಲಿ ನಡೆದಿದ್ದ ಈ ಆವೃತ್ತಿಯಲ್ಲಿ ಭಾರತ ವಿಶ್ವ ಪ್ರಶಸ್ತಿಯನ್ನು ಗೆದ್ದುಕೊಂಡಿತು. ಪಾಕಿಸ್ತಾನವನ್ನು ಸೋಲಿಸುವ ಮೂಲಕ ಭಾರತ ಈ ಮಾದರಿಯ ಮೊದಲ ವಿಶ್ವಕಪ್ ಪ್ರಶಸ್ತಿಯನ್ನು ಗೆದ್ದುಕೊಂಡಿತು.

2009 ರ ಟಿ20 ವಿಶ್ವಕಪ್ ಇಂಗ್ಲೆಂಡ್‌ನಲ್ಲಿ ನಡೆದಿತ್ತು. ಇದರ ಫೈನಲ್‌ನಲ್ಲಿ ಶ್ರೀಲಂಕಾವನ್ನು ಸೋಲಿಸುವ ಮೂಲಕ ಪಾಕಿಸ್ತಾನ ಈ ವಿಶ್ವ ಪ್ರಶಸ್ತಿಯನ್ನು ಗೆದ್ದುಕೊಂಡಿತು. ಇದಕ್ಕೂ ಮುನ್ನ ನಡೆದ ಸೆಮಿಫೈನಲ್‌ನಲ್ಲಿ ಪಾಕಿಸ್ತಾನ ದಕ್ಷಿಣ ಆಫ್ರಿಕಾ ಹಾಗೂ ಶ್ರೀಲಂಕಾ, ವೆಸ್ಟ್ ಇಂಡೀಸ್ ತಂಡವನ್ನು ಸೋಲಿಸಿತ್ತು.

2010 ರ ಟಿ20 ವಿಶ್ವಕಪ್ ವೆಸ್ಟ್ ಇಂಡೀಸ್‌ನಲ್ಲಿ



ನಡೆದಿತ್ತು. ಇಂಗ್ಲೆಂಡ್ ಈ ಆವೃತ್ತಿಯ ಪ್ರಶಸ್ತಿಯನ್ನು ಗೆದ್ದುಕೊಂಡಿತು. ಫೈನಲ್ ಪಂದ್ಯದಲ್ಲಿ ಆಸ್ಟ್ರೇಲಿಯಾವನ್ನು ಸೋಲಿಸುವ ಮೂಲಕ ಇಂಗ್ಲೆಂಡ್ ಮೊದಲ ಬಾರಿಗೆ ಐಸಿಸಿ ಪ್ರಶಸ್ತಿಯನ್ನು ಗೆದ್ದುಕೊಂಡಿತು.

2012 ರ ಟಿ20 ವಿಶ್ವಕಪ್ ಅನ್ನು ಶ್ರೀಲಂಕಾ ಆಯೋಜಿಸಿತ್ತು. ಈ ವಿಶ್ವಕಪ್‌ನಲ್ಲಿ ವೆಸ್ಟ್ ಇಂಡೀಸ್ ಚಾಂಪಿಯನ್ ಆಯಿತು. ಪ್ರಶಸ್ತಿ ಸುತ್ತಿನ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ಶ್ರೀಲಂಕಾವನ್ನು ಸೋಲಿಸಿತ್ತು. ಇದಕ್ಕೂ ಮೊದಲು ಸೆಮಿಫೈನಲ್‌ನಲ್ಲಿ ಶ್ರೀಲಂಕಾ, ಪಾಕಿಸ್ತಾನವನ್ನು ಮತ್ತು ವೆಸ್ಟ್ ಇಂಡೀಸ್, ಆಸ್ಟ್ರೇಲಿಯಾವನ್ನು ಸೋಲಿಸಿತ್ತು.

2014 ರ ಟಿ20 ವಿಶ್ವಕಪ್ ಬಾಂಗ್ಲಾದೇಶದಲ್ಲಿ ನಡೆದಿತ್ತು. ಭಾರತವನ್ನು 6 ವಿಕೆಟ್‌ಗಳಿಂದ ಸೋಲಿಸುವ ಮೂಲಕ ಶ್ರೀಲಂಕಾ ಈ ವಿಶ್ವ ಪ್ರಶಸ್ತಿಯನ್ನು ಗೆದ್ದುಕೊಂಡಿತು. ಅದೇ ಸಮಯದಲ್ಲಿ, ಸೆಮಿಫೈನಲ್ ಪಂದ್ಯದಲ್ಲಿ ಶ್ರೀಲಂಕಾ, ವೆಸ್ಟ್ ಇಂಡೀಸ್ ಅನ್ನು ಮತ್ತು ಭಾರತ, ದಕ್ಷಿಣ ಆಫ್ರಿಕಾವನ್ನು ಸೋಲಿಸಿತು.

2016ರ ಟಿ20 ವಿಶ್ವಕಪ್ ಭಾರತದಲ್ಲಿ ನಡೆದಿತ್ತು. ಈ ಆವೃತ್ತಿಯ ಪ್ರಶಸ್ತಿಯನ್ನು ವೆಸ್ಟ್ ಇಂಡೀಸ್ ಗೆದ್ದುಕೊಂಡಿತು. ಅಂತಿಮ ಪಂದ್ಯದಲ್ಲಿ ವೆಸ್ಟ್ ಇಂಡೀಸ್ 4 ವಿಕೆಟ್‌ಗಳಿಂದ ಇಂಗ್ಲೆಂಡ್ ತಂಡವನ್ನು ಸೋಲಿಸಿತು. ಇದಕ್ಕೂ ಮುನ್ನ ನಡೆದ ಸೆಮಿಫೈನಲ್‌ನಲ್ಲಿ ವೆಸ್ಟ್ ಇಂಡೀಸ್, ಭಾರತ ಹಾಗೂ ಇಂಗ್ಲೆಂಡ್ ತಂಡ ನ್ಯೂಜಿಲೆಂಡ್ ತಂಡವನ್ನು ಸೋಲಿಸಿತ್ತು.

# ಜಿಂಬಾಬ್ವೆ ಪ್ರವಾಸಕ್ಕೆ ಟೀಂ ಇಂಡಿಯಾ ಪ್ರಕಟ; ಗಿಲ್‌ಗೆ ನಾಯಕತ್ವ

ಒಂದೆಡೆ ಟೀಂ ಇಂಡಿಯಾದ ಅನುಭವಿಗಳ ತಂಡ ಟಿ20 ವಿಶ್ವಕಪ್‌ನಲ್ಲಿ ಭಾಗವಹಿಸಿದ್ದರೆ, ಇನ್ನೊಂದೆಡೆ ಭಾರತದ ಯುವ ಪಡೆ ಜಿಂಬಾಬ್ವೆ ಪ್ರವಾಸ ಕೈಗೊಳ್ಳಲು ಸನ್ನದ್ಧವಾಗಿದೆ. ಅದರಂತೆ ಇದೀಗ ಟೀಂ ಇಂಡಿಯಾದ ಜಿಂಬಾಬ್ವೆ ಪ್ರವಾಸಕ್ಕೆ ಬಿಸಿಸಿಐ , 15 ಸದಸ್ಯರ ತಂಡವನ್ನು ಪ್ರಕಟಿಸಿದೆ. ತಂಡದ ನಾಯಕತ್ವವನ್ನು ಶುಭ್‌ಮನ್ ಗಿಲ್‌ಗೆ ನೀಡಲಾಗಿದೆ. ಉಳಿದಂತೆ ತಂಡದಲ್ಲಿ ಭಾಗಶಃ ಯುವ ಆಟಗಾರರಿಗೆ ಅವಕಾಶ ನೀಡಲಾಗಿದೆ. ಅಚ್ಚರಿಯ ಸಂಗತಿಯೆಂದರೆ ಟಿ20 ವಿಶ್ವಕಪ್‌ನಲ್ಲಿ ಪ್ಲೇಯಿಂಗ್ ಇಲೆವೆನ್‌ನಲ್ಲಿ ಕಾಣಿಸಿಕೊಂಡಿರುವ ಒಬ್ಬನೇ ಒಬ್ಬ ಆಟಗಾರ ಈ ಸರಣಿಗಾಗಿ ತಂಡದಲ್ಲಿ ಆಯ್ಕೆಯಾಗಿಲ್ಲ.


ಐವರಿಗೆ ಚೊಚ್ಚಲ ಅವಕಾಶ

ವೇಳಾಪಟ್ಟಿಯ ಪ್ರಕಾರ ಜುಲೈ 6ರಿಂದ ಸರಣಿ ಆರಂಭವಾಗಲಿದೆ. ಈ ಸರಣಿಯಲ್ಲಿ ಐದು ಟಿ20 ಪಂದ್ಯಗಳು ನಡೆಯಲ್ಲಿವೆ. ಇದೀಗ ಆಯ್ಕೆಯಾಗಿರುವ ಭಾರತ ಟಿ20 ತಂಡದಲ್ಲಿ ಮೊದಲ ಬಾರಿಗೆ ಐವರು ಆಟಗಾರರು ಸ್ಥಾನ ಪಡೆದಿದ್ದಾರೆ.

ಈ ಐವರು ಆಟಗಾರರು ಕಳೆದ ಐಪಿಎಲ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದವರಾಗಿದ್ದು, ಈ ಐವರಲ್ಲಿ ಅಭಿಷೇಕ್ ಶರ್ಮಾ, ರಿಯಾನ್ ಪರಾಗ್, ನಿತೀಶ್ ರೆಡ್ಡಿ, ತುಷಾರ್ ದೇಶಪಾಂಡೆ ಮತ್ತು ಧ್ರುವ ಜುರೆಲ್ ಸೇರಿದ್ದಾರೆ.

**ಈ ಆಟಗಾರರ ವಾಪಸ್ಸಾತಿ**

ಜಿಂಬಾಬ್ವೆ ಸರಣಿಯೊಂದಿಗೆ ನಾಲ್ವರು ಆಟಗಾರರು ಟೀಂ ಇಂಡಿಯಾಕ್ಕೆ ಮರಳಿದ್ದು, ರುತುರಾಜ್ ಗಾಯಕ್ವಾಡ್‌ಗೆ ಮತ್ತೊಮ್ಮೆ ಅವಕಾಶ ನೀಡಲಾಗಿದೆ. ಲೆಗ್ ಸ್ಪಿನ್ನರ್ ರವಿ ಬಿಷ್ಣೋಯ್, ವೇಗಿ ಖಲೀಲ್ ಅಹ್ಮದ್ ಮತ್ತು ಆವೇಶ್ ಖಾನ್ ತಂಡಕ್ಕೆ ಮರಳಿದ್ದಾರೆ.



**ಕೆಎಲ್ ರಾಹುಲ್‌ಗಿಲ್ಲ ಸ್ಥಾನ**

ಪ್ರಕಟವಾಗಿರುವ ತಂಡವನ್ನು ನೋಡಿದರೆ, ಆಯ್ಕೆ ಮಂಡಳಿ ಸಂಪೂರ್ಣವಾಗಿ ಯುವ ಆಟಗಾರರಿಗೆ ಮಣೆ ಹಾಕಿದೆ. ಆದರೆ ಐಪಿಎಲ್‌ನಲ್ಲಿ ಗಮನಾರ್ಹ ಪ್ರದರ್ಶನ ನೀಡಿದ್ದ ಕನ್ನಡಿಗ ಕೆಎಲ್ ರಾಹುಲ್‌ಗೆ ಮತ್ತೊಮ್ಮೆ ತಂಡದಲ್ಲಿ ಅವಕಾಶ ಸಿಕ್ಕಿಲ್ಲ. ಟಿ20 ವಿಶ್ವಕಪ್‌ನಿಂದಲೂ ರಾಹುಲ್‌ರನ್ನು ಕೈಬಿಡಲಾಗಿತ್ತು. ಇದೀಗ ಜಿಂಬಾಬ್ವೆ ಸರಣಿಗೂ ಅವರನ್ನು ಆಯ್ಕೆಗೆ ಪರಿಗಣಿಸಲಾಗಿಲ್ಲ.

ಜಿಂಬಾಬ್ವೆ ಪ್ರವಾಸಕ್ಕೆ ಟೀಂ ಇಂಡಿಯಾ: ಶುಭ್‌ಮನ್ ಗಿಲ್ (ನಾಯಕ), ಯಶಸ್ವಿ ಜೈಸ್ವಾಲ್, ರುತುರಾಜ್ ಗಾಯಕ್ವಾಡ್, ಅಭಿಷೇಕ್ ಶರ್ಮಾ, ರಿಂಕು ಸಿಂಗ್, ಸಂಜು ಸ್ಯಾಮ್ಸನ್ (ವಿಕೆಟ್ ಕೀಪರ್), ಧ್ರುವ್ ಜುರೆಲ್ (ವಿಕೆಟ್ ಕೀಪರ್), ನಿತೀಶ್ ರೆಡ್ಡಿ, ರಿಯಾನ್ ಪರಾಗ್, ವಾಷಿಂಗ್ಟನ್ ಸುಂದರ್, ರವಿ ಬಿಷ್ಣೋಯ್, ಅವೇಶ್ ಖಾನ್, ಖಲೀಲ್ ಅಹ್ಮದ್, ಮುಖೇಶ್ ಕುಮಾರ್, ತುಷಾರ್ ದೇಶಪಾಂಡೆ.

**ಭಾರತದ ಜಿಂಬಾಬ್ವೆ ಪ್ರವಾಸದ ವೇಳಾಪಟ್ಟಿ**

| | | |
|---|---|---|
| ಜುಲೈ 6 | 1ನೇ ಟಿ20 | ಹರಾರೆ |
| 7 ಜುಲೈ | 2 ನೇ ಟಿ20 | ಹರಾರೆ |
| ಜುಲೈ 10 | 3ನೇ ಟಿ20 | ಹರಾರೆ |
| ಜುಲೈ 13 | 4ನೇ ಟಿ20 | ಹರಾರೆ |
| ಜುಲೈ 14 | 5 ನೇ ಟಿ20 | ಹರಾರೆ |

# ರೇಣುಕಾಸ್ವಾಮಿ ನನಗೂ ಅಶ್ಲೀಲ ಮೆಸೇಜ್ ಕಳುಹಿಸಿದ್ದ: ಚಿತ್ರಾಲ್



**ದೇವರು ಆದಷ್ಟು ಶಕ್ತಿ ಕೊಡಲಿ**

ಸ್ಯಾಂಡಲ್‌ವುಡ್ ನಟ ದರ್ಶನ್ ಇದೀಗ ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ಜೈಲು ಸೇರಿದ್ದಾರೆ. ಇದೀಗ ಕಿರುತೆರೆ ನಟಿ ಚಿತ್ರಾಲ್ ರಂಗಸ್ವಾಮಿ ಗಂಭೀರ ಆರೋಪವೊಂದನ್ನು ಮಾಡಿದ್ದಾರೆ. ರೇಣುಕಾಸ್ವಾಮಿ ಕ್ರಿಯೆಟ್ ಮಾಡಿದ್ದ ಫೇಕ್ ಅಕೌಂಟ್‌ಗಳಿಂದ ನನಗೂ ಅಶ್ಲೀಲ ಮೆಸೇಜ್ ಬಂದಿತ್ತು ಎಂದು ಸೋಷಿಯಲ್ ಮೀಡಿಯಾದಲ್ಲಿ ತಿಳಿಸಿದ್ದಾರೆ.

ಪ್ರಸ್ತುತ ಏನು ನಡೆಯುತ್ತಿದೆ ಎಂಬುದು ಎಲ್ಲಾರಿಗೂ ಅರಿವಿದೆ. ನಾನು ಯಾರಿಗೂ ಸಪೋರ್ಟ್ ಮಾಡುವುದಕ್ಕೆ ಬಂದಿಲ್ಲ. ರೇಣುಕಾಸ್ವಾಮಿ ಫ್ಯಾಮಿಲಿಗೆ ದೇವರು ಆದಷ್ಟು ಶಕ್ತಿ ಕೊಡಲಿ. ಆದರೆ ಈ ರೇಣುಕಾಸ್ವಾಮಿ ಇನ್ನೂ ಒಂದಿಬ್ಬರಿಗೆ ಇದೇ ಮೆಸೇಜ್ ಕಳುಹಿಸಿದ್ದರು. ಅದಕ್ಕೆ ಸಂಬಂಧಿಸಿದಂತೆ ದೂರು ಕೂಡ ದಾಖಲಾಗಿತ್ತು. ಅವರು ಮೆಸೇಜ್ ಕಳುಹಿಸುತ್ತಿದ್ದ ಅಕೌಂಟ್ goutham_ks_1990 ಈ ಹೆಸರಿನಲ್ಲಿ ಇತ್ತು ಎಂಬುದನ್ನು ನಾನು ನ್ಯೂಸ್‌ನಲ್ಲಿ ನೋಡಿದ್ದೆ ಎಂದು ಚಿತ್ರಾಲ್ ಹೇಳಿದ್ದಾರೆ.

ಇದರ ಬಗ್ಗೆ ಏನು ಹೇಳುವುದು ಗೊತ್ತಾಗುತ್ತಿಲ್ಲ. ಅಷ್ಟೊಂದು ಚೆನ್ನಾಗಿರುವ ಹೆಂಡತಿ ಇರುವಾಗ, ಬೇರೆಯವರಿಗೆ ಈ ರೀತಿ ಮೆಸೇಜ್ ಕಳುಹಿಸುವುದು ಯಾಕೆ ಬೇಕಿತ್ತು. ಸುಮಾರು ಜನರಿಗೆ ಇದೆಲ್ಲಾ ಕಾಮನ್ ಎಂದುಕೊಳ್ಳಬಹುದು. ಆದರೆ ಆ ರೀತಿ ಮೆಸೇಜ್‌ಗಳನ್ನು ನೋಡಿದಾಗ, ಏನಪ್ಪಾ ಇದು ಥೂ ಅಂತ ಅನ್ನಿಸುತ್ತದೆ. ನಾನು ಯಾರ ಪರವಾಗಿಯೂ ಮಾತನಾಡುತ್ತಿಲ್ಲ. ಆದರೆ ಇನ್ನೊಬ್ಬರ ಪರ್ಸನಲ್ ವಿಷಯಗಳ ಬಗ್ಗೆ ಕಾಮೆಂಟ್ ಸೆಕ್ಷನ್‌ನಲ್ಲಿ ಕಾಮೆಂಟ್ ಹಾಕಿ ಜಡ್ಜ್ ಮಾಡುವುದಕ್ಕೆ ಹೋಗಬೇಡಿ. ನಿಮ್ಮ ಜೀವನವನ್ನು ನೀವು ನೋಡಿಕೊಳ್ಳಿ ಎಂದು ನಟಿ ಮಾತನಾಡಿದ್ದಾರೆ. ನನ್ನ ಬ್ಲಾಕ್ ಲಿಸ್ಟ್ ಅಲ್ಲೂ ಆ ಅಕೌಂಟ್ ಇದೆ ಎಂದರೆ, ನನಗೆ ಅದರಿಂದ ಅಶ್ಲೀಲವಾದ ಮೆಸೇಜ್ ಅಥವಾ ಫೋಟೋ ಬಂದಿದೆ. ಅದಕ್ಕೆ ಅದನ್ನು ಬ್ಲಾಕ್ ಮಾಡಿರುತ್ತೇನೆ. ಆ ಅಕೌಂಟ್‌ನಿಂದ ಅಶ್ಲೀಲವಾದ ಮೆಸೇಜ್ ಬರದೇ ನಾನು ಅದನ್ನು ಬ್ಲಾಕ್ ಮಾಡುವುದಿಲ್ಲ ಎಂದು ಚಿತ್ರಾಲ್ ತಿಳಿಸಿದ್ದಾರೆ.

ರೇಣುಕಾಸ್ವಾಮಿ ಬೇರೆ ಬೇರೆ ಅಕೌಂಟ್‌ಗಳಿಂದಲೂ ಇದನ್ನೆಲ್ಲಾ ಮಾಡುತ್ತಿದ್ದರಂತೆ. ಇವರು ಹಲವು ಬಾಯು? ನನಗೆ ಆ ರೀತಿಯ ಮೆಸೇಜ್ ಅಥವಾ ಫೋಟೋ ಕಳುಹಿಸಿದ್ದಾಗ, ನಾನು ಬ್ಲಾಕ್ ಮಾಡಿರುತ್ತೇನೆ. ಆದರೆ ಏನು ಕಳುಹಿಸಿದ್ದರು ಎಂದು ನನಗೆ ನೆನಪಾಗುತ್ತಿಲ್ಲ. ಯಾವಾಗ ಬ್ಲಾಕ್ ಮಾಡಿದ್ದೆ ಎಂಬುದು ಕೂಡ ನನಗೆ ತಿಳಿಯುತ್ತಿಲ್ಲ ಎಂದು 'ರಾಧಾ ಕಲ್ಯಾಣ' ನಟಿ ಚಿತ್ರಾಲ್ ಹೇಳಿದ್ದಾರೆ.



# ಪೈಪೋಟಿಗಿಳಿದು ಜಾಕೆಟ್ ಬಿಚ್ಚಿದ 'ಪುಷ್ಪ 2' ನಟಿ

ತೆಲುಗಿನ ಬೋಲ್ಡ್ ನಟಿ ಅನಸೂಯಾ ಭಾರದ್ವಾಜ್ ಪ್ರಸ್ತುತ 'ಪುಷ್ಪ 2' ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಈ ನಡುವೆ ಶೋವೊಂದಕ್ಕೆ ಎಂಟ್ರಿ ಕೊಟ್ಟಿದ್ದು, ಪೈಪೋಟಿ ಗೆಲ್ಲಲು ಅನಸೂಯಾ ವೇದಿಕೆ ಮೇಲೆ ಜಾಕೆಟ್ ಬಿಚ್ಚಿದ್ದಾರೆ. ಇದೀಗ 'ಕಿರಿಕ್ ಬಾಯ್ಸ್ ಕಿಲಾಡಿ ಗರ್ಲ್ಸ್' ಶೋನಲ್ಲಿ ಕಾಣಿಸಿಕೊಂಡಿದ್ದಾರೆ. ಇತ್ತೀಚೆಗೆ ಕಾರ್ಯಕ್ರಮದ ಪ್ರೋಮೋ ಬಿಡುಗಡೆಯಾಗಿದೆ. ಅದರಲ್ಲಿ, ನಟಿ ಜಾಕೆಟ್ ಬಿಚ್ಚಿ ಎಲ್ಲಾರಿಗೂ ಶಾಕ್ ನೀಡಿದ್ದಾರೆ. ನೃತ್ಯ ನಿರ್ದೇಶಕ ಶೇಖರ್ ಮಾಸ್ಟರ್ ಜೊತೆ ಅನಸೂಯಾಗೆ ಪೈಪೋಟಿಗಿಳಿದಿದ್ದಾರೆ. ವೇದಿಕೆಯಲ್ಲಿ ಶೇಖರ್ ಮಾಸ್ಟರ್ ಶರ್ಟ್ ಬಿಚ್ಚಿದ್ದಾರೆ. ಸೋಲು ಒಪ್ಪದ ಅನಸೂಯ, ತಾವು ಧರಿಸಿದ ಜಾಕೆಟ್ ಕಳಚಿ ನಾನೂ ಯಾವುದಕ್ಕೂ ಹಿಂದೆ ಸರಿಯಲ್ಲ ಅಂತ ಪ್ರೂವ್ ಮಾಡಿದ್ದಾರೆ. ಅನಸೂಯಗೆ ತೆಲುಗಿನಲ್ಲಿ ಹೇಳಿಕೊಳ್ಳುವಂತಹ ಅವಕಾಶವೇನು ಸಿಕ್ಕಿಲ್ಲ. 'ಪುಷ್ಪ 2 ಸಿನಿಮಾ ಬಿಟ್ಟರೇ ಬೇರೆ ಚಿತ್ರಗಳು ಅವರ ಕೈಯಲಿಲ್ಲ.

# ಸೋನಾಕ್ಷಿ ಸಿನ್ಹಾ, ಝುಹೀರ್ ಆರತಕ್ಷತೆಯಲ್ಲಿ ಬಾಲಿವುಡ್ ಸೆಲೆಬ್ರಿಟೀಸ್

ಬಾಲಿವುಡ್ ಬೆಡಗಿ ಸೋನಾಕ್ಷಿ ಸಿನ್ಹಾ ಜೂನ್ 23ರಂದು ಝುಹೀರ್ ಇಕ್ಬಾಲ್ ಜೊತೆ ಸರಳವಾಗಿ ಮದುವೆಯಾದರು. ನಟಿಯ ಆರತಕ್ಷತೆ ಸಂಭ್ರಮದಲ್ಲಿ ಬಾಲಿವುಡ್ ನಟ-ನಟಿಯರು ಭಾಗಿಯಾಗಿ ಶುಭಹಾರೈಸಿದರು. 7 ವರ್ಷಗಳ ಪ್ರೀತಿಗೆ ಸೋನಾಕ್ಷಿ, ಝುಹೀರ್ ಮದುವೆಯ ಮುದ್ರೆ ಒತ್ತಿದ್ದಾರೆ. ಸೋನಾಕ್ಷಿ ಮದುವೆ ಆರತಕ್ಷತೆಯಲ್ಲಿ ಹಿರಿಯ ನಟ ಅನಿಲ್ ಕಪೂರ್ ಡ್ಯಾನ್ಸ್ ಮಾಡಿದ್ದಾರೆ. ನಟಿ ಅದಿತಿ ರಾವ್ ಹೈದರಿ ಜೊತೆ ತಮಿಳು ನಟ ಸಿದ್ಧಾರ್ಥ್‌ಕೂಡ ಈ ಕಾರ್ಯಕ್ರಮಕ್ಕೆ ಹಾಜರಿ ಹಾಕಿದ್ದಾರೆ. ಇವರ ಜೊತೆ ಹಿರಿಯ ನಟಿ ರೇಖಾ ಕೂಡ ಫೋಟೋಗೆ ಪೋಸ್ ನೀಡಿದ್ದಾರೆ. ಈ ಕಾರ್ಯಕ್ರಮದಲ್ಲಿ ರವೀನಾ ಟಂಡನ್, ಕಾಜೋಲ್, ವಿದ್ಯಾ ಬಾಲನ್, ಡೈಸಿ ಷಾ, ಆದಿತ್ಯಾ ರಾಯ್ ಕಪೂರ್, ಹುಮಾ ಖುರೇಶಿ, ಟಬು, ಖ್ಯಾತ ನಟ ಸಲ್ಮಾನ್ ಖಾನ್ ಸೇರಿದಂತೆ ಅನೇಕರು ಭಾಗವಹಿಸಿದ್ದಾರೆ.



**7 ವರ್ಷಗಳ ಪ್ರೀತಿ**

# ಬೆಂಗಳೂರಿನಲ್ಲಿ ಪ್ರಭಾಸ್ ಚಿತ್ರಕ್ಕೆ ಬೇಡಿಕೆ

ಪ್ರಭಾಸ್, ದೀಪಿಕಾ ಪಡುಕೋಣೆ ನಟನೆಯ 'ಕಲ್ಕಿ 2898 ಎಡಿ' ಸಿನಿಮಾ ಇದೇ ಜೂನ್ 27ಕ್ಕೆ ರಿಲೀಸ್ ಆಗಲಿದೆ. ಕನ್ನಡ, ತೆಲುಗು ಸೇರಿದಂತೆ ಬಹುಭಾಷೆಗಳಲ್ಲಿ ಸಿನಿಮಾ ಮೂಡಿ ಬರಲಿದೆ. ಈಗಾಗಲೇ ಅಡ್ವಾನ್ಸ್ ಬುಕ್ಕಿಂಗ್ ಕೂಡ ಶುರುವಾಗಿದೆ.

ಮಲ್ಟಿಸ್ಟಾರ್ ಸಿನಿಮಾ ಆಗಿರುವ 'ಕಲ್ಕಿ' ಚಿತ್ರದ ಬಗ್ಗೆ ಫ್ಯಾನ್ಸ್ ಭಾರೀ ಕ್ರೇಜ್ ಇದೆ. ಇನ್ನೂ ಬೆಳ್ಳಂಬೆಳಗ್ಗೆ ಸಾಕಷ್ಟು ಕಡೆ ಸಿನಿಮಾದ ಮೊದಲ ಪ್ರದರ್ಶನ ಆರಂಭವಾಗಿದೆ. ಚಿತ್ರಕ್ಕೆ ಭಾರೀ ಕ್ರೇಜ್ ಇದೆ ಎಂಬ ಕಾರಣಕ್ಕೆ ಟಿಕೆಟ್ ದರ ಕೂಡ ಹೆಚ್ಚಿಸಲಾಗಿದೆ.

ಇದೀಗ ಟಿಕೆಟ್ ದರವನ್ನು 400 ರೂ.ಯಿಂದ 700 ರೂ.ವರೆಗೆ ಹೆಚ್ಚಿಸಲಾಗಿದೆ. ಇನ್ನೂ ಟಿಕೆಟ್ ದರ ಹೆಚ್ಚಿಸಲಿದ್ದಾರೆ ಎನ್ನಲಾಗಿದೆ. ಬಾಹುಬಲಿ ಸಿನಿಮಾ ಬಳಿಕ ಮತ್ತೆ ಅದೇ ರೀತಿ ಕಲ್ಕಿ ಚಿತ್ರದ ಬಗ್ಗೆ ಫ್ಯಾನ್ಸ್ ಗೆ ನಿರೀಕ್ಷೆ ಹೆಚ್ಚಿಸಿದೆ.

ಇನ್ನೂ ಚಿತ್ರದಲ್ಲಿ ಭೂತ, ವರ್ತಮಾನ ಹಾಗೂ ಭವಿಷ್ಯದ ಕಥೆಯನ್ನು ಡೈರೆಕ್ಟರ್ ನಾಗ್ ಅಶ್ವೀನ್ ಕಟ್ಟಿಕೊಟ್ಟಿದ್ದಾರೆ. ಚಿತ್ರದ ಟ್ರೈಲರ್ ಝಲಕ್‌ನಲ್ಲೇ ಆ ಸುಳಿವು ಬಿಟ್ಟು ಕೊಟ್ಟಿದ್ದಾರೆ. ಜಗತ್ತಿನ ಮೊದಲ ಪ್ರದೇಶ ಮತ್ತು ಕೊನೆಯ ಪ್ರದೇಶ ಕಾಶಿ ಎನ್ನುವ ಮೂಲಕ ಕಲ್ಕಿ ಟ್ರೈಲರ್ ಶುರು ವಾಗುತ್ತೆ. ಜಗತ್ತಿನಿಂದ ಎಲ್ಲಾವನ್ನೂ ಕಿತ್ತುಕೊಂಡರೆ ಎಲ್ಲಾವೂ ಇರುತ್ತದೆ ಎನ್ನುವ ಕುತೂಹಲಕರ ಸಂಭಾಷಯಣೆಯಿದೆ. 6000 ಹಿಂದಿನ ಶಕ್ತಿ ಮತ್ತೆ ಬಂದಿದೆ. ಅಳಿವು- ಉಳಿವಿಗಾಗಿ ಹೋರಾಡುವವರ ದೃಶ್ಯ ತೋರಿಸಲಾಗಿದೆ. ಭೈರವನಾಗಿ ಯುದ್ಧಕ್ಕೆ ಪ್ರಭಾಸ್ ಸಜ್ಜಾಗಿದ್ದಾರೆ. 2 ಜಗತ್ತಿನ ಹೋರಾಟವನ್ನು ಸೈನ್ಸ್ ಫಿಕ್ಷನ್ ಮೂಲಕ ಅದ್ಭುತವಾಗಿ ತೋರಿಸಿದ್ದಾರೆ.

ಯುದ್ಧದಲ್ಲಿ ಇದುವರೆಗೂ ನಾನು ಸೋತಿಲ್ಲ, ಇದನ್ನೂ ಸಹ ನಾನು ಸೋಲಲ್ಲ ಎಂದು ಖಡಕ್ ಆಗಿ ಡೈಲಾಗ್ ಹೊಡೆದಿದ್ದಾರೆ. ಪ್ರಭಾಸ್ ಜೊತೆ ದೀಪಿಕಾ, ದಿಶಾ ಪಟಾನಿ ಮಿಂಚಿದ್ದಾರೆ. ಅಮಿತಾಭ್, ಕಮಲ್ ಹಾಸನ್ ಕೂಡ ವಿಭಿನ್ನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.





# 250 ಕೋಟಿ ಸಾಲದ ಸುಳಿಯಲ್ಲಿ ರಕುಲ್ ಪ್ರೀತ್ ಸಿಂಗ್ ಪತಿ

ಬಾಲಿವುಡ್ ಬೆಡಗಿ ರಕುಲ್ ಪ್ರೀತ್ ಸಿಂಗ್ ಪತಿ ಜಾಕಿ ಭಗ್ನಾನಿಗೆ ಸಂಕಷ್ಟ ಎದುರಾಗಿದೆ. ಮದುವೆಯಾಗಿ ಜಾಕಿ ಮನೆಗೆ ಕಾಲಿಟ್ಟ ಬೆನ್ನಲ್ಲೇ ನಟಿಯ ಕುಟುಂಬಕ್ಕೆ ಆರ್ಥಿಕ ಸಂಕಷ್ಟ ಎದುರಾಗಿದೆ. ಒಂದಲ್ಲ, ಎರಡಲ್ಲ ಬರೋಬ್ಬರಿ 250 ಕೋಟಿ ರೂ. ಸಾಲದ ಸುಳಿಯಲ್ಲಿ ಭಗ್ನಾನಿ ಕುಟುಂಬ ಸಿಲುಕಿದ್ದಾರೆ.

ನಟಿ ರಕುಲ್ ಮಾವ ವಶು ಭಗ್ನಾನಿ ನೇತೃತ್ವದ ಪೂಜಾ ಎಂಟೈನ್‌ಮೆಂಟ್ ಸಂಸ್ಥೆ ಅಡಿ ಕಳೆದ 30 ವರ್ಷಗಳಿಂದ ಸಾಕಷ್ಟು ಸಿನಿಮಾಗಳನ್ನು ನಿರ್ಮಾಣ ಮಾಡುತ್ತಾ ಬಂದಿದೆ. ಸಾಕಷ್ಟು ಹಿಟ್ ಸಿನಿಮಾಗಳನ್ನು ಕೊಟ್ಟಿದೆ. ಆದರೆ ಇತ್ತೀಚೆಗೆ ನಿರ್ಮಾಣ ಮಾಡಿದ 2 ಸಿನಿಮಾಗಳಿಂದ ಭಗ್ನಾನಿ ಕುಟುಂಬಕ್ಕೆ ನಷ್ಟವಾಗಿದೆ.

ಕಳೆದ ವರ್ಷ ಅಕ್ಟೋಬರ್‌ನಲ್ಲಿ ತೆರೆಕಂಡ 'ಗಣಪತ್' ಸಿನಿಮಾವನ್ನು ವಿಕಾಸ್ ಬಹ್ಲ್ ನಿರ್ದೇಶನ ಮಾಡಿದ್ದರೆ, ಟೈಗರ್ ಶ್ರಾಫ್ ಇದರ ಹೀರೋ ಆಗಿದ್ದರು. ಅದರಲ್ಲಿ ಬಿಗ್ ಬಿ ಪ್ರಮುಖ ಪಾತ್ರ ಮಾಡಿದ್ದರು. 190 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗಿದ್ದ ಈ ಸಿನಿಮಾವು ಕಲೆಕ್ಷನ್ ಮಾಡಿದ್ದು 15+ ಕೋಟಿ ರೂ. ಮಾತ್ರ ಗಳಿಸಿದೆ.

ಪೂಜಾ ಎಂಟರ್‌ಟೇನ್‌ಮೆಂಟ್ ಸಂಸ್ಥೆ ಚೇತರಿಸಿಕೊಳ್ಳುವುದಕ್ಕೂ ಸಮಯ ನೀಡಲಿಲ್ಲ 'ಬಡೆ ಮಿಯಾ ಚೋಟೆ ಮಿಯಾ' ಸಿನಿಮಾ. ಇದರಲ್ಲಿ ಅಕ್ಷಯ್ ಕುಮಾರ್, ಟೈಗರ್ ಶ್ರಾಫ್ ನಟಿಸಿದ್ದರು. 300 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾದ ಈ ಸಿನಿಮಾ ಕೇವಲ 100 ಕೋಟಿ ರೂ. ಕಲೆಕ್ಷನ್ ಮಾಡೋದ್ರಲ್ಲಿ ಸೋಸಿತ್ತು. ಈ ಪರಿಣಾಮ, ಭಗ್ನಾನಿ ಕುಟುಂಬವು ಈಗ ಸಂಕಷ್ಟ ಎದುರಿಸುತ್ತಿದೆ. ಅದಕ್ಕಾಗಿ ಪೂಜಾ ಎಂಟೈನ್‌ಮೆಂಟ್ ಸಂಸ್ಥೆಯ 7 ಅಂತಸ್ತಿನ ಕಚೇರಿಯನ್ನೇ ಮಾಡಲಾಗಿದೆ ಎನ್ನಲಾಗಿದೆ. ಇದಷ್ಟೇ ಅಲ್ಲ, 80% ಉದ್ಯೋಗಿಗಳನ್ನು ಮನೆಗೆ ಕಳುಹಿಸಲಾಗಿದೆ. ಇದುವರೆಗೂ ಮಾಡಿದ ಕೆಲಸಕ್ಕೆ 2 ತಿಂಗಳಿನಿಂದ ಉದ್ಯೋಗಿಗಳಿಗೆ ಸರಿಯಾದ ಸಂಬಳ ನೀಡಿಲ್ಲ. ಇದರಿಂದ ನೌಕರರು ಸಾಮಾಜಿಕ ಜಾಲತಾಣದಲ್ಲಿ ಆಕ್ರೋಶ ಹೊರಗೆ ಹಾಕಿದ್ದಾರೆ. ಭಗ್ನಾನಿ ಕುಟುಂಬದ ವಿರುದ್ಧ ತಿರುಗಿ ಬಿದ್ದಿದ್ದಾರೆ.


Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA,
No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966